ಬೆಂಗಳೂರು ಸಂಪುಟ: 16 ಸಂಚಿಕೆ: 47 ಪುಟ: 06 ಶುಕ್ರವಾರ 10-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಸ್ಮಿತಾರನ್ನ ರಿಜೆಕ್ಟ್ ಮಾಡಿದ್ದ ನಿರ್ದೇಶಕ ಭಾರತಿರಾಜ

'ಪರಿಸ್ಥಿತಿಯನ್ನು ಮತ್ತಷ್ಟು ಕೆಟ್ಟದಾಗಿ ಮಾಡಿದ್ದಾರೆ'

ಮತ್ತೆ ಬಂದ 'ಹೆಬ್ಬಾ ಪಟೇಲ್' ಪುಟ 6

## ಕಂದಾಯ ಇಲಾಖೆಯಲ್ಲಿ ಎಸಿ ಪೋಸ್ಟ್‌ಗೆ ಎಷ್ಟು ದುಡ್ಡು ತೆಗೆದುಕೊಳ್ಳುತ್ತಿದ್ದೀರಿ ಗೊತ್ತಾ?

# ಸಹಿ ಮಾರಾಟಕ್ಕಿಟ್ಟಿದೆ!

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರಕಾರದಲ್ಲಿ ಪ್ರತಿಯೊಂದಕ್ಕೆ ರೇಟ್ ಕಾರ್ಡ್ ಫಿಕ್ಸ್ ಆಗಿದೆ . ಕಂದಾಯ ಇಲಾಖೆಯಲ್ಲಿ ಎಲ್ಲಾ ಪೋಸ್ಟ್ ಗಳಿಗೂ ರೇಟ್ ನಿಗದಿ ಮಾಡಲಾಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ನೇರ ಆರೋಪ ಮಾಡಿದರು.

ಬೆಂಗಳೂರಿನಲ್ಲಿ ಶನಿವಾರ ಬೆಳಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು, 60% ಕಮೀಷನ್ ಆರೋಪವನ್ನು ಪುನರುಚ್ಚರಿಸಿದರು.

60% ಕಮೀಷನ್ ಆರೋಪಕ್ಕೆ ಕುಮಾರಸ್ವಾಮಿ ದಾಖಲೆ ಕೊಡಲಿ ಎಂದು ಹೇಳುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಮುಖಂಡರು, ಗುತ್ತಿಗೆದಾರರೇ ಪರ್ಸಂಟೇಜ್ ಆರೋಪ ಮಾಡುತ್ತಿದ್ದಾರೆ. ಅವರನ್ನು ಪರ್ಸಂಟೇಜ್ ಕೇಳದಿದ್ದರೆ ಅವರು ಯಾಕೆ ಆರೋಪ ಮಾಡುತ್ತಿದ್ದರು. ಸರ್ಕಾರ ಅವರನ್ನೇ ಕೇಳಿ ದಾಖಲೆ ಪಡೆದುಕೊಳ್ಳಬೇಕು ಎಂದರು ಕೇಂದ್ರ ಸಚಿವರು.

ಸಿದ್ದರಾಮಯ್ಯ ಅವರು ಮಹಾನ್ ನಾಯಕರು. ಪೇ ಸಿಎಂ ಅಂತ ಪೋಸ್ಟರ್ ಅಂಟಿಸಲು ಹೋಗಿದ್ದರು. ಅವರು ಇಲ್ಲಿಯವರೆಗೆ ಯಾವ ದಾಖಲೆ ಇಟ್ಟಿದ್ದಾರೆ ಜನರ ಮುಂದೆ. ಕೆಂಪಣ್ಣ ಹೇಳಿದರು ಕೆಂಪಣ್ಣ ಹೇಳಿದರು ಎಂದು ಸಿದ್ದರಾಮಯ್ಯ ಹೇಳುತ್ತಾರೆ. ಆದರೆ, ಕೆಂಪಣ್ಣ ಅವರಿಂದ ಸಿದ್ದರಾಮಯ್ಯ ಅವರು ದಾಖಲೆ ಪಡೆದುಕೊಳ್ಳಬೇಕಿತ್ತಲ್ಲವೇ? ಈಗ ಕಂಟ್ರಾಕ್ಟರ್ ಗಳೇ 60% ವಸೂಲಿ ಬಗ್ಗೆ ಆರೋಪ ಮಾಡುತ್ತಿದ್ದಾರೆ. ಅದಕ್ಕಿಂತ ಸಾಕ್ಷಿ ಬೇಕಾ ಇವರಿಗೆ? ಈ ಆಟ ಸರಕಾರ ಬಿಡಬೇಕು ಎಂದು ಕುಮಾರಸ್ವಾಮಿ ಅವರು ವಾಗ್ದಾಳಿ ನಡೆಸಿದರು.

**ಕೃಷ್ಣಭೈರೇಗೌಡ ವಿರುದ್ಧ ಕುಮಾರಸ್ವಾಮಿ ವಾಗ್ದಾಳಿ:**



ಮಗ ಸೋತಿರುವುದಕ್ಕೆ ಹತಾಶರಾಗಿ ಕುಮಾರಸ್ವಾಮಿ 60% ಆರೋಪ ಮಾಡುತ್ತಿದ್ದಾರೆ ಎಂದು ಸಚಿವ ಕೃಷ್ಣಭೈರೇಗೌಡ ಹೇಳಿದ್ದಾರೆ. ನಾನು ಮಗ ಸೋತಿರುವುದಕ್ಕೆ ಹತಾಶನಾಗಿದ್ದೇನೋ ಇಲ್ಲವೋ. ಎಂಬುದ್ದು ಇರಲಿ. ಅದನ್ನು ಬಿಟ್ಟು ಮೊದಲು 60% ಕಮೀಷನ್ ಬಗ್ಗೆ ಉತ್ತರ ಹೇಳಲಿ ಎಂದು ಸಚಿವರು ಸವಾಲು ಹಾಕಿದರು.

ಕಂದಾಯ ಇಲಾಖೆ ಸತ್ಯ ಮಾರ್ಗದಲ್ಲಿ ನಡೆಯುತ್ತಿದೆಯಾ? ಬೆಂಗಳೂರು ಎಸಿ ಪೋಸ್ಟ್ ಗೆ ಎಷ್ಟು ದುಡ್ಡು ತೆಗೆದುಕೊಳ್ಳುತ್ತಿದ್ದೀರಿ? ಎಷ್ಟು ರೇಟ್ ಫಿಕ್ಸ್ ಮಾಡಿಕೊಂಡಿದ್ದೀರಾ? ಆ ಹಣ ಯಾರು ಯಾರಿಗೆ ಹೋಗುತ್ತದೆ? ಏನೇನು ದಂಧೆ ನಡೆಸುತ್ತಿದ್ದೀರಿ ಎನ್ನುವುದು ನಮಗೆ ಗೊತ್ತಿಲ್ಲವಾ? ಎಂದು ಕಂದಾಯ ಇಲಾಖೆಯಲ್ಲಿ ಅಕ್ರಮ ನಡೆಯುತ್ತಿದೆ ಎಂದು ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.

**ಸರಕಾರ ಸಹಿ ಮಾರಾಟಕ್ಕೆ ಇಟ್ಟಿದೆ:** ನಾನು ಕೂಡ ಎರಡು ಸಿಎಂ ಆಗಿ ಅಧಿಕಾರ ನಡೆಸಿದ್ದೇನೆ. ನಾನು ಹರಿಶ್ಚಂದ್ರ ಎಂದು ಎಲ್ಲೂ ಹೇಳಿಲ್ಲ. ವಿಧಾನಸಭೆಯಲ್ಲಿಯೇ ಈ ಮಾತು ಹೇಳಿದ್ದೇನೆ. ಚುನಾವಣೆ ನಡೆಸಬೇಕಾದರೆ ಇನ್ನೊಬ್ಬರ ಹತ್ತಿರ ಕೈ ಚಾಚಲೇಬೇಕು. ಆದರೆ ನಾನು ಅಧಿಕಾರ ನಡೆಸುವಾಗ ನನ್ನ ಸಹಿಯನ್ನು ಮಾರಾಟಕ್ಕೆ ಇಟ್ಟಿರಲಿಲ್ಲ. ಈ ಸರಕಾರ ಪ್ರತಿಯೊಂದಕ್ಕೂ ಸಹಿಯನ್ನು ಮಾರಾಟಕ್ಕೆ ಇಟ್ಟಿದೆ. ಪ್ರತಿಯೊಂದಕ್ಕೂ ಲೂಟಿ ಹೊಡೆದುಕೊಂಡು ಕೂತಿದ್ದಾರೆ. ಈ ಸರಕಾರದಲ್ಲಿ ರೇಟ್ ಕಾರ್ಡ್ ಮೊದಲೇ ಫಿಕ್ಸ್ ಆಗಿ ಹೋಗಿದೆ. ನಾನು ಪ್ರಾರಂಭದಲ್ಲೇ ಈ ಸರ್ಕಾರದ ರೇಟ್ ಕಾರ್ಡ್ ಬಗ್ಗೆ ಹೇಳಿದ್ದೆ ಎಂದು ಕುಮಾರಸ್ವಾಮಿ ಅವರು ಕಿಡಿಕಾರಿದರು.

ನಾನು ಸತ್ಯ ಹರಿಶ್ಚಂದ್ರ ಎಂದು ಎಲ್ಲೂ ಹೇಳಿಲ್ಲ. ಇವತ್ತಿನ ರಾಜಕಾರಣಕ್ಕೆ ದುಡ್ಡು ಬೇಕು. ಪ್ರೀತಿ ವಿಶ್ವಾಸದಿಂದ ನಾವು ಕೆಲಸ ಮಾಡಿದಾಗ ಚುನಾವಣೆ ಪುಟ 2



ಮೈಸೂರು ಅಭಿವೃದ್ಧಿ ಸಂಬಂಧ ಜಿಲ್ಲೆಯ ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರುಗಳ ಜೊತೆ ಗೃಹ ಕಚೇರಿ ಕೃಷ್ಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚರ್ಚೆ ನಡೆಸಿದರು.

# ನನ್ನ ರಕ್ಷಣೆಗೆ, ಮನಸ್ಸಿನ ನೆಮ್ಮದಿಗೆ ಹೋಮ ನೆರವೇರಿಸಿರುವೆ: ಡಿಸಿಎಂ

**ಬೆಂಗಳೂರು:** "ನನ್ನ ರಕ್ಷಣೆಗಾಗಿ, ಮನಸ್ಸಿನ ನೆಮ್ಮದಿಗೆ, ಸಮಾಧಾನಕ್ಕಾಗಿ ಹೋಮ ಮಾಡಿಸಿದ್ದೇನೆ. ನಾನು ಪ್ರತಿದಿನವೂ ಪೂಜೆ, ಹೋಮ, ದೇವರ ದರ್ಶನ ಮಾಡುವ ವ್ಯಕ್ತಿ" ಎಂದು ಹೇಳಿದರು.

ವೈಕುಂಠ ಏಕಾದಶಿಯ ಪ್ರಯುಕ್ತ ಮಲ್ಲೇಶ್ವರದ ವೆಂಕಟೇಶ್ವರ ದೇಗುಲದಲ್ಲಿ ದೇವರ ದರ್ಶನದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು. ಗುರುವಾರ ತಮಿಳುನಾಡಿನ ದೇವಸ್ಥಾನಗಳಲ್ಲಿ ಹೋಮ ಮಾಡಿಸಿರುವ ಬಗ್ಗೆ ಕೇಳಿದಾಗ, "ದೇವರ ಮೇಲೆ ನಂಬಿಕೆಯಿಟ್ಟಿರುವ ವ್ಯಕ್ತಿ ನಾನು. ನನಗೆ ಧರ್ಮ, ದೇವರು, ನಮ್ಮ ಆಚರಣೆಗಳ ಮೇಲೆ ನಂಬಿಕೆಯಿದೆ. ಪುಟ 2



## ವಾರ್ಡನ್‌ಗೆ ತರಾಟೆ ತೆಗೆದುಕೊಂಡ ದರ್ಶನ್ ಪುಟ್ಟಣ್ಣಯ್ಯ



**ಮಂಡ್ಯ:** ತಣ್ಣೂರಿನ ಮೋರಾರ್ಜಿ ಏಸಾಯಿ ವಸತಿ ಶಾಲೆಯ ವಾರ್ಡನ್‌ಗೆ ಶಾಸಕರು ತರಾಟೆಗೆ ತೆಗೆದುಕೊಂಡಿರುವ ಘಟನೆ ಮಂಡ್ಯ ತಾಲ್ಲೂಕಿನ ನಾಗಮಂಗಲ ತಾಲ್ಲೂಕಿನಲ್ಲಿ ನಡೆದಿದೆ.

ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರು ರಾತ್ರಿ ಏಕಾಏಕಿ ವಸತಿ ಶಾಲೆಗೆ ಭೇಟಿ ನೀಡಿದ್ದು, ಈ ವೇಳೆ ವಾರ್ಡನ್ ಇಲ್ಲದಿರುವುದನ್ನು ಗಮನಿಸಿದ ಶಾಸಕರು ಹಿಗ್ಗಾಮುಗ್ಗಾ ಬೈದಿದ್ದು, ಅವರ ಕರ್ತವ್ಯಲೋಪಕ್ಕೆ ಬೇಸರ ವ್ಯಕ್ತಪಡಿಸಿದ್ದಾರೆ.

ನಂತರ ಅಲ್ಲಿನ ಅವ್ಯವಸ್ಥೆಯ ಬಗ್ಗೆ ಮಕ್ಕಳೊಂದಿಗೆ ಮಾತನಾಡಿ ವಿವರ ಪಡೆದುಕೊಂಡಶಾಕಸರು, ಅಲ್ಲಿನ ಅವ್ಯವಸ್ಥೆಯ ಕುರಿತು ಎಲ್ಲಾ ವಿವರವನ್ನು ಕಲೆಹಾಕಿದ್ದಾರೆ. ಹಾಸ್ಟೆಲ್ ವಾರ್ಡನ್ ಯಾವಾಗಲೋ ಒಮ್ಮೆ ಬರುತ್ತಾನಂತೆ ಮತ್ತು ಮಕ್ಕಳನ್ನು ನೋಡಿಕೊಳ್ಳಲು ತನ್ನ ತಾಯಿಯನ್ನು ಅಲ್ಲಿ ಬಿಟ್ಟಿದ್ದಾನಂತೆ. ಈಯಮ್ಮ ಮಕ್ಕಳಿಗೆ ಮನಬಂದಂತೆ ಬಯ್ಯುತ್ತಾಳೆ ಮತ್ತು ಗದರುತ್ತಾಳೆ ಎಂದು ಮಕ್ಕಳು ಶಾಸಕರ ಬಳಿ ಹೇಳಿಕೋಂಡರು. ನಂತರ ವಾರ್ಡನ್‌ಗೆ ಫೋನಾಯಿಸಿ ಮಾತನಾಡಿದ ಅವರು, ಇನ್ನೊಮ್ಮೆ ಇಲ್ಲಿಗೆ ಬರಬೇಡ. ಎಲ್ಲಿದ್ದೀಯೋ ಅಲ್ಲೇ ಇರಿ. ನಿಮ್ಮ ಅವಶ್ಯಕತೆ ನಮಗಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

# ನಕ್ಸಲರ ಶಸ್ತ್ರಾಸ್ತ್ರ ಹುಡುಕಾಟ

**ಬೆಂಗಳೂರು:** ನಾಲ್ಕು ರಾಜ್ಯಗಳಿಗೆ ಬೇಕಾಗಿದ್ದ ಆರು ಮಂದಿ ನಕ್ಸಲರು ಶರಣಾದ ಬೆನ್ನಲ್ಲೇ ಸರ್ಕಾರಕ್ಕೆ ಮತ್ತೊಂದು ತಲೆನೋವು ಎದುರಾಗಿದೆ.

ನಕ್ಸಲರು ಶರಣಾಗುವ ವೇಳೆ ಶಸ್ತ್ರಾಸ್ತ್ರಗಳನ್ನು ಒಪ್ಪಿಸದೇ ಇರುವುದು ಗೃಹ ಇಲಾಖೆಗೆ ನುಂಗಲಾರದ ಬಿಸಿ ತುಪ್ಪವಾಗಿದೆ.

ಇನ್ನೇನು ರಾಜ್ಯ ನಕ್ಸಲ್ ಮುಕ್ತವಾಯಿತು ಎಂದು ನಿಟ್ಟುಸಿರು ಬಿಡುವ ಮುನ್ನವೇ ಶಸ್ತ್ರಾಸ್ತ್ರದ ಅಸ್ತ್ರ ಎದುರಾಗಿದೆ.

ನಕ್ಸಲರು ಶರಣಾಗುವಾಗ ತಮ್ಮ ಶಸ್ತ್ರಾಸ್ತ್ರಗಳನ್ನು ಸರ್ಕಾರಕ್ಕೆ ಒಪ್ಪಿಸದೇ ಇರುವುದು ನಕ್ಸಲ್ ಚಟುವಟಿಕೆ ಇನ್ನೂ ಜೀವಂತವಾಗಿದೆಯೇ ಎಂಬ ಹಲವಾರು ಪ್ರಶ್ನೆಗಳಿಗೆ ಕಾರಣವಾಗಿದೆ.

ಈ ವಿಷಯವನ್ನು ಪ್ರತಿಪಕ್ಷಗಳು ಪ್ರಸ್ತಾಪಿಸಿ ನಕ್ಸಲರ ಶಸ್ತ್ರಾಸ್ತ್ರಗಳು ಎಲ್ಲಿ ಎಂದು ಸರ್ಕಾರವನ್ನು



ಪ್ರಶ್ನಿಸುತ್ತಿದ್ದಾರೆ. ಇದು ದಿನೆ ದಿನೇ ಹೊಸ ಸ್ವರೂಪ ಪಡೆದುಕೊಳ್ಳುತ್ತಿದೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ ಈಗ ನಕ್ಸಲರ ಶಸ್ತ್ರಾಸ್ತ್ರಗಳ ಪತ್ತೆಗೆ ಮುಂದಾಗಿದೆ.

ಈ ಸಂಬಂಧ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿರುವ ಗೃಹಸಚಿವಜಿ.ಪರಮೇಶ್ವರ್ ಅವರು, ಕೂಡಲೇ ಶಸ್ತ್ರಾಸ್ತ್ರಗಳನ್ನು ಪತ್ತೆಹಚ್ಚುವಂತೆ ತಾಕೀತು ಮಾಡಿದ್ದಾರೆ.

ಗೃಹ ಇಲಾಖೆಯ ಸೂಚನೆ ಮೇರೆಗೆ ಪೊಲೀಸ್ ಇಲಾಖೆ ಶಸ್ತ್ರಾಸ್ತ್ರ ಹುಡುಕಾಟದಲ್ಲಿ ತೊಡಗಿದೆ.

ನಕ್ಸಲರು ತಮ್ಮ ಶಸ್ತ್ರಾಸ್ತ್ರಗಳನ್ನು ಎಲ್ಲಿಯಾದರೂ ಮುಚ್ಚಿಟ್ಟಿದ್ದಾರೆಯೇ, ಅಥವಾ ಕಾಣೆಯಾಗಿರುವ ಮತ್ತೊಬ್ಬ ನಕ್ಸಲನ ಬಳಿ ಇವೆಯೇ ಎಂಬ ಹಲವಾರು ಪ್ರಶ್ನೆಗಳು ಎದ್ದಿದ್ದು ಇವುಗಳಿಗೆ ಇಲಾಖೆ ಉತ್ತರಿಸಲು ತೀವ್ರ ತನಿಖೆಯಲ್ಲಿ ತೊಡಗಿದೆ. ಇದರ ಹೊಣೆಗಾರಿಕೆ ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್‌ಮೋಹನ್ ಅವರ ಹೆಗಲಿಗೆ ಬಿದ್ದಿದ್ದು, ಅಲೋಕ್ ಅವರು ವಿಶೇಷ ಶಸ್ತ್ರಾಸ್ತ್ರ ಪತ್ತೆಗಾಗಿ ತಂಡ ರಚಿಸಿದ್ದಾರೆ. ಈ ಕುರಿತು ಮಾತನಾಡಿರುವ ಗೃಹ ಸಚಿವ ಜಿ.ಪರಮೇಶ್ವರ್, "ಶರಣಾಗತರಾದ ನಕ್ಸಲರು ಪುಟ 2

# ಡಿ. ಕೃಷ್ಣಕುಮಾರ್‌ಗೆ ಐತಿಹಾಸಿಕ ಗೆಲುವು

**ತುಮಕೂರು:** ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟಕ್ಕೆ ನಡೆದ ಆಡಳಿತ ಮಂಡಳಿ ಚುನಾವಣೆಯಲ್ಲಿ ಕುಣಿಗಲ್ ಮತಕ್ಷೇತ್ರದಿಂದ ಸ್ಪರ್ಧಿಸಿದ್ದ ಬಿಜೆಪಿ-ಜೆಡಿಎಸ್ ಮೈತ್ರಿ ಬೆಂಬಲಿತ ಅಭ್ಯರ್ಥಿ ಡಿ.ಕೃಷ್ಣಕುಮಾರ್ ಅವರು ಪ್ರಚಂಡ ಬಹುಮತಗಳಿಂದ ಗೆಲುವು ಸಾಧಿಸಿದ್ದಾರೆ.

ಚಲಾವಣೆಯಾದ 141 ಮತಗಳಲ್ಲಿ 126 ಮತಗಳನ್ನು ಪಡೆದು ಜಯಶಾಲಿಯಾಗಿದ್ದಾರೆ. ಇವರ ಪ್ರತಿಸ್ಪರ್ಧಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಕೆ.ಎಂ. ಮಾಸ್ತಿ ಕರೀಗೌಡ ಅವರು 15 ಮತಗಳಿಸುವ ಮೂಲಕ ಹೀನಾಯ ಸೋಲು ಅನುಭವಿಸಿದ್ದಾರೆ.

ಗುರುವಾರ ಮತ ಎಣಿಕೆ ನಡೆದು ಕೃಷ್ಣಕುಮಾರ್ ಅವರ ಆಯ್ಕೆ ಅಧಿಕೃತವಾಗಿ ಘೋಷಣೆಯಾಗಿದೆ. ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಕರೀಗೌಡ ಅವರನ್ನು ಗೆಲ್ಲಿಸಿಕೊಳ್ಳಲು ಶಾಸಕ ಡಾ.ರಂಗನಾಥ್ ಅವರು

ಶತಾಯ-ಗತಾಯ ಹೋರಾಟ ನಡೆಸಿದರಾದರೂ ಅವರ ತಂತ್ರಗಾರಿಕೆ ಫಲಕೊಡಲಿಲ್ಲ. ಪುಟ 2



## ಆಶಾ ಕಾರ್ಯಕರ್ತರ ಬೀದಿಗೆ ತಂದ ಸರ್ಕಾರ

**ಬೆಂಗಳೂರು:** ಚುನಾವಣೆಗೂ ಮುನ್ನ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಬಿಸಿಯೂಟ ಕಾರ್ಯಕರ್ತೆಯರ ಉದ್ಧಾರ ಮಾಡುವುದಾಗಿ ಸುಳ್ಳು ಆಶ್ವಾಸನೆ ಕೊಟ್ಟಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೀಗ ಅವರನ್ನು ಬೀದಿಗೆ ತಂದು ನಿಲ್ಲಿಸಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ್ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಈ ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಕಳೆದ ಮೂರು ದಿನಗಳಿಂದ ಕೊರೆಯುವ ಚಳಿಯಲ್ಲೂ ಫ್ರೀಡಂಪಾರ್ಕ್‌ನಲ್ಲಿ ಆಶಾ ಕಾರ್ಯಕರ್ತೆಯರು ಪ್ರತಿಭಟನೆ ಮಾಡುತ್ತಿದ್ದರೆ, ಹೃದಯಹೀನ ಸರ್ಕಾರ ಕಂಡೂ ಕಾಣದಂತೆ ಕುರುಡಾಗಿದೆ, ಕೇಳಿದರೂ ಕೇಳಿಸದಂತೆ ಕಿವುಡಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಕಾಂಗ್ರೆಸ್ ಸರ್ಕಾರ ಎಲ್ಲರನ್ನೂ ವಂಚಿಸಿ ಬೀದಿಗೆ ತಂದು ನಿಲ್ಲಿಸಿ ಮಜಾ ನೋಡುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಇದೇ ವಿಷಯದ ಕುರಿತು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ .ವಿಜಯೇಂದ್ರ ಅವರು, ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೀದಿಗಿಳಿದಿರುವ 25 ಸಾವಿರಕ್ಕೂ ಅಧಿಕ ಆಶಾ ಕಾರ್ಯಕರ್ತೆಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಎರಡನೇ ದಿನವೂ ಕೊರೆವ ಚಳಿಯಲ್ಲಿಯೇ ರಾತ್ರಿ ಕಳೆದು ಮುಷ್ಕರ ನಡೆಸುತ್ತಿದ್ದರೂ ದಪ್ಪ ಚರ್ಮದ ಕಾಂಗ್ರೆಸ್ ಸರ್ಕಾರ ಕಿವಿ ಕೊಡದಿರುವುದು ಶ್ರಮಿಕ ವರ್ಗಗಳ ಮೇಲೆ ಈ ಸರ್ಕಾರಕ್ಕಿರುವ ಅಸಡ್ಡೆ ತನವನ್ನು ಸಾಕ್ಷೀಕರಿಸುತ್ತಿದೆ ಎಂದು ಟೀಕಾಪ್ರಹಾರ ನಡೆಸಿದ್ದಾರೆ.

ಅಧಿಕಾರಕ್ಕೆ ಬರುವ ಮುನ್ನ ಆಶಾ ಕಾರ್ಯಕರ್ತೆಯರ ಮತ ಪಡೆಯಲು ಬೆಟ್ಟದಷ್ಟು ಪೊಳ್ಳು ಆಶ್ವಾಸನೆಗಳನ್ನು ನೀಡಿ ಅಧಿಕಾರಕ್ಕೆ ಬಂದು ವರ್ಷ ಕಳೆದರೂ ಬೇಡಿಕೆ ಈಡೇರಿಸದೇ ಆಶಾ ಕಾರ್ಯಕರ್ತೆಯರ ಹೋರಾಟಕ್ಕೆ ಬೆಲೆ ಕೊಡದ ಈ ಸರ್ಕಾರಕ್ಕೆ ನಾಡಿನ ಜನ ಹಿಡಿಶಾಪ ಹಾಕುತ್ತಿದ್ದಾರೆ. ಈ ಕೂಡಲೇ ರಾಜ್ಯ ಸರ್ಕಾರ ಆಶಾ ಕಾರ್ಯಕರ್ತೆಯರ ನ್ಯಾಯಸಮತ ಬೇಡಿಕೆಗಳನ್ನು ಈಡೇರಿಸಲಿ ಎಂದು ರಾಜ್ಯ ಸರ್ಕಾರವನ್ನು ವಿಜಯೇಂದ್ರ ಒತ್ತಾಯಿಸಿದ್ದಾರೆ.

ಮೊದಲ ಪುಟದಿಂದ

## ಸಹಿ ಮಾರಾಟಕ್ಕಿಟ್ಟಿದೆ!

ಸಮಯದಲ್ಲಿ ಯಾರೋ ನಾಲ್ವರು ಸಹಾಯ ಮಾಡುತ್ತಾರೆ. ಆದರೆ ಅಧಿಕಾರ ಇಟ್ಟುಕೊಂಡು ಪ್ರತಿದಿನ ನನ್ನ ಸಹಿಯನ್ನು ಮಾರಾಟಕ್ಕೆ ಇಟ್ಟಿರಲಿಲ್ಲ. ಈ ಸರಕಾರ ಪ್ರತಿಯೊಂದಕ್ಕೂ ತನ್ನ ಸಹಿಯನ್ನು ಮಾರಾಟಕ್ಕೆ ಇಟ್ಟಿದೆ. ಪ್ರತೀ ಕ್ಷಣವೂ ಈ ಸರಕಾರದಲ್ಲಿ ಮಾರಾಟವೇ ನಡೆಯುತ್ತಿದೆ ಎಂದು ಅವರು ಕಿಡಿಕಾರಿದರು.

**ಪ್ರತಿಕ್ರಿಯೆಗೆ ನಕಾರ:** ಡಿ.ಕೆ.ಶಿವಕುಮಾರ್ ತಮಿಳುನಾಡಿನಲ್ಲಿ ಶತ್ರು ಸಂಹಾರ ಪೂಜೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಕೇಂದ್ರ ಸಚಿವರು; ಎಲ್ಲರನ್ನೂ ದೇವರೇ ಕಾಪಾಡಬೇಕು. ಅಧಿಕಾರ ಬೇಕು ಎಂದು ದೇವರ ಮೊರೆ ಹೋಗಿದ್ದು ಸಾಮಾನ್ಯ. ಆದರೆ, ಎಲ್ಲೋ ಶತ್ರುನಾಶಕ್ಕೆ ಹೋಗುವುದು ನನಗೆ ಗೊತ್ತಿಲ್ಲ ಎಂದರು.

ಇವತ್ತು ಲಕ್ಷಾಂತರ ಜನ ವೈಕುಂಠ ಏಕಾದಶಿ. ವೈಕುಂಠದ ಬಾಗಿಲು ತೆರೆಯುತ್ತದೆ ಎನ್ನುವ ನಂಬಿಕೆ ಇದೆ. ದೇವರಲ್ಲಿ ಪ್ರಾರ್ಥನೆ ಮಾಡಿ, ಎಲ್ಲರಿಗೂ ಒಳ್ಳೆಯದು ಮಾಡು ತಂದೆ ಎಂದು ಬೇಡಿಕೊಂಡೆ ಎಂದು ಅವರು ಹೇಳಿದರು.

ದಲಿತ ಶಾಸಕರ ಡಿನ್ನರ್ ಪಾರ್ಟಿ ವಿಚಾರದ ಬಗ್ಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ ಅವರು; ಖಅ-ಖಖ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಕೊಟ್ಟಿಲ್ಲ, ಅದಕ್ಕೆ ಸಭೆ ಮಾಡುತ್ತಿದ್ದೇವೆ ಎಂದು ಅವರಲ್ಲಿ ಕೆಲವರು ಹೇಳಿದ್ದಾರೆ. ಡಿನ್ನರ್ ಪಾರ್ಟಿಯಲ್ಲಿ ವಿದ್ಯಾರ್ಥಿಗಳ ಸ್ಕಾಲರ್ ಶಿಪ್ ಬಗ್ಗೆ ಚರ್ಚೆ ಮಾಡುವುದಾದರೆ ಕ್ಯಾಬಿನೆಟ್ ಇರುವುದು ಯಾಕೆ? ಖಅ-ಖಖ ಇರಲಿ ಯಾವುದೇ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಸಿಗದೇ ಇದ್ದರೆ ಕ್ಯಾಬಿನೆಟ್ ನಲ್ಲಿ ಕೂತು ಚರ್ಚೆ ಮಾಡಬೇಕಾ? ಅಥವಾ ಡಿನ್ನರ್ ಪಾರ್ಟಿಯಲ್ಲಿ ಚರ್ಚೆ ಮಾಡಬೇಕಾ? ಎಂದು ಕಟುವಾಗಿ ಟೀಕಿಸಿದರು.

ಕಾಂಗ್ರೆಸ್ ನಲ್ಲಿ ಸಿಎಂ ಫೈಟ್ ವಿಚಾರದ ಬಗ್ಗೆ ಉತ್ತರಿಸಲು ನಿರಾಕರಿಸಿದ ಅವರು; ಅದು ಅವರ ಪಕ್ಷದ ವಿಚಾರ. ಅವರ ಪಕ್ಷದ ವಿಚಾರ ಅವರು ಚರ್ಚೆ ಮಾಡಿಕೊಳ್ಳಲಿ ಬಿಡಿ ಎಂದು ಕುಮಾರಸ್ವಾಮಿ ಅವರು ಹೇಳಿದರು.

## ಹೋಮ ನೆರವೇರಿಸಿರುವೆ

ಇದರಲ್ಲಿ ಯಾವುದೇ ವಿಶೇಷವಿಲ್ಲ. ನಾನು ಪ್ರತಿದಿನ ದೇವರಿಗೆ ನಮಸ್ಕಾರ ಮಾಡದೇ ಮನೆಯಿಂದ ಹೊರಗೆ ಬರುವುದಿಲ್ಲ. ನಾನು ಯಾವ ಶಕ್ತಿಯನ್ನು ನಂಬುತ್ತೇನೆಯೊ ಅದರ ಮೇಲೆ ಭಕ್ತಿ, ಪ್ರೀತಿ ಇದ್ದೇ ಇರುತ್ತದೆ" ಎಂದು ಹೇಳಿದರು.

ಶತ್ರುಗಳ ನಾಶಕ್ಕೆ ಶಿವಕುಮಾರ್ ಹೋಮ ಮಾಡಿಸಿದ್ದಾರೆ ಎನ್ನುವ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ನಾನು ಪ್ರತಿ ದಿನವೂ ನನಗೆ ಒಳ್ಳೆಯದಾಗಲಿ ಎಂದು ಪೂಜೆ ಮಾಡುತ್ತಿರುತ್ತೇನೆ. ನನಗೆ ಯಾರ್ಯಾರು ತೊಂದರೆ ಕೊಡುತ್ತಾರೆಯೋ ಅವರಿಂದ ನನಗೆ ರಕ್ಷಣೆ ಸಿಗಲಿ ಎಂದು ಪ್ರಾರ್ಥನೆ ಮಾಡುತ್ತಿರುತ್ತೇನೆ. ಇದರಲ್ಲಿ ಯಾವುದೇ ಮುಚ್ಚುಮರೆಯಿಲ್ಲ" ಎಂದರು.

"ನೀವು (ಮಾಧ್ಯಮ)ಗಳು ಸಹ ನನಗೆ ಬೇಕಾದಷ್ಟು ತೊಂದರೆ ಕೊಡುತ್ತಿರುತ್ತೀರಿ. ಇಲ್ಲದೇ ಇರುವ ಹೊಸ ಸುದ್ದಿಗಳನ್ನು ಸೃಷ್ಟಿ ಮಾಡುತ್ತಾ ಇರುತ್ತೀರಿ. ಅದಕ್ಕಾಗಿ ನಿಮ್ಮಿಂದಲೂ ನಮಗೆ ರಕ್ಷಣೆ ಸಿಗಲಿ ಎಂದು ಪ್ರಾರ್ಥನೆ ಮಾಡುತ್ತಿರುತ್ತೇನೆ" ಎಂದು ಹೇಳಿದರು.

"ವೆಂಕಟೇಶ್ವರನ ಜೊತೆ ಲಕ್ಷ್ಮಿ ಸೇರಿದಂತೆ ವೈಕುಂಠ ಏಕಾದಶಿಯ ದಿನದಂದು ಈ ರಾಜ್ಯದ ಎಲ್ಲರ ಮನೆಯಲ್ಲೂ ಐಶ್ವರ್ಯ ಹೆಚ್ಚಾಗಲಿ ಎಂದು ಪ್ರಾರ್ಥಿಸುತ್ತೇನೆ. ಇದು ನಮ್ಮ ನಂಬಿಕೆ, ಆಚಾರ ವಿಚಾರ. ಧರ್ಮೋ ರಕ್ಷತಿ ರಕ್ಷಿತಃ ಅಂದರೆ ಧರ್ಮವನ್ನು ನಾವು ಉಳಿಸಿದರೆ ಧರ್ಮವು ನಮ್ಮನ್ನು ಉಳಿಸುತ್ತದೆ. ವಿಷ್ಣುವಿನ ಸ್ವರೂಪವಾದ ವೆಂಕಟೇಶ್ವರನ ದರ್ಶನವನ್ನು ರಾಜ್ಯದ ನಾನಾ ಕಡೆಗಳಲ್ಲಿ ಜನರು ಮಾಡುತ್ತಿದ್ದಾರೆ. ಎಲ್ಲರಿಗೂ ದೇವರ ಅನುಗ್ರಹ ದೊರೆಯಲಿ" ಎಂದು ಪ್ರಾರ್ಥಿಸಿರುವುದಾಗಿ ಹೇಳಿದರು.

## ಶಸ್ತ್ರಾಸ್ತ್ರ ಹುಡುಕಾಟ

ಶಸ್ತ್ರಾಸ್ತ್ರಗಳನ್ನು ಕಾಡಿನಲ್ಲಿ ಎಲ್ಲಿ ಬಿಸಾಕಿದ್ದಾರೆ ಎಂಬುದನ್ನು ಪೊಲೀಸರು ಪತ್ತೆ ಹಚ್ಚಲಿದ್ದಾರೆ" ಎಂದರು. "ನಾವು ಮಾಡುವ ಕೆಲಸ ಮಾಡುತ್ತೇವೆ. ಕಾಡಲ್ಲಿ ಎಲ್ಲಿ ಶಸ್ತ್ರಾಸ್ತ್ರ ಇಟ್ಟಿದ್ದಾರೆ ಎಂಬುದನ್ನು ಪೊಲೀಸರು ಹುಡುಕುತ್ತಾರೆ. ಇದಕ್ಕೆಲ್ಲ ಪ್ರಕ್ರಿಯೆ ಇದೆ. ಅದರ ಅನುಸಾರ ಪೊಲೀಸರು ಕೆಲಸ ಮಾಡುತ್ತಾರೆ. ಇದೆಲ್ಲ ಬಿಜೆಪಿಯವರಿಗೆ ಗೊತ್ತಿಲ್ಲವೇ?. ಅವರು ಕೂಡ ಸರ್ಕಾರ ನಡೆಸಿದ್ದಾರೆ. ಆಗಲೂ ಇದೇ ಪೊಲೀಸ್ ಇಲಾಖೆ ಇತ್ತಲ್ಲವೇ?" ಎಂದು ತಿರುಗೇಟು ನೀಡಿದರು.

ನಕ್ಸಲ್ ರವೀಂದ್ರ ಎಂಬಾತ ನಾಪತ್ತೆ ಬಗ್ಗೆ ಪ್ರತಿಕ್ರಿಯಿಸಿ, "ಶರಣಾಗತರಾಗಿರುವ ಗುಂಪಿನವರು ಆತನನ್ನು ಹೊರಹಾಕಿದ್ದರು ಎನ್ನುವ ಮಾಹಿತಿ ಇದೆ. ಯಾವ ಕಾರಣಕ್ಕೆ ಹೊರಹಾಕಿದ್ದರು ಎಂಬುದು ಗೊತ್ತಿಲ್ಲ, ತನಿಖೆ ನಡೆದಿದೆ. ನಕ್ಸಲ್ ಚಟುವಟಿಕೆ ಬಗ್ಗೆ ನಮಗೆ ಈವರೆಗೆ ಸಿಕ್ಕಿರುವ ಮಾಹಿತಿ ಪ್ರಕಾರ, ಶರಣಾಗತರಾಗಿರುವ ಆರು ಜನರೇ ಕೊನೆ ಎಂಬುದಾಗಿದೆ. ಹೊರಗಡೆಯಿಂದ ಬಂದರೆ ನಿಗಾವಹಿಸಲಿದ್ದಾರೆ" ಎಂದು ಹೇಳಿದರು.

"ಎನ್‌ಕೌಂಟರ್‌ನಲ್ಲಿ ಮೃತಪಟ್ಟ ನಕ್ಸಲ್ ವಿಕ್ರಮ್ ಗೌಡ ಅವರ ಕುಟುಂಬಕ್ಕೆ ಪರಿಹಾರ ಕಲ್ಪಿಸುವ ಬೇಡಿಕೆಯನ್ನು ಪರಿಶೀಲಿಸಲಿದ್ದಾರೆ. ನಕ್ಸಲರು ಶರಣಾಗತರಾಗಿರುವ ಪ್ರಕರಣ ಮತ್ತು ವಿಕ್ರಮ್ ಗೌಡ ಪ್ರಕರಣ ಬೇರೆ" ಎಂದು ಗೃಹ ಸಚಿವರು ತಿಳಿಸಿದರು.

"ಶಾಸಕಾಂಗ ಪಕ್ಷದ ಕಾರ್ಯಸೂಚಿ ಏನೆಂಬುದು ಗೊತ್ತಿಲ್ಲ. ಶಾಸಕಾಂಗ ಪಕ್ಷದಿಂದ ಈವರೆಗೆ ಯಾವುದೇ ಮಾಹಿತಿ ಬಂದಿಲ್ಲ. ಬಜೆಟ್ ಅಧಿವೇಶನ ಸಮೀಪಿಸುತ್ತಿದೆ. ಶಾಸಕರ ಕ್ಷೇತ್ರಗಳ ಅಭಿವೃದ್ಧಿ ಕೆಲಸಗಳ ಬಗ್ಗೆ ಹಾಗೂ ಜಾತಿಗಣತಿ ವರದಿ ಜಾರಿಗೆ ತರುವ ವಿಚಾರಗಳನ್ನು ಚರ್ಚೆ ಮಾಡುವ ಸಾಧ್ಯತೆ ಇದೆ" ಎಂದು ಹೇಳಿದರು.

**ಶರಣಾದ ನಕ್ಸಲರಿಗೆ ನ್ಯಾಯಾಂಗ ಬಂಧನ :** ಶಸ್ತ್ರಾಸ್ತ್ರ ತ್ಯಜಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮುಖದಲ್ಲಿ ಬುಧವಾರ ಶರಣಾಗತರಾಗಿದ್ದ ಆರು ಮಂದಿ ನಕ್ಸಲೀಯರನ್ನ ಎನ್‌ಐಎ ಕೋರ್ಟ್‌ಗೆ ಹಾಜರುಪಡಿಸಿದ್ದು, ಜ. 30ರ ವರೆಗೆ ನ್ಯಾಯಾಂಗ ಬಂಧನ ವಿಧಿಸಲಾಗಿದೆ.

## ಡಿ. ಕೃಷ್ಣಕುಮಾರ್‌ಗೆ ಐತಿಹಾಸಿಕ ಗೆಲುವು

ಡೈರಿ ಚುನಾವಣೆಯಲ್ಲಿ ನಿರಂತರವಾಗಿ ಗೆಲುವು ಸಾಧಿಸುತ್ತಾ ಬಂದಿರುವ ಕೃಷ್ಣಕುಮಾರ್ ಎಂದಿನಂತೆ ತಮ್ಮ ವಿಜಯ ಪತಾಕೆ ಹಾರಿಸಿದ್ದಾರೆ.ಗೆಲುವಿನ ನಂತರ ವಿಜಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಕೃಷ್ಣಕುಮಾರ್, ತಾಲ್ಲೂಕಿನಲ್ಲಿ ಮೈತ್ರಿ ಪಕ್ಷವನ್ನು ಮುಗಿಸಲು ಯಾರಿಂದಲೂ ಸಾಧ್ಯವಿಲ್ಲ. ನಮ್ಮ ಕಾರ್ಯಕರ್ತರೇ ನಮ್ಮ ಆಸ್ತಿ. ಅವರು ಇರುವವರೆಗೂ ನಮಗೆ ಸೋಲೆಂಬುದೇ ಇಲ್ಲ ಎಂದು ಹೇಳಿದರು.ಶಾಸಕರು ಕುಣಿಗಲ್ ತಾಲ್ಲೂಕಿನಲ್ಲಿ ಪ್ರಭುತ್ವ ಸ್ಥಾಪಿಸಬಹುದು ಎಂಬ ಭ್ರಮೆಯಲ್ಲಿದ್ದಾರೆ. ಮೊದಲು ಅಂತಹ ಭ್ರಮೆಯಿಂದ ಹೊರಬನ್ನಿ ಎಂದು ಕುಟುಕಿದರು.

ಜಿಲ್ಲೆಯಲ್ಲಿ ಸಹಕಾರಿ ಕ್ಷೇತ್ರ ಸುಭದ್ರವಾಗಿದೆ. ಅದೇ ರೀತಿ ನಮ್ಮ ಕುಟುಂಬ ಕೂಡ ಬಲಿಷ್ಟವಾಗಿದೆ ಎಂಬುದನ್ನು ಶಾಸಕರು ಮರೆಯಬಾರದು. ನಮ್ಮ ಕುಟುಂಬದ ಬಗ್ಗೆ ಮಾತನಾಡುವುದನ್ನು ಮೊದಲು ನಿಲ್ಲಿಸಲಿ. ಮುಂದಿನ ದಿನಗಳಲ್ಲಿ ಬರುವ ಚುನಾವಣೆಗಳಲ್ಲೂ ಕೂಡ ನಾವೇ ಗೆಲ್ಲುತ್ತೇವೆ. ಇದನ್ನು ಬರೆದಿಟ್ಟುಕೊಳ್ಳಿ ಎಂದು ಸವಾಲೆಸೆದರು.

ತುಮಕೂರು ಡಿಸಿಸಿ ಬ್ಯಾಂಕ್ ಮಾಜಿ ನಿರ್ದೇಶಕ ಡಿ.ಶಿವಣ್ಣ, ಕುಣಿಗಲ್ ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜಗದೀಶ್ ಸೇರಿದಂತೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಕಾರ್ಯಕರ್ತರು ಭಾಗವಹಿಸಿ ವಿಜಯೋತ್ಸವ ಆಚರಿಸಿದರು.

# ಸಿದ್ದರಾಮಯ್ಯನವರನ್ನು ಪದಚ್ಯುತಿ ಮಾಡ್ತೀವಿ, ಇಳಿಸ್ತೀವಿ ಅಂದ್ರೆ ನಡೆಯಲ್ಲ

**ಬೆಂಗಳೂರು:** ಸಿದ್ದರಾಮಯ್ಯನವರನ್ನು ಪದಚ್ಯುತಿ ಮಾಡುತ್ತೇವೆ, ಇಳಿಸುತ್ತೇವೆ ಎಂದರೆ ಅದು ನಡೆಯುವುದಿಲ್ಲ ಎಂದು ಸಹಕಾರ ಸಚಿವ ರಾಜಣ್ಣ ಗುಡುಗಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೇಜಾರಾಗಲು ಯಾರಾದರು ಅವರ ಆಸ್ತಿ ಬರೆಸಿಕೊಂಡಿದ್ದಾರೆಯೇ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಪ್ರಶ್ನಿಸಿದ ಬೆನ್ನಲ್ಲೇ ಇಂದು ಪಬ್ಲಿಕ್ ಟಿವಿ ಅವರನ್ನು ಸಂದರ್ಶಿಸಿದೆ. ಈ ಸಂದರ್ಶನದಲ್ಲಿ ರಾಜಣ್ಣ ಹಲವು ವಿಚಾರಗಳನ್ನು ಪ್ರಸ್ತಾಪಿಸಿ ದಲಿತ ನಾಯಕರ ಸಭೆ ರದ್ದಾಗಿಲ್ಲ ಅದು ಮುಂದೂಡಿಕೆಯಾಗಿದೆ ಅಷ್ಟೇ. ಮುಂದೆ ನಾವು ಸಭೆಯನ್ನು ಮಾಡುತ್ತೇವೆ ಎಂದು ತಿಳಿಸಿದರು.



ಸುರ್ಜೇವಾಲ ಅವರ ಸೂಚನೆ ಮೇರೆಗೆ ಪರಮೇಶ್ವರ್ ಸಭೆಯನ್ನು ಮುಂದೂಡಿದ್ದಾರೆ. ಈ ಹಿಂದೆ ಸಿಎಂ ಜೊತೆ ಊಟಕ್ಕೆ ಸೇರಿದ್ದರಿಂದ ಮಾಧ್ಯಮಗಳಲ್ಲಿ ಬೇರೆ ಬೇರೆ ವಿಶ್ಲೇಷಣೆ ಬಂತು. ಅದಕ್ಕೆ ನೀವು ಪ್ರತ್ಯೇಕ ಸಭೆ ಸೇರುವುದು ಬೇಡ ಎಂದಿದ್ದಾರೆ ಎಂದು ಹೇಳಿದರು.

ಕಾಂಗ್ರೆಸ್ ಹೈಕಮಾಂಡ್ ನಾಯಕರು ಸಿದ್ದರಾಮಯ್ಯ ಸಿಎಂ, ಡಿಕೆಶಿ ಒಬ್ಬರೇ ಡಿಸಿಎಂ ಆಗಿರುತ್ತಾರೆ ಎಂದರು. ಪಾರ್ಲಿಮೆಂಟ್ ಚುನಾವಣೆವರೆಗೆ ಅವರೇ ಕೆಪಿಸಿಸಿ ಅಧ್ಯಕ್ಷರು ಆಗಿ ಮುಂದುವರಿಯುತ್ತಾರೆ ಅಂದಿದ್ದರು. ಅದಕ್ಕೆ ನಾನು ಹೈ ಕಮಾಂಡ್ ನಾಯಕರ ಹೇಳಿಕೆಯನ್ನ ಹೇಳುತ್ತಿದ್ದೇನೆ. ಪಾರ್ಲಿಮೆಂಟ್ ಚುನಾವಣೆವರೆಗೆ ಅಧ್ಯಕ್ಷರು ಅಂತ ಹೇಳಿದ್ದು ನನಗೆ ನೆನಪಿದೆ ಎಂದರು.

ಸಿಎಂ ಬದಲಾವಣೆ, ಪವರ್ ಶೇರಿಂಗ್ ವಿಚಾರ ಎಲ್ಲಾ ಕಾಂಗ್ರೆಸ್ ಹೈ ಕಮಾಂಡ್‌ಗೆ ಬಿಟ್ಟಿದ್ದು. 5 ವರ್ಷದ ಅವಧಿಗೆ ನಾನೇ ಸಿಎಂ ಎಂದು ಸಿದ್ದರಾಮಯ್ಯ ಅವರೇ ಹೇಳಿದ್ದರಲ್ಲ ಎಂದು ತಿಳಿಸಿದರು.

## ಆಶಾ ಕಾರ್ಯಕರ್ತರ ಬೀದಿಗೆ ತಂದ ಸರ್ಕಾರ

**ಬೆಂಗಳೂರು:** ಚುನಾವಣೆಗೂ ಮುನ್ನ ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಬಿಸಿಯೂಟ ಕಾರ್ಯಕರ್ತೆಯರ ಉದ್ಧಾರ ಮಾಡುವುದಾಗಿ ಸುಳ್ಳು ಆಶ್ವಾಸನೆ ಕೊಟ್ಟಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದೀಗ ಅವರನ್ನು ಬೀದಿಗೆ ತಂದು ನಿಲ್ಲಿಸಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.

ಕುರಿತು ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಕಳೆದ ಮೂರು ದಿನಗಳಿಂದ ಕೊರೆಯುವ ಚಳಿಯಲ್ಲೂ ಫ್ರೀಡಂಪಾರ್ಕ್‌ನಲ್ಲಿ ಆಶಾ ಕಾರ್ಯಕರ್ತೆಯರು ಪ್ರತಿಭಟನೆ ಮಾಡುತ್ತಿದ್ದರೆ, ಹೃದಯಹೀನ ಸರ್ಕಾರ ಕಂಡೂ ಕಾಣದಂತೆ ಕುರುಡಾಗಿದೆ, ಕೇಳಿದರೂ ಕೇಳಿಸದಂತೆ ಕಿವುಡಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರ ಎಲ್ಲರನ್ನೂ ವಂಚಿಸಿ ಬೀದಿಗೆ ತಂದು ನಿಲ್ಲಿಸಿ ಮಜಾ ನೋಡುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಇದೇ ವಿಷಯದ ಕುರಿತು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ .ವಿಜಯೇಂದ್ರ ಅವರು, ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಬೀದಿಗಿಳಿದಿರುವ 25 ಸಾವಿರಕ್ಕೂ ಅಧಿಕ ಆಶಾ ಕಾರ್ಯಕರ್ತೆಯರು



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಎರಡನೇ ದಿನವೂ ಕೊರೆವ ಚಳಿಯಲ್ಲಿಯೇ ರಾತ್ರಿ ಕಳೆದು ಮುಷ್ಕರ ನಡೆಸುತ್ತಿದ್ದರೂ ದಪ್ಪ ಚರ್ಮದ ಕಾಂಗ್ರೆಸ್ ಸರ್ಕಾರ ಕಿವಿ ಕೊಡದಿರುವುದು ಶ್ರಮಿಕ ವರ್ಗಗಳ ಮೇಲೆ ಈ ಸರ್ಕಾರಕ್ಕಿರುವ ಅಸಡ್ಡೆ ತನವನ್ನು ಸಾಕ್ಷೀಕರಿಸುತ್ತಿದೆ ಎಂದು ಟೀಕಾಪ್ರಹಾರ ನಡೆಸಿದ್ದಾರೆ.

ಅಧಿಕಾರಕ್ಕೆ ಬರುವ ಮುನ್ನ ಆಶಾ ಕಾರ್ಯಕರ್ತೆಯರ ಮತ ಪಡೆಯಲು ಬೆಟ್ಟದಷ್ಟು ಪೊಳ್ಳು ಆಶ್ವಾಸನೆಗಳನ್ನು ನೀಡಿ ಅಧಿಕಾರಕ್ಕೆ ಬಂದು ವರ್ಷ ಕಳೆದರೂ ಬೇಡಿಕೆ ಈಡೇರಿಸದೇ ಆಶಾ ಕಾರ್ಯಕರ್ತೆಯರ ಹೋರಾಟಕ್ಕೆ ಬೆಲೆ ಕೊಡದ ಈ ಸರ್ಕಾರಕ್ಕೆ ನಾಡಿನ ಜನ ಹಿಡಿಶಾಪ ಹಾಕುತ್ತಿದ್ದಾರೆ. ಈ ಕೂಡಲೇ ರಾಜ್ಯ ಸರ್ಕಾರ ಆಶಾ ಕಾರ್ಯಕರ್ತೆಯರ ನ್ಯಾಯಸಮತ ಬೇಡಿಕೆಗಳನ್ನು ಈಡೇರಿಸಲಿ ಎಂದು ರಾಜ್ಯ ಸರ್ಕಾರವನ್ನು ವಿಜಯೇಂದ್ರ ಒತ್ತಾಯಿಸಿದ್ದಾರೆ.

## ಲೈಂಗಿಕ ದೌರ್ಜನ್ಯ: ರಾಜ್ಯ ಮಹಿಳಾ ಆಯೋಗಕ್ಕೆ ದೂರು



**ಮೈಸೂರು:** ಅರ್ಜುನ್ ಗುರೂಜಿ ವಿರುದ್ಧ ಲೈಂಗಿಕ ದೌರ್ಜನ್ಯದ ಆರೋಪ ಕೇಳಿ ಬಂದಿದ್ದು, ಕರ್ನಾಟಕ ರಾಜ್ಯ ಮಹಿಳಾ ಆಯೋಗದಲ್ಲಿ ದೂರು ದಾಖಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ.

ಅರ್ಜುನ್ ಗುರೂಜಿ ಹಾಗೂ ಅವರ ಶಿಷ್ಯಂದಿರ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ ಮಾಡಿ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಹೆಸರಿನಲ್ಲಿ ದೂರು ನೀಡಲಾಗಿದೆ. ಮುಗ್ಧ ಹೆಣ್ಣುಮಕ್ಕಳು, ಮಹಿಳೆಯರು, ವಿಧವೆಯರ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆಂದು ಆರೋಪಿಸಲಾಗಿದ್ದು, ನೊಂದ ಮಹಿಳೆಯರಿಗೆ ಸೂಕ್ತ ರಕ್ಷಣೆ ನೀಡಿ ಎಂದು ಫ್ಯಾಕ್ಸ್ ಮೂಲಕ ಮಹಿಳಾ ಆಯೋಗಕ್ಕೆ ಮನವಿ ಪತ್ರ ರವಾನೆ ಮಾಡಲಾಗಿದೆ.

ಇನ್ನು ಫ್ಯಾಕ್ಸ್ ಮೂಲಕ ಬಂದ ಮನವಿ ಸ್ವೀಕರಿಸಿದ ರಾಜ್ಯ ಮಹಿಳಾ ಆಯೋಗ ಜನವರಿ 1 ರಂದು ಮೈಸೂರು ಪೊಲೀಸ್ ಆಯುಕ್ತರಿಗೆ ಪತ್ರ ಬರೆದು 15 ದಿನಗಳ ಒಳಗೆ ವರದಿ ನೀಡುವಂತೆ ಸೂಚನೆ ನೀಡಿದೆ. ಅರ್ಜಿದಾರರ ನಿಯಮಾನುಸಾರ ಪರಿಶೀಲಿಸಿ, ಸೂಕ್ತ ರಕ್ಷಣೆ ಹಾಗೂ ನ್ಯಾಯ ಒದಗಿಸಲು ಕ್ರಮ ಕೈಗೊಳ್ಳಬೇಕು, ಅನ್ಯಾಯಕ್ಕೆ ಒಳಗಾದ ಮಹಿಳೆಯರಿಂದ ಮಾಹಿತಿ ಪಡೆದುಕೊಳ್ಳಿ ಎಂದು ಮಹಿಳಾ ಆಯೋಗ ಪೊಲೀಸರಿಗೆ ಸೂಚನೆ ನೀಡಿದೆ

ಈ ಸಂಬಂಧ ಪ್ರತಿಕ್ರಿಯಿಸಿರುವ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ, ಅರ್ಜುನ್ ಗುರೂಜಿ ವಿರುದ್ಧ ನಾನು ದೂರು ನೀಡಿಲ್ಲ ಎಂದು ಸ್ಪಷ್ಟನೆ ಕೊಟ್ಟಿದ್ದಾರೆ.

## ಉದ್ಯಮಿ ಮೇಲೆ ಗುಂಡಿನ ದಾಳಿ

**ಬೆಳಗಾವಿ:** ಕಾರಿನಲ್ಲಿ ಹೋಗುತ್ತಿದ್ದ ಉದ್ಯಮಿ ಮೇಲೆ ದುಷ್ಕರ್ಮಿಗಳು ಗುಂಡಿನ ದಾಳಿ ಮಾಡಿರುವ ಘಟನೆ ಬೆಳಗಾವಿಯ ಗಣೇಶಪುರದ ಹಿಂದು ನಗರದ ರಸ್ತೆಯಲ್ಲಿ ಗುರುವಾರ ತಡರಾತ್ರಿ ನಡೆದಿದೆ.

ರಿಯಲ್ ಎಸ್ಟೇಟ್ ಉದ್ಯಮಿ, ಶಾಹುನಗರದ ನಿವಾಸಿ ಪ್ರಫುಲ್ ಬಾಲಕೃಷ್ಣ ಪಾಟೀಲ (30) ಎಂಬವರ ಮೇಲೆ ದುಷ್ಕರ್ಮಿಗಳು ದಾಳಿ ಮಾಡಿದ್ದಾರೆ. ಕಾರಿನ ಗ್ಲಾಸ್‌ಗೆ ಗುಂಡು ತಗುಲಿದ್ದು, ಅದೃಷ್ಟವಶಾತ್ ಪ್ರಫುಲ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಕಾರಿನ ಗಾಜು ಪ್ರಫುಲ್ ಅವರ ತಲೆ, ಮುಖಕ್ಕೆ ಸಿಡಿದು ಗಾಯವಾಗಿದೆ.

ತಕ್ಷಣ ಅವರನ್ನು ಬೆಳಗಾವಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಘಟನಾ ಸ್ಥಳಕ್ಕೆ ಬೆಳಗಾವಿ ಗ್ರಾಮೀಣ ಪೊಲೀಸರು ಭೇಟಿ ನೀಡಿ, ಪರಿಶೀಲಿಸಿದ್ದಾರೆ. ಎರಡು ಸುತ್ತು ಗುಂಡಿನ ದಾಳಿ ನಡೆಸಿ ಆರೋಪಿಗಳು ಪರಾರಿಯಾಗಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ದಾಳಿ ಮಾಡಿದವರು ಯಾರು? ಯಾವ ಕಾರಣಕ್ಕೆ ಮಾಡಿದ್ದಾರೆ ಎಂಬುದು ಪೊಲೀಸ್ ತನಿಖೆಯಿಂದಲೇ ಗೊತ್ತಾಗಬೇಕಿದೆ. ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪೊಲೀಸ್ ಠಾಣೆ ಬಳಿ ಸ್ಫೋಟ

**ಅಮೃತಸರ:** ಅಮೃತಸರದ ಗುಮ್ಟಾಲಾ ಪೊಲೀಸ್ ಠಾಣೆ ಹೊರಗೆ ರೇಡಿಯೇಟರ್ ಸ್ಫೋಟಗೊಂಡಿರುವ ಕುರಿತು ಮಾಹಿತಿ ಲಭ್ಯವಾಗಿದೆ. ಸ್ಥಳೀಯ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಪಶ್ಚಿಮ ಅಮೃತಸರದ ಎಸಿಪಿ ಶಿವದರ್ಶನ್ ಸಿಂಗ್ ಪ್ರಕಾರ , ಪೊಲೀಸ್ ಠಾಣೆಯ ಉಸ್ತುವಾರಿ ಎಎಸ್‌ಐ ಹರ್ಜಿಂದರ್ ಸಿಂಗ್ ಕೆಲಸದಲ್ಲಿ ತೊಡಗಿದ್ದಾಗ, ಘಟನೆ ಸಂಭವಿಸಿದೆ. ಘಟನಾ ಸ್ಥಳವನ್ನು ತಲುಪಿದ ಸಿಂಗ್,

ಎಎಸ್‌ಐ ತಜೀಂದರ್ ಸಿಂಗ್‌ಅವರ ಕಾರಿನಿಂದ ಕೂಲಂಟ್ ಸೋರಿಕೆಯಾಗುತ್ತಿರುವುದನ್ನು ಪತ್ತೆಮಾಡಿದ್ದರು. ವಾಹನ ತಪಾಸಣೆಗೆ ಮೆಕ್ಯಾನಿಕ್‌ನನ್ನು ಕರೆಸಲಾಗಿತ್ತು, ಮೆಕ್ಯಾನಿಕ್ ಕಾರನ್ನು ಪರಿಶೀಲಿಸಿದ ನಂತರ, ಅದು ರೇಡಿಯೇಟರ್ ಬ್ಲಾಸ್ಟ್ ಎಂದು ಹೇಳಿದ್ದಾರೆ.

ಪೊಲೀಸರು ಈ ಬಗ್ಗೆ ಸಕ್ರಿಯವಾಗಿ ತನಿಖೆ ನಡೆಸುತ್ತಿದ್ದಾರೆ ಎಂದು ಸಿಂಗ್ ಭರವಸೆ ನೀಡಿದರು.ಪಾಕಿಸ್ತಾನದಿಂದ ಮಾದಕವಸ್ತುಗಳನ್ನು ಕಳ್ಳಸಾಗಣೆ ಮಾಡಲು ಡ್ರೋನ್ ತಂತ್ರಜ್ಞಾನದ ಸಹಾಯದಿಂದ ಕಾರ್ಯನಿರ್ವಹಿಸುತ್ತಿದ್ದ ಗಡಿಯಾಚೆಗಿನ ಡ್ರಗ್ ಕಾರ್ಟೆಲ್ ಅನ್ನು ಪಂಜಾಬ್ ಪೊಲೀಸರು ಕಿತ್ತುಹಾಕಿದ್ದಾರೆ.

ಬಂಧಿತ ವ್ಯಕ್ತಿಗಳು ಭಾರತ-ಪಾಕಿಸ್ತಾನ ಗಡಿಯಲ್ಲಿ ಮಾದಕವಸ್ತುಗಳನ್ನು ತಳ್ಳಲು ಡ್ರೋನ್‌ಗಳನ್ನು ಬಳಸುತ್ತಿದ್ದ ಪಾಕಿಸ್ತಾನ ಮೂಲದ ಸ್ಮಗ್ಲರ್‌ಗಳೊಂದಿಗೆ ಸಂಪರ್ಕ ಹೊಂದಿದ್ದರು. ಕಳೆದ ಒಂದೂವರೆ ತಿಂಗಳ ಅವಧಿಯಲ್ಲಿ ಪಂಜಾಬ್‌ನ ಪೊಲೀಸ್ ಸಂಸ್ಥೆಯಲ್ಲಿ ನಡೆದ ಒಂಬತ್ತನೇ ಘಟನೆ ಇದಾಗಿದೆ.

ಎಎಸ್‌ಐ ತೇಜಿಂದರ್ ಸಿಂಗ್ ಅವರಿಗೆ ಸೇರಿದ ಕಾರಿನ ರೇಡಿಯೇಟರ್‌ಗೆ ಹಾನಿಯಾಗಿದ್ದು, ಅದು ಧ್ವನಿಗೆ ಕಾರಣವಾಯಿತು ಎಂದು ಪರೀಕ್ಷೆಯ ಸಮಯದಲ್ಲಿ ಕಂಡುಬಂದಿದೆ. ಕಾರಿನ ವಿಂಡ್ ಶೀಲ್ಡ್‌ಗೂ ಹಾನಿಯಾಗಿದೆ.



ನಗರದ ಕ್ಯಾಪಿಟಲ್ ಹೋಟೆಲ್‌ನಲ್ಲಿ ಇಂದು ಬಿಜೆಪಿ ಮಾಜಿ ಶಾಸಕರು ಮತ್ತು ವಿಧಾನಪರಿಷತ್ ಸದಸ್ಯರ ಸಭೆ ನಡೆಯಿತು. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಅಧ್ಯಕ್ಷತೆ ವಹಿಸಿದ್ದರು. ಸಭಾ ಕಾರ್ಯಕ್ರಮದಲ್ಲಿ ಬಿಜೆಪಿ ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಮತ್ತು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮತ್ತು ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾನಂದಗೌಡ, ವಿಧಾನಪರಿಷತ್ ಮಾಜಿ ಸದಸ್ಯ ಪಿ.ವಿ.ಕೃಷ್ಣ ಭಟ್, ಆಹ್ವಾನಿತ ಪ್ರಮುಖರು ಭಾಗವಹಿಸಿದ್ದರು.



ವೈಕುಂಠ ಏಕಾದಶಿ ಪ್ರಯುಕ್ತ ಮಹಾಲಕ್ಷ್ಮಿ ಲೇಔಟ್ ನ ವಿವಿಧ ದೇವಸ್ಥಾನಗಳಿಗೆ ಮಾಜಿ ಸಚಿವರು ಹಾಗೂ ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರು ಭೇಟಿ ನೀಡಿ ದೇವರ ದರ್ಶನ ಪಡೆದರು.ಆ ಸಂದರ್ಭದಲ್ಲಿ ಪಾಲಿಕೆ ಮಾಜಿ ಉಪಮೇಯ ಪಾಲಿಕೆ ಮಾಜಿ ಸದಸ್ಯರುಗಳಾದ ಪದ್ಮಾವತಿ ಶ್ರೀನಿವಾಸ್, ನಾಗರತ್ನ ಲೋಕೇಶ್ ಮುಖಂಡ ಶ್ರೀನಿವಾಸ್ ಮತ್ತಿತರರು ಜೊತೆಯಲಿದ್ದರು.

# ಬೆಜೆಟ್‌ನಲ್ಲಿ ಆಶಾ ಕಾರ್ಯಕರ್ತೆಯರ ಗೌರವಧನ ಹೆಚ್ಚಿಸುವ ಬಗ್ಗೆ ಸಿಎಂ ಜೊತೆ ಚರ್ಚಿಸುವುದಾಗಿ ಭರವಸೆ

**ಬೆಂಗಳೂರು:** ಆಶಾ ಕಾರ್ಯಕರ್ತೆಯರಿಗೆ ಪ್ರಸ್ತುತ ನೀಡುತ್ತಿರುವ 8 ಸಾವಿರ ಖಚಿತ ಗೌರವಧನ ಬದಲಾಗಿ 9500 ರೂಪಾಯಿಗಳನ್ನ ಮುಂಗಡವಾಗಿ ನೀಡಲು ಸರ್ಕಾರ ಸಿದ್ಧ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ಆಶಾ ಕಾರ್ಯಕರ್ತೆಯರು ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಇಂದು ಭೇಟಿ ನೀಡಿದ ಸಚಿವರು, ಪ್ರತಿಭಟನೆ ಕೈ ಬಿಟ್ಟು ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಸಹಕಾರ ನೀಡುವಂತೆ ಆಶಾ ಕಾರ್ಯಕರ್ತೆಯರಲ್ಲಿ ಮನವಿ ಮಾಡಿದರು.



15 ಸಾವಿರ ವೇತನ ಫಿಕ್ಸ್ ಮಾಡುವಂತೆ ಆಶಾ ಕಾರ್ಯಕರ್ತೆಯರು ಈ ವೇಳೆ ಸಚಿವರಿಗೆ ಒತ್ತಾಯಿಸಿದರು. ಈ ಕುರಿತಂತೆ ಸ್ಪಷ್ಟನೆ ನೀಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಆಶಾ ಕಾರ್ಯಕರ್ತೆಯರಿಗೆ ಪ್ರಸ್ತುತ 8 ಸಾವಿರ ಗೌರವಧನ ಖಚಿತವಾಗಿ ಸಿಗುತ್ತಿದೆ. ಹೆಚ್ಚಿನ ಪ್ರೋತ್ಸಾಹಧನ ಕೇಂದ್ರ ಸರ್ಕಾರದ ಅನುದಾನದ ಮೇಲೆ ಒದಗಿಸಲಾಗುತ್ತಿದೆ. ಆರ್.ಸಿ.ಎಚ್ ಪೋರ್ಟಲ್ ನಲ್ಲಿ ಆಶಾ ಕಾರ್ಯಕರ್ತೆಯರ ಕಾರ್ಯಚಟುವಟುಕೆಗಳ ಆಧಾರದ ಮೇಲೆ ಪ್ರೋತ್ಸಾಹಧನ ಲಭ್ಯವಾಗುವಂತದ್ದು. ಪ್ರಸ್ತುತ ಗೌರವಧನ ಹಾಗೂ ಪ್ರೋತ್ಸಾಹಧನ ಸೇರಿ ಸರಾಸರಿ ಒಬ್ಬ ಆಶಾ ಕಾರ್ಯಕರ್ತೆಗೆ ಮಾಸಿಕ 9500 ರೂ. ಪಾವತಿ ಮಾಡಲಾಗುತ್ತಿದೆ. ಇದನ್ನ ಮುಂಗಡವಾಗಿ ಆಶಾ ಕಾರ್ಯಕರ್ತೆಯರಿಗೆ ಒದಗಿಸಲು ಸಿದ್ಧ ಎಂದರು.

ಗೌರವಧನದ ಹೊರತಾಗಿ ಆಶಾ ಕಾರ್ಯಕರ್ತೆಯರಿಗೆ ಲಭ್ಯವಾಗುತ್ತಿರುವ ಪ್ರೋತ್ಸಾಹಧನವನ್ನೂ ಮಾಸಿಕ ವೇತನದ ರೂಪದಲ್ಲಿ ನಿಗದಿಪಡಿಸಿ ನೀಡುವುದು ಸದ್ಯದ ಪರಿಸ್ಥಿತಿಯಲ್ಲಿ ಕಷ್ಟ. ಏಕೆಂದರೆ ಪ್ರತ್ಸಾಹಧನ ಕೇಂದ್ರ ಸರ್ಕಾರ ನೀಡುವ ಅನುದಾನಗಳ ಮೇಲೆ ಅವಲಂಬಿತವಾಗಿದೆ. ಆರ್.ಸಿ.ಎಚ್ ಪೋರ್ಟಲ್ ನಲ್ಲಿ ನಮೂದಾಗುವ ಆಶಾ ಕಾರ್ಯಕರ್ತೆಯರ ಸೇವಾಚಟುವಟಿಕೆಗಳ ಮೇಲೆ ಕೇಂದ್ರ ಸರ್ಕಾರ ಅನುದಾನವನ್ನ ಒದಗಿಸುತ್ತದೆ. ಇದು ಇಂತಿಷ್ಟೇ ಬರುತ್ತದೆ ಖಚಿತವಾಗಿ ಹೇಳಲು ಹೇಗೆ ಸಾಧ್ಯ ಎಂದರು. ನಮಗಿರುವ ಮಾಹಿತಿಯ ಪ್ರಕಾರ ಗೌರವಧನ ಹಾಗೂ ಪ್ರೋತ್ಸಾಹಧನ ಸೇರಿಸಿ ಲೆಕ್ಕ ಹಾಕಿದರೆ ಸರಾಸರಿ ಮಾಸಿಕ 9500 ರೂ ಆಶಾ ಕಾರ್ಯಕರ್ತೆಯರಿಗೆ ಪಾವತಿಯಾಗುತ್ತಿದೆ. ಹೀಗಾಗಿ 9500 ರೂಗಳನ್ನ ಬೇಕಾದರೆ ಮುಂಗಡವಾಗಿ ನೀಡಬಹುದು. ಬಳಿಕ ಆರ್.ಸಿ.ಎಚ್ ಪೋರ್ಟಲ್ ನಲ್ಲಿ ಆಶಾ ಕಾರ್ಯಕರ್ತೆಯರ ಕಾರ್ಯಚಟುವಟಿಕೆಗಳು ನಮೂದಾಗುವುದರ ಅನ್ವಯ ಪ್ರೋತ್ಸಾಹಧನ ಲಭ್ಯವಾಗಲಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದರು.

ಅಲ್ಲದೇ ಮುಂಬರುವ ರಾಜ್ಯ ಬಜೆಟ್ ನಲ್ಲಿ ಆಶಾ ಕಾರ್ಯಕರ್ತೆಯರ ಗೌರವಧನ ಹೆಚ್ಚಳ ಮಾಡುವ ನಿಟ್ಟಿನಲ್ಲಿ ಸಿ ಜೊತೆ ಚರ್ಚಿಸುವುದಾಗಿ ಇದೇ ವೇಳೆ ಸಚಿವ ದಿನೇಶ್ ಗುಂಡೂರಾವ್ ಭರವಸೆ ನೀಡಿದರು. ರಾಜ್ಯ ಸರ್ಕಾರದಿಂದ ನೀಡುತ್ತಿರುವ ಗೌರವಧನ ಹೆಚ್ಚಿಸುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಅವರು ಸಕಾರಾತ್ಮಕ ಚಿಂತನೆ ಹೊಂದಿದ್ದಾರೆ. ಈ ಬಾರಿಯ ಬಜೆಟ್ ನಲ್ಲಿ ಈ ಬಗ್ಗೆ ನಿರ್ಧಾರ ಹೊರಬೀಳಲಿದೆ. ಹೀಗಾಗಿ ಆಶಾ ಕಾರ್ಯಕರ್ತೆಯರು ಪ್ರತಿಭಟನೆ ಕೈ ಬಿಟ್ಟು ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಇಲಾಖೆಯೊಂದಿಗೆ ಸಹಕರಿಸುವಂತೆ ಸಚಿವ ದಿನೇಶ್ ಗುಂಡೂರಾವ್ ಮನವಿ ಮಾಡಿದರು.

ಆಶಾ ಕಾರ್ಯಕರ್ತೆಯರಿಗೆ ರಜೆಗಳನ್ನ ನಿಗದಿ ಮಾಡುವ ಬೇಡಿಕೆ ಕುರಿತು ಸಕಾರಾತ್ಮಕವಾಗಿ ಸ್ಪಂದಿಸಿದ ಸಚಿವ ದಿನೇಶ್ ಗುಂಡೂರಾವ್, ರಜೆಗಳನ್ನ ಕೇಳುವುದು ಆಶಾ ಕಾರದಯಕರ್ತೆಯರ ಹಕ್ಕು. ಈ ನಿಟ್ಟಿನಲ್ಲಿ ಚರ್ಚಿಸಿ ಕ್ರಮ ತೆಗೆದುಕೊಳ್ಳುವುದಾಗಿ ಭರವಸೆ ನೀಡಿದರು.

# ಬೇರುಗಂಟು ರೋಗದಿಂದ ಹಿಪ್ಪುನೇರಳೆ ಸೊಪ್ಪಿನ ಗುಣಮಟ್ಟ ಕುಂಠಿತ

**ಶಿಡ್ಲಘಟ್ಟ:** ಬೇರುಗಂಟು ರೋಗದ ತೀವ್ರತೆಯು ಹೆಚ್ಚಾಗಿ ಕಂಡು ಬರುತ್ತಿದ್ದು ಸೊಪ್ಪಿನ ಗುಣಮಟ್ಟ ಹಾಗು ಇಳುವರಿಯು ಕುಂಠಿತವಾಗುತ್ತಿರುವುದರಿಂದ ಹಲವಾರು ರೈತರು ತೋಟಗಳನ್ನು ತೆಗೆದು ಹಾಕುತ್ತಿದ್ದಾರೆ ಆದ್ದರಿಂದ ಹಿಪ್ಪುನೇರಳೆ ಬೆಳೆಯಲ್ಲಿ ಬೇರುಗಂಟು ರೋಗದ ಸಮಗ್ರ ನಿರ್ವಹಣೆಗಾಗಿ ಜಂತು ಹುಳುವಿನ ಶತ್ರು ಸಸ್ಯಗಳನ್ನು (ಸಾಸಿವೆ, ಚೆಂಡು ಹೂ, ದಂಟುಸೊಪ್ಪು, ಸೆಣಬು, ಎಳ್ಳು, ಕಹಿಸೌತೆ) ಹಿಪ್ಪುನೇರಳೆ ಸಸ್ಯಗಳ ನಡುವೆ ಬೆಳೆಸುವುದು ಅವಶ್ಯವಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರ, ಚಿಂತಾಮಣಿಯ ಸಸ್ಯ ರೋಗಶಾಸ್ತ್ರದ ವಿಜ್ಞಾನಿಗಳಾದ, ಡಾ.ಬಿ.ಸ್ವಾತಿ ತಿಳಿಸಿದರು.

ತಾಲ್ಲೂಕಿನ ಅಪ್ಪೇಗೌಡನಹಳ್ಳಿಯಲ್ಲಿ ಹಿಪ್ಪುನೇರಳೆ ಬೆಳೆಯಲ್ಲಿ ಬೇರು ಗಂಟು ರೋಗದ ಸಮಗ್ರ ನಿರ್ವಹಣೆಯ ಕ್ಷೇತ್ರೋತ್ಸವ ಕೃಷಿ ವಿಜ್ಞಾನ ಕೇಂದ್ರ, ಚಿಂತಾಮಣಿ ವತಿಯಿಂದ ಗ್ರಾಮದ ರೈತರಾದ ಗೋವಿಂದುರಾಜುರವರ ತೋಟದಲ್ಲಿ ಅನುಷ್ಠಾನಗೊಳಿಸಿದ ಮುಂಚೂಣಿ ಪ್ರಾತ್ಯಕ್ಷಿಕೆಯ ಹಿಪ್ಪುನೇರಳೆ ಬೆಳೆಯಲ್ಲಿ ಬೇರುಗಂಟು ರೋಗದ ಸಮಗ್ರ ನಿರ್ವಹಣೆಯ ಕುರಿತು ಕ್ಷೇತ್ರೋತ್ಸವದಲ್ಲಿ ಅವರು ಮಾತನಾಡಿದರು.




ಬೇರುಗಮಟು ರೋಗವನ್ನು ನಿವಾರಿಸಲು ವರ್ಷಕ್ಕೆ ಪ್ರತಿ ಎಕರೆಗೆ 400 ಕೆ.ಜಿ. ಬೇವಿನ ಹಿಂಡಿಯನ್ನು ತೋಟಕ್ಕೆ 2 ಬಾರಿ ಹಾಕುವುದು, 3 ಕೆ.ಜಿ. ಟ್ರೆಂಕೋಡರ್ಮಾವಿರಿಡೆ ,1 ಕೆ.ಜಿ ಪ್ಯಾಸಿಲೋಮೈಸಿಸ್‌ನ್ನು 250 ಕೆ.ಜಿ. ಕೊಟ್ಟಿಗೆ ಗೊಬ್ಬರದೊಂದಿಗೆ ಪುಷ್ಠೀಕರಿಸಿದ ಮಿಶ್ರಣವನ್ನು ಪ್ರತಿ ಗಿಡಕ್ಕೆ 300 ಗ್ರಾಂ ನಂತೆ 30–40 ದಿನಗಳ ಅಂತರದಲ್ಲಿ ಎರಡು ಬಾರಿ ಬಳಸುವುದು, 15 ದಿನಗಳ ನಂತರ ಮೈಕ್ರೋಬಿಯಲ್ ಕನ್ಸಾರ್ಷಿಯವನ್ನು 40 ಮಿ.ಲೀ/ಪ್ರತಿ ಲೀ ನೀರಿಗೆ ಹಾಕಿ ಗಿಡದ ಬುಡಕ್ಕೆ ಹಾಕುವುದು,ಸೋಂಕು ತೀವ್ರವಾಗಿದ್ದಲ್ಲಿ ಪ್ಲೂಪೈರಾಮ್ 34.48% ಎಸ್.ಸಿಯನ್ನು 1ಮಿ.ಲೀ./ಪ್ರತಿ ಲೀಟರ್ ನೀರಿಗೆ ಬೆರಸಿ ಬುಡಕ್ಕೆ ಹಾಕುವುದರಿಂದ (ಸುರಕ್ಷಿತ ಅವದಿ: 15 ದಿನಗಳು) ರೈತರ ರೋಗವನ್ನು ನಿರ್ವಹನಣೆ ಮಾಡಿ ಉತ್ತಮ ಇಳುವರಿ ಪಡೆಯಬಹುದಾಗಿದೆ ಎಂದು ರೈತರಿಗೆ ಮಾಹಿತಿ ನೀಡಿದರು.

ರೇಷ್ಮೆ ಇಲಾಖೆಯ ನಿರ್ದೇಶಕರಾದ ಅಕ್ಮಲ್ ಪಾಷ ಮಾತನಾಡಿ ಇಲಾಖೆಯ ಯೋಜನೆಗಳ ಬಗ್ಗೆ ಹಾಗು ರೈತರು ನೂತನ ತಾಂತ್ರಿಕತೆಗಳನ್ನು ಅಳವಡಿಸಿಕೊಂಡು ಇತರೆ ರೈತರಿಗೆ ತಿಳಿಸುವಲ್ಲಿ ಮುಂದಾಗಬೇಕೆಂದರು.

ಪ್ರಾತ್ಯಕ್ಷಿಕೆಯಲ್ಲಿ ಅಪ್ಪೇಗೌಡನಹಳ್ಳಿ ಗ್ರಾಮದ 45 ಜನ ರೈತ ಹಾಗೂ ರೈತ ಮಹಿಳೆಯರು ಭಾಗವಹಿಸಿ ಸದೂಪಯೋಗ ಪಡೆದುಕೊಂಡರು.

ರೈತರಾದ ಗೋವಿಂದುರಾಜು ಮಾತನಾಡಿ ಚಿಂತಾಮಣಿ ಕೃಷಿ ವಿಜ್ಞಾನ ಕೇಂದ್ರವು ಕೈಗೊಂಡ ಪ್ರಾತ್ಯಕ್ಷಿಕೆಯಲ್ಲಿ ಪರಿಚಯಿಸಿರುವ ತಂತ್ರಜ್ಞಾನಗಳ ಬಳಕೆಯಿಂದ ಹಿಪ್ಪುನೇರಳೆ ಬೆಳೆಯಲ್ಲಿ ಹೆಚ್ಚಿನ ಇಳುವರಿ ಹಾಗು ಗುಣಮಟ್ಟದ ಸೊಪ್ಪನ್ನು ಪಡೆದಿದ್ದೇವೆ ಎಂದು ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕೃಷಿ ವಿಜ್ಞಾನ ಚಿಂತಾಮಣಿ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಕೇಂದ್ರದ ಮುಖ್ಯಸ್ಥರಾದ ಡಾ.ಪಾಪಿರೆಡ್ಡಿ, ತೋಟಗಾರಿಕಾ ವಿಜ್ಞಾನಿಗಳಾದ ಡಾ.ಆರ್. ಪ್ರವೀಣ್ ಕುಮಾರ್ ಮತ್ತು ತಾಂತ್ರಿಕ ಅಧಿಕಾರಿಗಳು ಡಾ.ಅರುಣಾ ,ರೈತರಾದಮುನೀಂದ್ರ, ಹನುಮಂತರೆಡ್ಡಿ, ನಾರಾಯಣಸ್ವಾಮಿ,ಪ್ರದೀಪ್,ವಿಜಯರಾಘವರೆಡ್ಡಿ, ನೀಲಮ್ಮ, ಗಂಗರತ್ನ,ಗಿರೀಶ್, ಮುನಿಆಂಜಿನಪ್ಪ, ಕಷ್ಣೇಗೌಡ ಮುಂತಾದವರು ಪಾಲ್ಗೊಂಡಿದ್ದರು.

# ಗಾಣಿಗರ ಹಬ್ಬ ಯಶಸ್ವಿಗೊಳಿಸಿ ರಾಜ್ಯಾಧ್ಯಕ್ಷ ವಿಜಯ್ ಕುಮಾರ್



**ಮುಳಬಾಗಲು:** ಬೆಂಗಳೂರಿನ ಶ್ರೀಕ್ಷೇತ್ರ ತೈಲೇಶ್ವರ ಗಾಣಿಗರ ಮಹಾ ಸಂಸ್ಥಾನದ ಮಠದಲ್ಲಿ ಜ.11ರಂದು ನಡೆಯಲಿರುವ ಗಾಣಿಗರ ಹಬ್ಬಕ್ಕೆ ರಾಜ್ಯದ ಗಾಣಿಗ ಸಮುದಾಯದವರು ಸಕಾಲಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕೆಂದು ಅಖಿಲ ಕರ್ನಾಟಕ ಜ್ಯೋತಿ ನಗರ ವೈಶ್ಯ ಗಾಣಿಗರ ಸಂಘದ ರಾಜ್ಯಾಧ್ಯಕ್ಷ ಪಿ.ಜಿ.ವಿಜಯ ಕುಮಾರ್ ಗಾಣಿಗ ಮನವಿ ಮಾಡಿದ್ದಾರೆ.

ಸುದ್ದಿಗಾರರೊಂದಿಗೆ ಸಮುದಾಯದ ಮಾತನಾಡಿ, ಬೇಡಿಕೆಗಳನ್ನು ಈಡೇರಿಸಲು ಸಿಎಂ, ಡಿಸಿಎಂ ಹಾಗೂ ನಾನಾ ಇಲಾಖೆಗಳ ಸಚಿವರಿಗೆ ಹಕ್ಕೊತ್ತಾಯ ಮಾಡಲಾಗುವುದು. ಕಾರ್ಯಕ್ರಮದ ಆಹ್ವಾನ ಪತ್ರಿಕೆಗಳನ್ನು ನೀಡುವ ಸಂದರ್ಭದಲ್ಲಿ ಬಹುತೇಕರು ಸ್ವಯಂ ಪ್ರೇರಿತರಾಗಿ ಬಸ್ಸುಗಳನ್ನು ಮಾಡಿಕೊಂಡು ಬರುವುದಾಗಿ ತಿಳಿಸಿರುವುದು ಒಳ್ಳೆಯ ಬೆಳವಣಿಗೆ. ಜ.11ರಂದು ಶ್ರೀ ಪೂರ್ಣಾನಂದಪುರಿ ಮಹಾ ಸ್ವಾಮಿಗಳ ಪೀಠಾರೋಹಣದ ದ್ವಿತೀಯ ವಾರ್ಷಿಕೋತ್ಸವ ಹಾಗೂ ಪ್ರವಚನಾಲಯ, ಶಾಲಾ ಕಟ್ಟಡ, ಪ್ರಸಾದ ಮನೆಯ ಕಟ್ಟಡಗಳ ಉದ್ಘಾಟನೆ ನಡೆಯಲಿರುವುದರಿಂದ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್‌ನಲ್ಲಿ ಬಿ.ಜೆ.ಪುಟ್ಟಸ್ವಾಮಿ ಗ್ರಂಥ ಬಿಡುಗಡೆ, ಸ್ವರ್ಣ ಸಂಚಿಕೆ, ಗಾಣಿಗ ಸೂರ್ಯಗ್ರಂಥ, ಸಾಮಾಜಿಕ ಜಾಲತಾಣಗಳ ಉದ್ಘಾಟನೆ ನಡೆಯಲಿದೆ ಎಂದು ತಿಳಿಸಿದರು.

ಗಾಣಿಗ ಮಠದ ಪೀಠಾಧಿಪತಿ ಶ್ರೀ ಪೂರ್ಣಾನಂದಪುರಿ ಮಹಾ ಸ್ವಾಮಿಗಳು ಎಲ್ಲವನ್ನೂ ತ್ಯಾಗ ಮಾಡಿ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ಗಾಣಿಗರ ಅಭಿವೃದ್ಧಿ ನಿಗಮ ಸ್ಥಾಪನೆ ಸೇರಿದಂತೆ ಇತರೆ ಸೌಲಭ್ಯಗಳನ್ನು ಕಲ್ಪಿಸುವಂತೆ ಆಗ್ರಹಿಸಿ ಸರಕಾರಕ್ಕೆ ಮನವಿ ಸಲ್ಲಿಸಲಿದ್ದಾರೆ. ಈ ಕಾರಣದಿಂದ ಸಮುದಾಯದವರು ತಪ್ಪದೇ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ತಮ್ಮ ಸಂಘಟನಾ ಶಕ್ತಿಯನ್ನು ಪ್ರದರ್ಶನ ಮಾಡಬೇಕೆಂದು ಅವರು ಮನವಿ ಮಾಡಿದರು.

# ಕೃಷಿಕ ಸಮಾಜದ ಪದಾಧಿಕಾರಿಗಳ ಆಯ್ಕೆ



**ಶಿಡ್ಲಘಟ್ಟ:** ತಾಲ್ಲೂಕು ಕೃಷಿಕ ಸಮಾಜದ 2025–30ನೇ ಸಾಲಿನ 5 ವರ್ಷಗಳ ಅವಧಿಗೆ ಪದಾಧಿಕಾರಿಗಳ ಆಯ್ಕೆಗೆ ನಡೆದ ಚುನಾವಣೆಯಲ್ಲಿ ಪದಾಧಿಕಾರಿಗಳ ಎಲ್ಲಾ ಸ್ಥಾನಗಳಿಗೂ ಒಂದೊಂದೇ ನಾಮಪತ್ರ ಸಲ್ಲಿಕೆಯಾಗಿದ್ದು ಅವಿರೋಧ ಆಯ್ಕೆ ನಡೆಯಿತು.

ಮಳ್ಳೂರು ಶಿವಣ್ಣ(ಅಧ್ಯಕ್ಷ), ದೊಡ್ಡಚೊಕ್ಕಂಡಹಳ್ಳಿ ಪಾಪಣ್ಣ(ಉಪಾಧ್ಯಕ್ಷ), ದಿಬ್ಬೂರಹಳ್ಳಿ ಡಿಎಸ್‌ಎನ್.ರಾಜು (ಪ್ರಧಾನ ಕಾರ್ಯದರ್ಶಿ), ದೇವರಮಳ್ಳೂರು ರೆಡ್ಡಿಸ್ವಾಮಿ(ಖಜಾಂಚಿ), ನಾಗಮಂಗಲದ ಎನ್.ಸಿ.ಶ್ರೀನಿವಾಸಗೌಡ (ಜಿಲ್ಲಾ ಪ್ರಧಾನ ಕಾರ್ಯದರ್ಶಿ) ಆಗಿ ಅವಿರೋಧ ಆಯ್ಕೆಯಾಗಿದ್ದಾರೆ.

ಇನ್ನುಳಿದಂತೆ ಕಾರ್ಯಕಾರಿ ಸಮಿತಿ ಸದಸ್ಯರಾಗಿ ತರಬಹಳ್ಳಿ ಭಾಸ್ಕರ್‌ರೆಡ್ಡಿ, ಕೆ.ವಿ.ಪ್ರಕಾಶ್‌ರೆಡ್ಡಿ, ಎ.ಜಿ.ಬೈರಾರೆಡ್ಡಿ, ವಿ.ಎಂ. ಬೈರಾರೆಡ್ಡಿ, ಎಂ.ಟಿ.ಕೆಂಪೇಗೌಡ, ಬಿ.ಕೆ.ಸತೀಶ್, ಗೊರಮಡಗು ಜೆ.ಆರ್.ರಾಜಣ್ಣ, ಎಸ್.ಎನ್.ವೆಂಕಟೇಶ್, ಎಂ.ಸಿ. ಜಗದೀಶ್ ಹಾಗೂ ಎಂ.ಆರ್.ಮಂಜುನಾಥಬಾಬು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರವಿ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು.

# ವಿಶ್ವ ರೈತ ದಿನಾಚರಣೆ ಪ್ರಯುಕ್ತ ಸಮಾವೇಶ

**ಕುಕನೂರು:** ರಾಜ್ಯದ ಎಲ್ಲ ಮುಂಚೂಣಿ ರೈತ ಸಂಘಗಳ ಅಧ್ಯಕ್ಷರನ್ನು ಒಳಗೊಂಡಂತೆ ಕುಕನೂರು ಪಟ್ಟಣದಲ್ಲಿ ಇದೇ ಜನವರಿ 21 ರಂದು ರಾಜ್ಯ ರೈತರ ಮಹಾ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಭಾರತೀಯ ಕ್ರಾಂತಿ ಕಾರಿ ಕಿಸಾನ್ ಸೇನೆಯ ರಾಷ್ಟ್ರೀಯ ಅಧ್ಯಕ್ಷ ಎಂ ಎನ್ ಕುಕನೂರು ಹೇಳಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಮತ್ತು ರಾಷ್ಟ ಮಟ್ಟದಲ್ಲಿ ರೈತ ಹೋರಾಟಗಳು ಇನ್ನೂ ಪರಿಣಾಮಕಾರಿಯಾಗಿ ನಡೆಯಬೇಕು, ಈ ನಿಟ್ಟಿನಲ್ಲಿ ರಾಜ್ಯದ ವಿವಿಧ ರೈತ ಸಂಘಟನೆ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಒಗ್ಗೂಡಿ ರೈತರಿಗೆ ಸಂಬಂದಿಸಿದ ಸಮಸ್ಯೆಗಳ ಸಂವಾದ ನಡೆಯಲಿದೆ.

ಸಮಾವೇಶದಲ್ಲಿ ರೈತ ಮುಖಂಡರಾದ ಶಾಸಕ ದರ್ಶನ್ ಪುಟ್ಟಣ್ಣಯ್ಯ, ಪಚ್ಚೆ ನಂಜುಂಡ ಸ್ವಾಮಿ, ಇತರರು ಭಾಗವಹಿಸುತ್ತಿದ್ದಾರೆ ಇದೇ ಸಂದರ್ಭದಲ್ಲಿ ಭಾರತೀಯ ಕ್ರಾಂತಿಕಾರಿ ಕಿಸಾನ್ ಸೇನೆ ಸಂಘಟನೆಯ ಅಧಿಕೃತ ಉದ್ಘಾಟನೆ ನಡೆಯಲಿದೆ ಎಂದು ಎಂ ಎನ್ ಕುಕನೂರು ಅವರು ಹೇಳಿದರು.

ಈ ಸಂದರ್ಭದಲ್ಲಿ ಸಂಘಟನೆ ಮುಖಂಡರಾದ ರಾಜೇಶ್ ವಾಲ್ಮೀಕಿ, ನಿಂಗಪ್ಪ ಬೇಣಕಲ್, ಮಜೀದ್ ಖಾನ್, ಫಿಡ್ಡನ ಗೌಡ ಮಾಲಿ ಪಾಟೀಲ್ ಇದ್ದರು.



# ಅಂಗನವಾಡಿ ಸಹಾಯಕಿಯರ ಹುದ್ದೆಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಯಳಂದೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ 4 ಅಂಗನವಾಡಿ ಕಾರ್ಯಕರ್ತೆಯರ ಹಾಗೂ 7 ಸಹಾಯಕಿಯರ ಹುದ್ದೆಗಳಿಗೆ ಗೌರವಧನದ ಆಧಾರದ ಮೇಲೆ ಭರ್ತಿ ಮಾಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಯಳಂದೂರು ತಾಲೂಕಿನ ಕೆಸ್ತೂರು ಗ್ರಾಮ ಪಂಚಾಯಿತಿಯ ಕಟ್ನವಾಡಿ–1 ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಗೌಡಳ್ಳಿ ಗ್ರಾಮಪಂಚಾಯಿತಿಯ ಮಲಾರಪಾಳ್ಯ ಮಿನಿ ಅಂಗನವಾಡಿ ಕೇಂದ್ರ (ಇತರೆ), ಹೊನ್ನೂರು ಗ್ರಾಮಪಂಚಾಯಿತಿಯ ಹೊನ್ನೂರು–1 ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಯಳಂದೂರಿನ 9ನೇ ಅಂಗನವಾಡಿ ಕೇಂದ್ರ (ವಾರ್ಡ್ ನಂ 5) (ಪರಿಶಿಷ್ಟ ಜಾತಿ) ಕೇಂದ್ರದಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು.

ಕೆಸ್ತೂರು ಗ್ರಾಮಪಂಚಾಯಿತಿಯ ಕೆಸ್ತೂರು–5ನೇ ಅಂಗನವಾಡಿ ಕೇಂದ್ರ (ಇತರೆ), ಬಸಾಪುರ ಅಂಗನವಾಡಿ ಕೇಂದ್ರ (ಇತರೆ), ಮಾಂಬಳ್ಳಿ ಗ್ರಾಮಪಂಚಾಯಿತಿಯ ಮಾಂಬಳ್ಳಿ–2ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಯರಿಯೂರು ಗ್ರಾಮ ಪಂಚಾಯಿತಿಯ ಯರಿಯೂರು–2ನೇ ಅಂಗನವಾಡಿ ಕೇಂದ್ರ (ಇತರೆ), ಗಣಿಗನೂರು 2ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟ ಪಂಗಡ) ಗೌಡಳ್ಳಿ ಗ್ರಾಮಪಂಚಾಯಿತಿಯ ಗೌಡಹಳ್ಳಿ 2ನೇ ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ), ಮದ್ದೂರು ಗ್ರಾಮ ಪಂಚಾಯಿತಿಯ ಬೂದಿತಿಟ್ಟಿನ 1ನೇ ಅಂಗನವಾಡಿ ಕೇಂದ್ರ (ಇತರೆ), ಯರಗಂಬಳ್ಳಿ ಗ್ರಾಮಪಂಚಾಯಿತಿಯ ಗಂಗವಾಡಿ ಅಂಗನವಾಡಿ ಕೇಂದ್ರ (ಪರಿಶಿಷ್ಟ ಜಾತಿ) ಅಂಗನವಾಡಿ ಕೇಂದ್ರಗಳಲ್ಲಿ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು.

ಅರ್ಜಿಗಳನ್ನು ವೆಬ್ ಸೈಟ್ https://karnatakaone.kar.nic.in/abcd/ ಮೂಲಕ ಫೆಬ್ರವರಿ 7 ರೊಳಗೆ ಸಲ್ಲಿಸಬಹದು ಎಂದು ಯಳಂದೂರಿನ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

# ಚಾಮರಾಜನಗರ: ಮಲಗಿದ್ದ ರೈತನ ಮೇಲೆ ಕಾಡಾನೆ ದಾಳಿ: ಪ್ರಾಣಾಪಾಯದಿಂದ ಪಾರು

**ಚಾಮರಾಜನಗರ:** ಜಮೀನಿನಲ್ಲಿ ಹುರುಳಿ ಕಾವಲು ವೇಳೆ ಟಾರ್ಪಲ್ ಹೊದ್ದು ಮಲಗಿದ್ದ ರೈತನ ಮೇಲೆ ಕಾಡಾನೆ ಆನೆ ದಾಳಿ ನಡೆಸಿ ತುಳಿದ ಘಟನೆ ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ದೇಶಿಪುರದಲ್ಲಿ ನಡೆದಿದೆ.

ಚಾಮರಾಜನಗರ ಜಿಲ್ಲೆಯ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಕಾಡಂಚಿನ ಗ್ರಾಮವಾದ ಗುಂಡ್ಲುಪೇಟೆ ತಾಲ್ಲೂಕಿನ ದೇಶಿಪುರ ಗ್ರಾಮದಲ್ಲಿ ಘಟನೆ ನಡೆದಿದೆ.

ಹುರುಳಿ ಒಕ್ಕಣೆ ಮಾಡಿ ಕಾವಲು ಕಾಯ್ತಿದ್ದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ದೇಶಿಪುರ ಗ್ರಾಮದ ರೈತರಾದ ಸಿದ್ದರಾಜಶೆಟ್ಟಿ ಮತ್ತು ಮಹದೇವಶೆಟ್ಟಿ ರೈತರು.

ರಸ್ತೆ ಬದಿಯಲ್ಲಿರಿಸಿದ್ದ ಹುರುಳಿ ತಿಂದು ಸಾಗುತ್ತಿದ್ದ ಕಾಡಾನೆ ಕಾಲಿಗೆ ಸಿಲುಕಿದ ರೈತ ಸಿದ್ದರಾಜಶೆಟ್ಟಿ ಕುತ್ತಿಗೆ ಕಿವಿ ಭಾಗಕ್ಕೆ ಪೆಟ್ಟಾಗಿದ್ದು, , ಮಹದೇವಶೆಟ್ಟಿ ಪಾರಾಗಿದ್ದಾರೆ.

ಕಾಡಾನೆ ತುಳಿತಕ್ಕೊಳಗಾಗಿ ಜೋರಾಗಿ ಕೂಗಿದ ಸಿದ್ದರಾಜಶೆಟ್ಟಿ ಧ್ವನಿಯಿಂದ ಕಾಡಾನೆ ಕಾಡಿನತ್ತ ಸಾಗಿದೆ.

ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದ ಓಂಕಾರ್ ಅರಣ್ಯ ವಲಯದಲ್ಲಿ ಘಟನೆ ನಡೆದಿದ್ದು, ಕಾಡಿನಿಂದ ಆಹಾರವನ್ನರಸಿ ಕಾಡಿನಿಂದ ಬಂದಿದ್ದ ಒಂಟಿಯಾನೆಯಾಗಿದೆ.

ಘಟನಾ ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳ ಆಗಮಿಸಿ,ಗಾಯಾಳು ಸಿದ್ದರಾಜಶೆಟ್ಟಿರವರನ್ನು ಚಾಮರಾಜನಗರ ಜಿಲ್ಲಾಸ್ಪತ್ರೆಗೆ ಹೆಚ್ಚಿನ ಚಿಕಿತ್ಸೆಗೆ ದಾಖಲು ಮಾಡಲಾಗಿದೆ.





# ಶಿರಾ: ವೈಕುಂಠ ಏಕಾದಶಿ ಸಂಭ್ರಮ



**ಶಿರಾ:** ವೈಕುಂಠ ಏಕಾದಶಿಗೆ ಹರಿದು ಬಂದ ಜನಸಾಗರ ಬೆಳಗಿನ ಕೊರೆಯುವ ಚಳಿಯಲ್ಲಿ ನಗರದ ಲಕ್ಷ್ಮೀ ವೆಂಕಟೇಶ್ವರ ದೇಗುಲ ಸೇರಿದಂತೆ ತಾಲೂಕಿನ ಮರಡಿಗುಡ್ಡದ ಶ್ರೀರಂಗನಾಥ ಸ್ವಾಮಿ ದೇವಾಲಯ ಹಾಗೂ ಮೇಲುಕುಂಟೆ ಶ್ರೀನವ ನೀತ ಬಾಲಕೃಷ್ಣ ಟ್ರಸ್ಟ್ ಸೇರಿದಂತೆ ತಾಲೂಕಿನ ವಿವಿಧ ವಿಷ್ಣುವಿನ ದೇಗುಲಗಳಲ್ಲಿ ಇಂದು ವೈಕುಂಠ ಏಕಾದಶಿ ಮಹೋತ್ಸವ ಭಕ್ತಿ, ವಿಜೃಂಭಣೆಯಿಂದ ನಡೆಯಿತು.

ಬೆಳಗ್ಗೆಯೇ ಸ್ವರ್ಗದ ಬಾಗಿಲು ತೆರೆಯುವ ಜತೆ ವಿಶೇಷ ಪೂಜೆ, ಪ್ರಸಾದ ವಿತರಣೆ ನಡೆಯಿತು. ಭಕ್ತರು ಬೆಳಗಿನಿಂದ ನಿರಂತರ ದೇವಾಲಯಕ್ಕೆ ಆಗಮಿಸಿ ದರ್ಶನ ಪಡೆದು ಕೃತಾರ್ಥರಾದರು.

ನಗರದ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಾಲಯದಲ್ಲಿ ಮತ್ತು ತಾಲೂಕಿನ ರಂಗನಾಥ ಪುರದ ಮರಡಿ ಶ್ರೀರಂಗನಾಥ ಸ್ವಾಮಿ ದೇವಾಲಯಗಳಲ್ಲಿ ವೈಕುಂಠ ಏಕಾದಶಿ ಮಹೋತ್ಸವ ನಡೆಯಿತು. ಬೆಳಗ್ಗೆ 5.30 ರ ವೇಳೆಗೆ ವೈಕುಂಠದ ಬಾಗಿಲು ತೆರೆದು ವಿಶೇಷ ಪೂಜೆ ಸಲ್ಲಿಸಲಾಯಿತು. ವೆಂಕಟೇಶ್ವರ ಮತ್ತು ಲಕ್ಷ್ಮೀ ದೇವಿಗೆ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ನಂತರ ಭಕ್ತರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು. ಮುಂಜಾನೆಯಿಂದಲೇ ಬರಲಾರಂಭಿಸಿದ ಭಕ್ತರು ದೇವರ ದರ್ಶನ ಪಡೆದು ಕಾಣಿಕೆ ಸಲ್ಲಿಸಿದರು. ನಂತರ ದೇವರ ಮೂರ್ತಿಗಳ ತೊಟ್ಟಿಲಲ್ಲಿಟ್ಟು ಪೂಜಿಸಿದ ವೈಕುಂಠದ ದ್ವಾರದ ಮೂಲಕ ಹೊರ ನಡೆದು ಭಕ್ತಿ ಸಮರ್ಪಿಸಿದರು.

# ಕದಬಹಳ್ಳಿ ನರಿ ಜಾತ್ರೆಗೆ ಕಾವೇಟಿ ರಂಗನಾಥ ಸ್ವಾಮಿ ಸನ್ನದಿಯಲ್ಲಿ ಸಜ್ಜು



**ನಾಗಮಂಗಲ:** ತಾಲೂಕಿನ ಬಿಂಡಿಗನವಿಲೆ ಹೋಬಳಿ, ಕದಬಹಳ್ಳಿ ಗ್ರಾಮದ ಪುರಾಣ ಪ್ರಸಿದ್ಧ ಚೋಳರ ಕಾಲದ ನಿರ್ಮಿತ ಕಾವೇರಿ ರಂಗನಾಥಸ್ವಾಮಿಗೆ ಪೂರ್ವಿಕರು ನಡೆಸಿಕೊಂಡು ಬಂದಂತಹ ನರಿ ಜಾತ್ರೆಗೆ ಸಡಗರದಿಂದ ಕದಬಹಳ್ಳಿ ಗ್ರಾಮಸ್ಥರು ಸಜ್ಜಾಗುತ್ತಿದ್ದಾರೆ.

ನಾಗಮಂಗಲ ತಾಲೂಕಿನ ಕದವಳ್ಳಿಯಲ್ಲಿ ಜ.13 ರಿಂದ ನಡೆಯುವ ಜಾತ್ರೆಯಲ್ಲಿ ಪ್ರಸಿದ್ಧ ಮದ್ದು ಗುಂಡಿನ ಸಿಡಿತ, ದೇವರ ರಥೋತ್ಸವ ಕಣ್ಮನ ಸೆಳೆಯಲಿದೆ, ನರಿ ಜಾತ್ರೆ ಎಂದರೆ ಕದಬಹಳ್ಳಿ ಗ್ರಾಮದ ಸುತ್ತಮುತ್ತ ಜನತೆಗೆ ಸಂಭ್ರಮದ ಸಡಗರ ಮನೆ ಮಾಡಲಿದೆ ಸ್ವಾಮಿ ಕಾವೇರಿ ರಂಗನಾಥ ಬೇಟೆ ಹಾಡಿದಂತಹ ಕುರುಹುಗಳು ಈ ಕ್ಷೇತ್ರದಲ್ಲಿ ಕುರುಹುಗಳು ಸಿಗುತ್ತವೆ.

ಈ ಹಿಂದೆ ಪೂರ್ವಿಕರು ನರಿ ಬೇಟೆಯಾಡಿ ಅದಕ್ಕೆ ಚಿನ್ನದ ಮುಗೂತಿ ಚುಚ್ಚಿ ಮೂರು ದಿನಗಳ ಕಾಲ ಪೂಜೆ ಮಾಡಿ ಮತ್ತೆ ಕಾಡಿಗೆ ಬಿಡುತ್ತಿದ್ದರು ಪ್ರಸ್ತುತ ಕಾನೂನು ಕಟ್ಟಲೆ ಕಡಿವಾಣ ಇರುವುದರಿಂದ ನರಿ ಪೂಜೆಯನ್ನು ಸಲ್ಲಿಸಿ ಮೂರು ದಿನಗಳ ಕಾಲ ವಿಜೃಂಭಣೆಯಿಂದ ಜಾತ್ರೆ ನಡೆಸಲಾಗುತ್ತಿದೆ.

ಪುರಾಣ ಪ್ರಸಿದ್ಧ ಕ್ಷೇತ್ರದಲ್ಲಿ ಸ್ವಾಮಿರವರು ಭೇಟಿ ಆಡಿದಂತಹ ಕುರುಹುಗಳು. ಅಶ್ವತ್ ಕಟ್ಟೆ. ಆಂಜನೇಯ ಸ್ವಾಮಿ. ಲಕ್ಷ್ಮಿ ದೇವತೆ. ನರಸಿಂಹಸ್ವಾಮಿ. ರಾಮಾನುಜಾಚಾರ್ಯರು ಸಮೇತರಾಗಿ ಕಾವೇರಿ ರಂಗನಾಥಸ್ವಾಮಿ ದೇವಾಲಯದಲ್ಲಿ ಪ್ರತಿಷ್ಠಾಪನೆಗೊಂಡಿದ್ದಾರೆ.

ಸಂಕ್ರಾಂತಿ ಹಬ್ಬದಂದು ಸುತ್ತಮುತ್ತಲ ಗ್ರಾಮಸ್ಥರು ರಾಜ್ಯದ ಮೂಲೆ ಮೂಲೆಗಳಿಂದ ಆಗಮಿಸುವ ಭಕ್ತರು ನರಿ ಜಾತ್ರೆ ಸಂಭ್ರಮದಲ್ಲಿ ಸ್ವಾಮಿಗೆ ಪೂಜೆ ಸಲ್ಲಿಸುತ್ತಾರೆ.


ನರಿ ಜಾತ್ರೆ ಸಂಭ್ರಮದ ಸಡಗರದಲ್ಲಿರುವ ಕಾವೇರಿ ರಂಗನಾಥಸ್ವಾಮಿ ಅಭಿವೃದ್ಧಿ ಟ್ರಸ್ಟ್ ಆಡಳಿತ ಮಂಡಳಿಯ ಸದಸ್ಯರು ಮತ್ತು ಸುತ್ತಮುತ್ತಲ ಗ್ರಾಮಸ್ಥರು ಭಕ್ತಾದಿಗಳಿಗೆ ನರಿ ಜಾತ್ರೆಗೆ ಆಗಮಿಸುವಂತೆ ಮನವಿ ಮಾಡಿದ್ದು ಕರ್ನಾಟಕದಲ್ಲಿ ಹೆಸರುವಾಸಿಯಾದ ಕದಬಹಳ್ಳಿ ನರಿ ಜಾತ್ರೆಗೆ ಭಕ್ತರ ಸಡಗರ ಕಂಡು ಬಂದಿದೆ.

# ರೈತರ ಮುಖದಲ್ಲಿ ಮಂದಹಾಸ ಮೂಡುವಂತೆ ಕೆಲಸ

ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ನಿರ್ದೇಶಕರ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ವಿ.ಸಿದ್ದಗಂಗಯ್ಯ 78 ಮತ ಪಡೆದು ಭರ್ಜರಿ ಜಯಗಳಿಸಿದ್ದಾರೆ..

ಕೊರಟಗೆರೆ: ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ನಿರ್ದೇಶಕರ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ವಿ. ಸಿದ್ದಗಂಗಯ್ಯ 78 ಮತಗಳನ್ನ ಪಡೆದು ಭರ್ಜರಿ ಜಯಗಳಿಸಿದ ಇನ್ನಲೇ ಪಟ್ಟಣದಲ್ಲಿ ಎನ್‌ಡಿಎ ಕಾರ್ಯಕರ್ತರ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.

ಇತ್ತೀಚಿಗೆ ನಡೆದ ಕೊರಟಗೆರೆ ತಾಲೋಕು ಅಭ್ಯರ್ಥಿಯಾಗಿದ ವಿ. ಸಿದ್ದಗಂಗಯ್ಯ ನ.10 ರಂದು ನಡೆದ ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ನಿರ್ದೇಶಕರ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಕಣದಲ್ಲಿ ಇದ್ದರು. ಗುರುವಾರ ನಡೆದ ಏಣಿಕೆಯಲ್ಲಿ ಕೊರಟಗೆರೆ ತಾಲೂಕು ನಿರ್ದೇಶಕರ ಸ್ಥಾನದಲ್ಲಿದ್ದ ಅರುಣ್ ಕುಮಾರ್ 2 ಮತ ಪಡೆದರೆ, ಈಶ್ವರಯ್ಯ ಅವರು 39 ಮತಗಳು ಪಡೆದಿದ್ದಾರೆ. ವಿ.



ಸಿದ್ದಗಂಗಯ್ಯ ಅವರು 78 ಮತಗಳನ್ನ ಪಡೆದು ಭರ್ಜರಿ ಜಯಶೀಲರಾಗಿದ್ದಾರೆ.

ನೂತನ ನಿರ್ದೇಶಕ ವಿ. ಸಿದ್ದಗಂಗಯ್ಯ ಮಾತನಾಡಿ ಕೊರಟಗೆರೆ ತಾಲೂಕಿನ ಎನ್‌ಡಿಎ ಅಭ್ಯರ್ಥಿಯಾಗಿ ಆಯ್ಕೆ ಮಾಡಿದ ಜೆಡಿಎಸ್ ಹಾಗೂ ಬಿಜೆಪಿ ಪಕ್ಷದ ನಿಷ್ಠವಂತ ಕಾರ್ಯಕರ್ತಗೆ ಈ ಗೆಲವು ಸಲ್ಲುತ್ತದೆ. ತಾಲೂಕಿನ ಹಾಲು ಸಹಕಾರ ಸಂಘದ ಪ್ರತಿಯೊಬ್ಬರು ನನಗೆ ಮತ ನೀಡಿದ್ದಾರೆ ಅವರಿಗೆ ಧನ್ಯವಾದಗಳು. ಮುಂದಿನ ದಿನಗಳಲ್ಲಿ ರೈತ ಮುಖದಲ್ಲಿ ಮಂದಹಾಸ ಮೂಡುವಂತೆ ಮಾಡಲಾಗುವುದು ಎಂದು ತಿಳಿಸಿದರು.

ಕ್ಷೇತ್ರದ ಸಿದ್ದರಬೆಟ್ಟದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಹಾಗೂ ಎಲೆರಾಂಪುರ ಮಠದ ಶ್ರೀ ಹನುಮಂತನಾಥ ಸ್ವಾಮೀಜಿ ಅವರ ಆಶೀರ್ವಾದ ಪಡೆದ ತುಮಲ್ ನೂತನ ನಿರ್ದೇಶಕ ವಿ. ಸಿದ್ದಗಂಗಯ್ಯ...

ಇದೆ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಯುವ ಮೋರ್ಚ ಅಧ್ಯಕ್ಷ ಸ್ವಾಮಿ, ಜೆಡಿಎಸ್ ಕಾರ್ಯಧ್ಯಕ್ಷ ನರಸಿಂಹರಾಜು, ಪಪಂ ಸದಸ್ಯ ಲಕ್ಷ್ಮೀನಾರಾಯಣ್, ಎನ್‌ಡಿಎ ಮುಖಂಡರಾದ ಕಾಮರಾಜು, ರಮೇಶ್, ಕಾಕಿಮಲ್ಲಣ್ಣ, ಮಧುಸೂದನ್, ಚೇತನ್, ನಾರಾಯಣ್ ರಾಜು, ರವಿಕುಮಾರ್, ಸಿದ್ದರಾಜು, ರವಿವರ್ಮ, ಗುರುದತ್, ಪ್ರವೀಣ್ ಸೇರಿದಂತೆ ಇತರರು ಇದ್ದರು.

ತುಮಕೂರು ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ನಿರ್ದೇಶಕರಾಗಿ ವಿ. ಸಿದ್ದಗಂಗಯ್ಯ ಅವರು ಜಯಗಳಿಸಿದ್ದಾರೆ. ತಾಲೂಕಿನಲ್ಲಿ ಇನ್ನೂ ಅಭಿವೃದ್ಧಿಯಾಗಬೇಕಿದ್ದು, ಇವತ್ತೀನ ಜಯ ನಮಗೆ ಮುಂದೆ ಬರುವ ತಾಪಂ ಹಾಗೂ ಜಿಪಂ ಚುನಾವಣೆಗೆ ದಿಕ್ಸೂಚಿಯಾಗಲಿದೆ ಹಾಗೆಯೇ ಮತ ಹಾಕಿದ ಎಲ್ಲಾ ಹಾಲು ಒಕ್ಕೂಟದ ಅಧ್ಯಕ್ಷರು ಸೇರಿದಂತೆ ಪ್ರತಿಯೊಬ್ಬ ರೈತರಿಗೂ ತುಂಬು ಹೃದಯದ ಕೃತಜ್ಞತೆಗಳನ್ನು ತಿಳಿಸಲು ಇಷ್ಟಪಡುತ್ತೇನೆ.

**ಡಾ.ದರ್ಶನ್** । ಬಿಜೆಪಿ ತಾಲೂಕು ಮಂಡಲ ಅಧ್ಯಕ್ಷ

ಇವತ್ತೀನ ನಮ್ಮ ಅಭ್ಯರ್ಥಿ ಜಯ ಹಿಂದೆ ನಿರ್ದೇಶಕರಾದವರ ಆಡಳಿತ ವಿರೋಧಿಯಿಂದ ಇಂದ ವಿ. ಸಿದ್ದಗಂಗಯ್ಯ ಅಧಿಕ ಮತ ಪಡೆದು ಜಯಶೀಲರಾಗಿದ್ದಾರೆ. ನಮ್ಮ ಎನ್‌ಡಿಎ ಕಾರ್ಯಕರ್ತರ ಶ್ರಮದಿಂದ ಇಂದು ನಮಗೆ ಜಯ ಸಿಕ್ಕಿದೆ. ಇದೆ ರೀತಿ ಮುಂದೆ ಬರುವ ಚುನಾವಣೆಯನ್ನ ಒಗ್ಗಟ್ಟಿನಿಂದ ಕೆಲಸ ಮಾಡಲಾಗುವುದು.

**ಶಿವರಾಮಯ್ಯ** । ಮಾಜಿ ಜಿಪಂ ಸದಸ್ಯ



# ಬೇಸಿಗೆಗೂ ಮುನ್ನ ಬಂಡೀಪುರದಲ್ಲಿ ಬೆಂಕಿ ನಿಯಂತ್ರಣಕ್ಕೆ ಅರಣ್ಯ ಇಲಾಖೆ ಕಸರತ್ತು

**ನಾ.ಅಶ್ವಥ್ ಕುಮಾರ್**

**ಚಾಮರಾಜನಗರ:** ಕರ್ನಾಟಕ ತಮಿಳುನಾಡು ಮತ್ತು ಕೇರಳ ಗಡಿಗಳಿಗೆ ವಿಸ್ತಾರಗೊಂಡಿರುವ ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬೇಸಿಗೆಗೂ ಮುನ್ನ ಬೆಂಕಿ ಅವಘಡ ನಿಯಂತ್ರಣಕ್ಕೆ ಅರಣ್ಯ ಇಲಾಖೆ ಕಸರತ್ತು ಮಾಡುತ್ತಿದ್ದು, ಈಗಾಗಲೇ ಶೇ 80 ರಷ್ಟು ಬೆಂಕಿ ನಿಯಂತ್ರಣ ರೇಖೆ ನಿರ್ಮಿಸಲಾಗಿದೆ.

ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ಹಾಗೂ ಹುಲಿ ಸಂರಕ್ಷಿತ ಪ್ರದೇಶದಲ್ಲಿನ 13 ವಲಯದಲ್ಲಿ ಸುಮಾರು 2650 ಚದರ ಕಿಲೋ ಮೀಟರ್ಫೈರ್ಲೈನ್ ಮಾಡಡಲಾಗಿದೆ.

ಕರ್ನಾಟಕ ತಮಿಳುನಾಡು ಮತ್ತು ಕೇರಳ ರಾಜ್ಯಗಳ ಗಡಿಗಳಿಗೆ ವಿಸ್ತರಿಸಿಕೊಂಡಿರುವ ಚಾಮರಾಜನಗರ ಜಿಲ್ಲೆಯ ಬಂಡೀಪುರ ರಾಷ್ಟ್ರೀಯ ಉದ್ಯಾನವನ ಹಾಗೂ ಹುಲಿ ಸಂರಕ್ಷಿತ ಪ್ರದೇಶದೊಳಗೆ ರಾಷ್ಟ್ರೀಯ ಹೆದ್ದಾರಿ, ಸೂಕ್ಷ್ಮ ಪ್ರದೇಶ, ಟ್ರೈಗರ್ಹಾಗೂ ವಾಟರ್ ರಸ್ತೆಗಳಲ್ಲಿ ಬೆಂಕಿ ತಡೆಗೆ ಬಂಡೀಪುರದ 13 ವಲಯಗಳಲ್ಲಿ ಫೈರ್ಲೈನ್ ಕೆಲಸ ಆರಂಭವಾಗಿದೆ.

ಈಗಾಗಲೇ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ರಾಷ್ಟ್ರೀಯ ಹೆದ್ದಾರಿ, ಟ್ರೈಗರ್ಹಾಗೂ ವಾಟರ್ರಸ್ತೆಗಳಲ್ಲಿ 10 ರಿಂದ 20 ಮೀಟರ್ತನಕ ಫೈರ್ಲೈನ್ ಮಾಡಿದ್ದಾರೆ. ಈ ಬಾರಿ ಬೆಂಕಿ ಬೀಳದಂತೆ ಅರಣ್ಯ ಇಲಾಖೆ ಎಲ್ಲ ಮುಂಜಾಗೃತ ಕ್ರಮವಾಗಿ ಬೇಸಿಗೆ ಆರಂಭಕ್ಕೂ ಮುನ್ನವೇಫೈರ್ಲೈನ್ ಮಾಡಿದ್ದು ಈಗಹೆದ್ದಾರಿಯಲ್ಲಿ



ಹಗಲು ರಾತ್ರಿ ಸಿಬ್ಬಂದಿ ಗಸ್ತು ತಿರುಗುತ್ತಿದ್ದಾರೆ.

ಬಂಡೀಪುರ ಅರಣ್ಯದಲ್ಲಿ ತಮಿಳುನಾಡು ಕೇರಳ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಗಳಿವೆ. ಹೆದ್ದಾರಿ ಮಾತ್ರವಲ್ಲದೆ ಅರಣ್ಯ ವಲಯಗಳಲ್ಲಿ ವಾಹನಗಳು ಸಂಚರಿಸುವ ರಸ್ತೆಗಳು ಹಾಗೂ ಸೂಕ್ಷ್ಮ ಪ್ರದೇಶಗಳಲ್ಲಿನ ರಸ್ತೆಗಳಲ್ಲಿ ಫೈರ್ ಲೈನ್ ಆಗಿದ್ದು, ಫೈರ್ ಲೈನ್ ಕೆಲಸ ಶೇ.80 ರಷ್ಟು ನಡೆದಿದೆ.

ಚಾಮರಾಜನಗರ ಜಿಲ್ಲೆಯ ಬಂಡೀಪುರ ಸಂರಕ್ಷಿತ ಅರಣ್ಯದಲ್ಲಿ 450 ಫೈರ್ವಾಚರ್ಗಳ ನೇಮಕ ಈ ತಿಂಗಳ ಅಂತ್ಯದೊಳಗೆ ಆಗಲಿದೆ. 13 ವಲಯಗಳಲ್ಲಿ ಒಂದು ಅಥವಾ ಎರಡು ಹೆಚ್ಚುವರಿ ಜೀಪು ನೀಡಲಾಗಿದೆ. ಎಲ್ಲ ವಲಯಗಳಲ್ಲಿ ಎರಡು ವಾಚ್ ಟವರ್ಗಳಿದ್ದು, ವಾಚ್ ಟವರ್ ಇಲ್ಲದ ಕಡೆಗಳಲ್ಲಿ ಮಚ್ಚಾನ್ ನಲ್ಲಿ ಬೆಳಗ್ಗೆ 6 ರಿಂದ ಸಂಜೆ 6 ತನಕ ಹದ್ದಿನ ಕಣ್ಣು ಇಟ್ಟಿದ್ದಾರೆ. ಬೆಂಕಿ ನಂದಿಸುವ ಬ್ಲೋಯರ್ಸ್, ಸ್ಪೇ ಯರ್ಸ್, ಫೈರ್ ಬೇಯರ್ಸ್ ಪರಿಶೀಲನೆ ನಡೆಸಿ ಸಣ್ಣ ಪುಟ್ಟ ದುರಸ್ತಿ ಕೆಲಸ ಆಗಿದೆ. ಅರಣ್ಯ ಸಿಬ್ಬಂದಿ, ಫೈರ್ವಾಚರ್ಜೊತೆಗೆ ವಿಶೇಷ ಹುಲಿ ಸಂರಕ್ಷಣ ಪಡೆಯ ಸಿಬ್ಬಂದಿ ಕಾಡಿನ ಅಗತ್ಯ ಸ್ಥಳಗಳಲ್ಲಿ ಗಸ್ತು ನಡೆಸುತ್ತಿದ್ದಾರೆ.

> ಪ್ರಸ್ತುತ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಬೆಂಕಿ ಬೀಳದಂತೆ ಅರಣ್ಯ ಇಲಾಖೆ ಎಲ್ಲ ರೀತಿಯ ಮುಂಜಾಗ್ರತೆ ಕ್ರಮ ತೆಗೆದುಕೊಂಡಿದೆ.
> ಕಾಡಂಚಿನ ಗ್ರಾಮಗಳ ರೈತರು ಜಮೀನಿನಲ್ಲಿ ಬೆಂಕಿ ಹಾಕುವಾಗ ಮುನ್ನಚ್ಚರಿಕೆ ಇರಲಿ. ಕಾಡು ಹಾಗೂ ಪ್ರಾಣಿಗಳ ಸಂರಕ್ಷಣೆಗೆ ರೈತರು, ಸಾರ್ವಜನಿಕರ ಸಹಕಾರ ಇಲಾಖೆ ಮೇಲಿರಲಿ.
>
> **ಎಸ್.ಪ್ರಭಾಕರನ್**
> । ಅರಣ್ಯ ಸಂರಕ್ಷಣಾಧಿಕಾರಿ ಬಂಡೀಪುರ

ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಹಕಾರದಲ್ಲಿ ಬೆಂಕಿ ತಡೆಗೆ ಎಲ್ಲಾ ಸರ್ವ ಪ್ರಯತ್ನ ಹಾಗೂ ಮುಂಜಾಗೃತ ಕ್ರಮಗಳನ್ನು ಅರಣ್ಯ ಇಲಾಖೆ ತೆಗೆದುಕೊಂಡಿದೆ. ಫೈರ್ ತಡೆ ಸಂಬಂಧ ಜಂಗಲ್ ಕಟಿಂಗ್ ಹಾಗೂ ಬರ್ನ್ ಮಾಡುವ ಕೆಲಸ ಶೇ.80ರಷ್ಟು ಮುಗಿದಿದೆ. ಇನ್ನೇನಿದ್ದರೂ ಬೇಸಿಗೆ ಮುಗಿವ ತನಕ ಇಲಾಖೆ ಅಧಿಕಾರಿ, ಸಿಬ್ಬಂದಿ ಹಾಗೂ ಫೈರ್ವಾಚರ್ಗಗಲು ರಾತ್ರಿ ಕೆಲಸಮಾಡಲು ಸೂಚನೆ ನೀಡಲಾಗಿದೆ ಎಂದು ಬಂಡೀಪುರದ ಅರಣ್ಯ ಸಂರಕ್ಷಣಾಧಿಕಾರಿ ಎಸ್. ಪ್ರಭಾಕರನ್ ತಿಳಿಸಿದರು.

ಮುಂದಿನ ದಿನಗಳಲ್ಲಿ ಬೇಸಿಗೆ ಆರಂಭದ ಹಿನ್ನೆಲೆ ಕಾಡಿನ ಪ್ರಮುಖ ಸ್ಥಳ ಹಾಗೂ ಹೆದ್ದಾರಿಯಲ್ಲಿ ಡ್ರೋಣ್ ಮೂಲಕ ಕಿಡಿಗೇಡಿಗಳ ಚಲನ, ವಲನಗಳ ಮೇಲೆ ನಿಗಾ ಇಡಲಾಗಿದೆ. ಅಗ್ನಿಶಾಮಕ ದಳಕ್ಕೆ ಪತ್ರ ಕೂಡ ಬರೆಯಲಾಗಿದೆ. ಈಗಾಗಲೇ ಗುಂಡ್ಲುಪೇಟೆ ಹಾಗೂ ಬಂಡೀಪುರ ಉಪ ವಿಭಾಗದ ಅಧಿಕಾರಿಗಳ ಸಭೆ ನಡೆಸಲಾಗಿದೆ ಎಂದರು.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿರುವ ಸೋಲಾರ್ ಬೋರ್ವೆಲ್ಗಳ ತಪಾಸಣೆ ನಡೆಸಿದ್ದು, ಕೆರೆಕಟ್ಟೆಗಳಿಗೆ ನೀರುತುಂಬಿಸಲು ವಲಯ ಅರಣ್ಯಾಧಿಕಾರಗಳಿಗೆ ಹೇಳಲಾಗಿದೆ. ಕೆರೆ ಕಟ್ಟೆಗಳಲ್ಲಿ ನೀರಿದ್ದರೆ ವನ್ಯಜೀವಿಗಳಿಗೂ ಅನುಕೂಲವಾಗಲಿದೆ ಎಂದರು.



## ವಮ್ಮಸಂದ್ರ ಗ್ರಾಮ ಕಾರ್ಯಕ್ರಮದ ವಿಷಯದ ಕೆರೆ ಕಾಯಕ ಕೆಲಸಕ್ಕೆ ಮೆಚ್ಚುಗೆ ಪಡೆದ: ತಹಶೀಲ್ದಾರ್ ಗೀತಾ



**ಮುಳಬಾಗಿಲು:** ತಾಲೂಕಿನ ವಮ್ಮಸಂದ್ರ ಗ್ರಾಮದ ಪೂಸಲ ಕೆರೆಯನ್ನು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿಯಲ್ಲಿ ಹೂಳೆತ್ತುವ ಕಾರ್ಯಕ್ರಮಕ್ಕೆ ಗುದ್ದಲಿ ಪೂಜೆಯ ಮೂಲಕ ತಹಶೀಲ್ದಾರರಾದ ಗೀತಾ ರವರು ಚಾಲನೆ ನೀಡಿ ಪೂಜ್ಯರು ಸಮಾಜಕ್ಕೆ ನೀಡಿರುವ ಸೇವಾ ಕಾರ್ಯಕ್ರಮಗಳಿಂದ ಲಕ್ಷಾಂತರ ಕುಟುಂಬಗಳಿಗೆ ಶಕ್ತಿ ಬಂದಿದೆ ಹಾಗೆ ಗ್ರಾಮದವರನ್ನು ಸಂಘಟಿಸಿಕೊಂಡು ನಮ್ಮೂರು ನಮ್ಮ ಕೆರೆ ಎನ್ನುವ ಭಾವನೆ ಅವರಲ್ಲಿ ಮೂಡಿಸಿ ಧರ್ಮಸ್ಥಳದಿಂದ ರೂ.15,65,000/– ಕಾಮಗಾರಿಗೆ ನೀಡಿರುವುದರಿಂದ ಗ್ರಾಮಸ್ಥರಿಗೆ ಹಬ್ಬದ ವಾತಾವರಣ ಮುಡಿದೆ ಎಂದು ತಿಳಿಸಿ ಶುಭ ಹಾರೈಸಿದರು.

ತಾಲೂಕಿನ ಯೋಜನಾಧಿಕಾರಿಗಳಾದ ಹರೀಶ್ ಕುಮಾರ್ ಸಿ ರವರು ಕರ್ನಾಟಕದಲ್ಲಿ ಇದುವರೆಗೂ 795 ಕೆರೆ ಕಾಮಗಾರಿ ಮಾಡಿದ್ದು, ಪ್ರಸ್ತುತ ಮೊಮ್ಮಸಂದ್ರ ಗ್ರಾಮದಲ್ಲಿ 796ನೇ ಕೆರೆ ಉದ್ಘಾಟನೆ ಮಾಡಿರುತ್ತೇವೆ ಮತ್ತು ಯೋಜನೆಯಲ್ಲಿ ಸಮಾಜ ಅಭಿವೃದ್ಧಿ ಕಾರ್ಯಕ್ರಮಗಳಾದ ಮಾಶಾಸನ ಅಂಗವಿಕಲರಿಗೆ ಅನುಕೂಲವಾಗುವಂತೆ ಸಲಕರಣೆಗಳನ್ನು ಹಾಗೂ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಧರ್ಮಸ್ಥಳ ಧರ್ಮಾಧಿಕಾರಿಗಳಾದ ಡಾ|| ಡಿ. ವೀರೇಂದ್ರ ಹೆಗ್ಗಡೆಯವರು ಸಹಾಯಧನವನ್ನು ನೀಡುತ್ತಿರುತ್ತಾರೆ ಮತ್ತು ನಿಮ್ಮ ಊರಿನಲ್ಲಿ ಕೆರೆ ಅಭಿವೃದ್ಧಿಗೆ ಗ್ರಾಮಸ್ಥರಿಂದ ಉತ್ತಮ ಸಹಕಾರ ಇದೆ, ಮುಂದೆಯೂ ಇದೇ ರೀತಿ ಸಹಕಾರ ನೀಡುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ನಾಗರತ್ನಮ್ಮ, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಂಜುನಾಥ್, ಕೆರೆ ಸಮಿತಿ ಅಧ್ಯಕ್ಷರಾದ ನಾರಾಯಣಸ್ವಾಮಿ, ಕೆರೆ ಸಮಿತಿ ಅಧ್ಯಕ್ಷರಾದ ಎಂ ಎನ್ ನಾರಾಯಣಸ್ವಾಮಿ, ಊರಿನ ಮುಖಂಡರಾದ ವೆಂಕಟೇಶ್ ಗೌಡ, ಯುವ ಮುಖಂಡರಾದ ಗೋಪಿ, ಹಾಗೂ ಕೃಷಿ ಮೇಲ್ವಿಚಾರಕರಾದ ಚೇತನ್ ರಾಜ್, ವಮ್ಮಸಂದ್ರ ವಲಿಯದ ಮೇಲ್ವಿಚಾರಕರಾದ ಚಂದ್ರಶೇಖರಾಚಾರ್ ಜ್ಞಾನವಿಕಾಸ ಸಮನ್ವಯಾಧಿಕಾರಿಗಳಾದ ರೇಣುಕಾ ಮತ್ತು ಸೇವಾ ಪ್ರತಿನಿಧಿಯಾದ ಕುಸುಬು ಮತ್ತು ದೀನ, ಸ್ವಸಹಾಯ ಸಂಘದ ಸದಸ್ಯರು ಮತ್ತು ಊರಿನ ಗ್ರಾಮಸ್ಥರು ಭಾಗವಹಿಸಿದರು.

## ಜಿಲ್ಲೆಯ ದಲಿತ ಹೋರಾಟಗಾರರ ವಿರುದ್ಧ ದೂರು



ಮಾಲೂರು: ಜಿಲ್ಲೆಯ ದಲಿತ ಹೋರಾಟಗಾರರ ವಿರುದ್ಧ ದೂರು ನೀಡಿ ದಲಿತ ಮುಖಂಡರನ್ನು ಸಮಾಜಘಾತಕರು ಎಂದು ಹೇಳಿರುವ ಸಂಘಪರಿವಾರ ವಿರುದ್ಧವಕಾನೂನು ಕ್ರಮ ಹಾಗೂ ಅವರ ವಿರುದ್ದ ದೂರು ದಾಖಲಿಸುವಂತೆ
ದಲಿತ ಸಿಂಹ ಸೇನೆ ಕರ್ನಾಟಕ, ಕದಸಂಸ ಅಂಬೇಡ್ಕರ್ ವಾದ ಸಂಘಟನೆ ವತಿಯಿಂದ ಪೋಲಿಸ್ ಇನ್ಸ್ ಪೆಕ್ಟರ್ ಮೂಲಕ ಜಿಲ್ಲಾ ವರಿಷ್ಠಾಧಿಕಾರಿಗಳಿಗೆ ದೂರು ಸಲ್ಲಿಸಿದರು.

ಇತ್ತಿಚಿಗೆ ಭಾರತ ದೇಶದಲ್ಲಿ ಸಂವಿಂಧಾನ ಮತ್ತು ಬಾಬಾ ಸಾಹೇಬ್ ಅಂಬೇಡ್ಕರ್ ವಿರುದ್ದ ಅವಹೇಳನ ಹೇಳಿಕೆ ನೀಡುತ್ತಿರುವುದು ಇಡೀ ದೇಶದ ಜನ ತಲೆ ತಗ್ಗಿಸುವ ವಿಚಾರ ಅದರೆ ಇತ್ತಿಚಿಗೆ ಕೇಂದ್ರದ ಗ್ರಹ ಸಚಿವರಾದ ಅಮೀತ್ ಶಾ ಅಂಬೇಡ್ಕರ್ ರವರನ್ನು ಅವಹೇಳನವಾಗಿ ಮತಾನಾಡಿದ್ದು ಖಂಡಿಸಿ ಕೋಲಾರ ಪ್ರಗತಿ ಪರ ದಲಿತ ಸಂಘಟನೆಗಳು ಕೋಲಾರ ಬಂದ್‌ಗೆ ಕರೆ ಕೋಟ್ಟು ಅಮೀತ್ ಶಾ ರವರ ಹೇಳಿಕೆಯನ್ನು ಖಂಡಿಸುವ ಆ ಸಂಧರ್ಭದಲ್ಲಿ ಡಿ.ಡಿ.ಪಿ ಕಛೇರಿಯಲ್ಲಿ ನಡೆದ ಘಟನೆಗೂ ದಲಿತ ಸಂಘಟನೆಗಳಿಗೂ ಯಾವುದೇ ಸಂಬಂದ ಇಲ್ಲಿದಿದ್ದರು ಆರ್.ಎಸ್,ಎಸ್,ಮತ್ತು ಹಿಂದೂ ಸಂಘಟನೆಗಳ ದಲಿತ ಚಳುವಳಿ ಹೋರಾಟಗಾರರಾದ ಪಂಡಿತ್ ಮುನಿವೆಂಕಟಪ್ಪ, ಅಂಬರೀಶ್ ಚಂದ್ರ ಮೌಳಿ ಇನ್ನು ಮುಂತಾದ ದಲಿತ ಮುಂಖಡರ ವಿರುದ್ಧ ದೂರು ನೀಡಿ ಅವಹೇಳನವಾಗಿ ಮಾತಾನಾಡಿರುವುದು ನೋವಿನ ಸಂಗತಿ ಈ ವಿಚಾರವಾಗಿ ತಾವು ಸತ್ಯ ಸತ್ಯತೆಗಳನ್ನು ಪರೀಶಿಲಿಸಿ ದೂರನ್ನು ಕೂಡಲೇ ವಜಾ ಗೋಳಿಸಬೇಕು ಮತ್ತು ದಲಿತ ನಾಯಕರುಗಳ ಅವಹೇಳನವಾಗಿ ಮಾತಾನಾಡಿರುವ ವ್ಯಕ್ತಿಗಳ ವಿರುದ್ಧ ದೇಶ ದ್ರೋಹ ಖಾಯ್ದೆ ಅಡಿಯಲ್ಲಿ ಕೇಸು ದಾಖಲಿಸಿ ಅಂತವರನ್ನು ಜಿಲ್ಲೆಯಿಂದ ಗಡಿಪಾರು ಮಾಡಬೇಕಾಗಿ ಒತ್ತಾಯಿಸುತ್ತಿದ್ದೆವೆ ಇಲ್ಲದ ಪಕ್ಷದಲ್ಲಿ ಮುಂದಿನ ದಿನಗಳಲ್ಲಿ ಜಿಲ್ಲಾದ್ಯಾಂತ ಹಂತಹಂತವಾಗಿ ಹೋರಾಟ ರೂಪಿಸುವುದಾಗಿ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ದಲಿತ ಸಿಂಹ ಸೇನೆ ಕರ್ನಾಟಕ ರಾಜ್ಯಾಧ್ಯಕ್ಷ ತಿಪ್ಪಸಂದ್ರ ಶ್ರೀನಿವಾಸ್, ಕದಸಂಸ ಅಂಬೇಡ್ಕರ್ ವಾದ ಜಿಲ್ಲಾ ಸಂಘಟನಾ ಸಂಚಾಲಕ ರಾದ ಎ.ಕೆ.ವೆಂಕಟೇಶ್, ಲಕ್ಕೂರು ವೆಂಕಟೇಶ್, ಎಸ್.ಎಸ್.ಡಿ ರಾಜ್ಯ ಸಮಿತಿ ಸದಸ್ಯ ಕನ್ನಡ ಹರೀಶ್, ರಾಜ್ಯ ಯುವ ಘಟಕ ರಾಜ್ಯಾಧ್ಯಕ್ಷ ಚನ್ನಕಲ್ ಸಂತೋಷ್, ಅಗ್ರಹಾರ ಬಾಬು, ಚಸಿ.ಟಿ.ಕಿರಣ್, ದ್ಯಾಪಸಂದ್ರ ವೆಂಕಟೇಶ್, ಮಡಿವಾಳ ಶ್ರೀನಿವಾಸ್, ಬಾಲಕೃಷ್ಣ, ಬಾಲರಾಜ್ ಸೇರಿದಂತೆ ಹಲವಾರು ಕಾರ್ಯಕರ್ತರು ಹಾಜರಿದ್ದರು.

## ರಾಷ್ಟ್ರಮಟ್ಟದ ಕಬ್ಬಡಿ ಕ್ರೀಡಾ ಕೂಟಕ್ಕೆ ಕರ್ನಾಟಕ ಮಹಿಳಾ ತಂಡ ಆಯ್ಕೆ



**ಮಾಲೂರು:** ಕರ್ನಾಟಕ ಕಬ್ಬಡಿ ಮಹಿಳಾ ತಂಡ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗುವ ಮೂಲಕ ರಾಜ್ಯಕ್ಕೆ ಕೀರ್ತಿ ಬಂದಿರುವುದಾಗಿ ತರಬೇತಿದಾರ (ಎನ್.ಐ.ಎಸ್)ದೊಡ್ಡಿ ಡಿ.ಟಿ.ಲೋಕೇಶ್ ಸಂತಸ ವ್ಯಕ್ತಪಡಿಸಿದ್ದಾರೆ.

ಕೋಲಾರದಲ್ಲಿ ನಡೆದ ರಾಜ್ಯಮಟ್ಟದ ಪಂದ್ಯಾವಳಿಯಲ್ಲಿ ಆಯ್ಕೆಯಾದ ಕರ್ನಾಟಕ ಕಬ್ಬಡಿ ಮಹಿಳಾ ತಂಡವು ರಾಷ್ಟ್ರಮಟ್ಟದ ಹರಿದ್ವಾರದ ರೋ?ನ್‌ಬಾದ್ ಸ್ಟೇಡಿಯಂನಲ್ಲಿ ಜ.8 ರಿ0ದ 10 ರವರೆಗೆ ನಡೆಯಲಿರುವ 50 ಜ್ಯೂನಿಯರ್ ಪಂದ್ಯಾವಳಿಯಲ್ಲಿ ಪಾಲ್ಗೊಳ್ಳುವ ಮೂಲಕ ರಾಷ್ಟ್ರಮಟ್ಟದಲ್ಲಿ ಛಾಪು ಮೂಡಿಸಿದ್ದಾರೆ.

ಕೋಲಾರದ ಮಾನಸ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳ ದೀಪ ಅನಿಲ್, ಸ್ವಾತಿ ಪೂಜಾರಿ, ಅಮೂಲ್ಯ ಪಾಟೀಲ್, ರಾಜೇಶ್ವರಿ, ಅಮೂಲ್ಯ, ಅಂಕಿತ, ಪಣವಿಕ, ಸಿಂಚನ, ರಕ್ಷಿತ,ಸಾಕ್ಷಿ ಮತ್ತು ಚಂದ್ರಿಕಾ ಕಬ್ಬಡಿಯಲ್ಲಿ ಸೆಣಸಲಿದ್ದಾರೆ.

ಕರ್ನಾಟಕ ಕಬ್ಬಡಿ ಮಹಿಳಾ ತಂಡ ತರಬೇತಿದಾರ( ಎನ್.ಐ.ಎಸ್) ಡೊಡ್ಡಿ ಡಿ.ಟಿ.ಲೋಕೇಶ್, ಎಸ್.ಮುನಿರಾಜು, ಕೋಲಾರ ಜಿಲ್ಲಾ ಅಮೆಚೂರ್ ಕಬ್ಬಡಿ ಅಧ್ಯಕ್ಷ ಎನ್.ಪ್ರಭು ಅವರು ತರಬೇತಿ ನೀಡಿ ಉತ್ತಮ ಮಾರ್ಗದರ್ಶನ ನೀಡಿರರುವುದು ಶ್ಲಾಘನೀಯ.

ಜಿಲ್ಲೆಯಿಂದ ಆಯ್ಕೆಯಾದ ಮಾನಸ ಹಾಗೂ ತರಬೇತಿ ನೀಡಿದ ದೊಡ್ಡಿ ಲೋಕೇಶ್,ಎಸ್.ಮುನಿರಾಜು, ಎನ್.ಪ್ರಭು, ಜಿಲ್ಲಾ ತರಬೇತಿ ತೀರ್ಪುಗಾರರ ಮಂಡಳಿ ಅಧ್ಯಕ್ಷ ದೊಡ್ಡಿ ಡಿ.ಟಿ.ವಸಂತ್, ಉಪಾಧ್ಯಕ್ಷ ಬ್ಯಾಲಹಳ್ಳಿ ಕೆ.ಚಂದ್ರಶೇಖರ್ ಗೌಡ, ಖಜಾಂಚಿ ಕುಪ್ಪೂರು ವೆಂಕಟೇಶ್ , ಸಂಘಟನಾ ಕಾರ್ಯದರ್ಶಿ ಎಚ್.ವಿ.ಶ್ರೀನಿವಾಸ್, ಅವರಿಗೆ ಶಾಸಕ ಕೆ.ವೈ.ನಂಜೇಗೌಡರು, ಯುವ ನಾಯಕ ಕೆ.ಎನ್.ಸುನೀಲ್ ನಂಜೇಗೌಡ, ದರಖಾಸ್ತು ಸಮಿತಿ ಅಧ್ಯಕ್ಷ ಸಂತೇಹಳ್ಳಿ ನಾರಾಯಣಸ್ವಾಮಿ, ಸದಸ್ಯ ನಾಗಪುರ ನವೀನ್, ಯುವ ಮುಖಂಡ ಜಗನ್ ರೆಡ್ಡಿ ಸೇರಿದಂತೆ ಹಲವಾರು ಮುಖಂಡರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

## ಚಾಮರಾಜನಗರ:ಅಂಗನವಾಡಿ ಕಾರ್ಯಕರ್ತೆ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಚಾಮರಾಜನಗರ:** ಚಾಮರಾಜನಗರ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯಲ್ಲಿ ಖಾಲಿ ಇರುವ 11 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 23 ಸಹಾಯಕಿಯರ ಹುದ್ದೆಗಳಿಗೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಚಂದುಕಟ್ಟೆಮೋಳೆ ಅಂಗನವಾಡಿ ಕೇಂದ್ರ (ಇತರೆ), ಸೋಮವಾರಪೇಟೆ 3ನೇ ಅಂಗನವಾಡಿ ಕೇಂದ್ರ (ಪರಿಶಿ?ಟ ಜಾತಿ), ಮಲೆಯೂರಿನ 2ನೇ ಅಂಗನವಾಡಿ ಕೇಂದ್ರ (ಇತರೆ), ದೇವಾಂಗ ಬೀದಿಯ 3ನೇ ಅಂಗನವಾಡಿ ಕೇಂದ್ರ (ಪರಿಶಿ?ಟ ಪಂಗಡ), ಕೆ.ಪಿ ಮೊಹಲ್ಲಾ 1ನೇ ಅಂಗನವಾಡಿ ಕೇಂದ್ರ (ಇತರೆ), ರಾಮಸಮುದ್ರ 7ನೇ ಅಂಗನವಾಡಿ ಕೇಂದ್ರ (ಇತರೆ), ರಾಮಸಮುದ್ರ 8ನೇ ಅಂಗನವಾಡಿ ಕೇಂದ್ರ (ಇತರೆ), ದೊಡ್ಡಹಳ್ಳ ಅಂಗನವಾಡಿ ಕೇಂದ್ರ (ಇತರೆ) (1ನೇ ಬಾರಿ ಮರು ಪ್ರಕಟಣೆ), ಬಿ.ಜಿ ಕಾಲೋನಿ ಅಂಗನವಾಡಿ ಕೇಂದ್ರ (ಪರಿಶಿ?ಟ ಜಾತಿ) (1ನೇ ಬಾರಿ ಮರು ಪ್ರಕಟಣೆ), ಉಪ್ಪಾರಬೀದಿ 4ನೇ ಅಂಗನವಾಡಿ ಕೇಂದ್ರ (ಇತರೆ) ಹಾಗೂ ಕುಲಗಾಣ 2ನೇ ಅಂಗನವಾಡಿ ಕೇಂದ್ರ (ಪರಿಶಿ?ಟ ಜಾತಿ) ಅಂಗನವಾಡಿ ಕೇಂದ್ರಗಳಲ್ಲಿ ಕಾರ್ಯಕರ್ತೆಯರ ಹುದ್ದೆಗಳಿಗೆ ಅರ್ಜಿ ಸಲ್ಲಿಸಬಹುದು.
ಅರ್ಜಿಗಳನ್ನು ವೆಬ್ ಸೈಟ್ https://karnemakaone.kar.nic.in/abcd/ ನಲ್ಲಿ ಫೆಬ್ರವರಿ 7ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಪಿಡಬ್ಲ್ಯೂಡಿ ಕಾಲೋನಿಯಲ್ಲಿರುವ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ತಿಳಿಸಿದೆ.

## ಹೆಚ್‌ಎಂಪಿ ವೈರಸ್ ಭೀತಿ ಬೇಡ, ಪರಿಕ್ಷೆ ಇಲ್ಲ: ಟಿ.ಹೆಚ್.ಓ



**ಚೇಳೂರು:**ಹ್ಯೂಮನ್ ಮೆಟಾನ್ಯುಮೊ ವೈರಸ್ (ಹೆಚ್.ಎಂ.ಪಿ.ವಿ) ಬಗ್ಗೆ ಜನತೆ ಆತಂಕ ಪಡುವ ಹಾಗೂ ಪರಿಕ್ಷೆ ಮಾಡುವ ಅಗತ್ಯವೂ ಇಲ್ಲ ಮಾರಣಾಂತಿಕವಲ್ಲ ಆರೋಗ್ಯ ಇಲಾಖೆಯವರು ಮುಂಜಾಗ್ರತೆ ವಹಿಸಬೇಕಾಗಿದೆ ಎಂದು ಅವಿಭಜಿತ ಬಾಗೇಪಲ್ಲಿ ತಾಲ್ಲೂಕು ಆರೋಗ್ಯ ವೈಧ್ಯಾಧಿಕಾರಿ ಡಾ; ಸಿ.ಎನ್.ಸತ್ಯನಾರಾಯಣ್‌ರೆಡ್ಡಿ ಹೇಳಿದರು.

ಅವರು ಚೇಳೂರು ಪಟ್ಟಣದ ಹೊರವಲಯದ ಸರಕಾರಿ ವಿದ್ಯಾರ್ಥಿ ನಿಲಯದಲ್ಲಿ ಚೇಳೂರು–ಬಾಗೇಪಲ್ಲಿ ತಾಲ್ಲೂಕುಗಳ ಆರೋಗ್ಯ ಮಾಸಿಕ ಸಭೆ ಹಾಗೂ ಚಳಿಗಾಲದ ಸೋಂಕು ಜನರಲ್ಲಿ ಅರಿವಿನ ಕಾರ್ಯಕ್ರಮದಲ್ಲಿ ಮಾತನಾಡಿ ಹೆಚ್.ಎಂ.ಪಿ ವೈರಾಣು ಬಗ್ಗೆ ಭಯಪಡಬೇಕಿಲ್ಲ ಆರೋಗ್ಯ. ಆಶಾ. ಅಂಗನವಾಡಿ ಕಾರ್ಯಕರ್ತರುಗಳು ಸೊಂಕು ಹರಡದಂತೆ ಮುಜಾಗ್ರತೆ ಕ್ರಮಗಳು ವಹಿಸಬೇಕಾಗಿದೆ.ಎಂದರು

ಹೆಣ್ಣು ಭ್ರೂಣ ಹತ್ಯೆ ತಡೆಯಲು ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಬೇಕು ಆರೋಗ್ಯ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಆಸ್ಪತ್ರೆಗಳಲ್ಲಿ ಸ್ವಚ್ಚತೆ. ಅಗತ್ಯ ಮೂಲ ಸೌಲಭ್ಯಗಳು. ವ್ಯವಸ್ಥೆ ಇರಬೇಕು.

ಈಗಿನ ವಾತಾವರಣದಲ್ಲಿ ಉಷ್ಣಾಂಶ ಕುಸಿತಗೊಂಡು ವಿಪರೀತ ಶೀತಗಾಳಿ ಬೀಸುತ್ತಿರುವ ಮಧ್ಯೆಯೇ ಸಾಲುಗಳ ಅನಾರೋಗ್ಯಗಳು ಬರುತ್ತಿವೆ ವಿಶೇಷವಾಗಿ ಮಕ್ಕಳು ಹಾಗೂ ಗರ್ಭಿಣಿಯರು ಬೆಚ್ಚಗಿನ ಬಟ್ಟೆ ಧರಿಸಿ ಬಿಸಿ ಬಿಸಿ ಆಹಾರ ಸೇವಿಸಿ ಆರೋಗ್ಯ ಕಾಪಾಡಕೊಳ್ಳಬೇಕಾಗಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ ಎಂದರು.
ಅರಿವಿನ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಸರ್ವೆಕ್ಷಣಾ ಅಧಿಕಾರಿ ಕೃಷ್ಣ ಪ್ರಸಾದ್. ವೈದ್ಯಾಧಿಕಾರಿ ಡಾ. ಸುಜೀತ್‌ರೆಡ್ಡಿ. ಚೇಳೂರು ಸರಕಾರಿ ಆಸ್ಪತ್ರೆ ವೈದ್ಯಾಧಿಕಾರಿ ಭಾಸ್ಕರ್. ಸೇರದಂತೆ ಎರಡು ತಾಲ್ಲೂಕುಗಳ ವೈದ್ಯಾಧಿಕಾರಿಗಳು ಸಮುದಾಯ ಆರೋಗ್ಯ ಕಾರ್ಯಕರ್ತರು ಸಿಬ್ಬಂದಿ ಹಾಜರಿದ್ದರು.

## ವಿಕ್ರಮ್ ಚಾರಿಟಬಲ್ ಟ್ರಸ್ಟ್‌ನಿಂದ ಉಚಿತ ಆಂಬುಲೆನ್ಸ್ ಸೇವೆ

**ಮಾಲೂರು :** ರಾಜ್ಯದ ಪ್ರತಿ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಿ ದಿನದ 24 ಗಂಟೆ ಹೆರಿಗೆ ಸೌಲಭ್ಯ ಹಾಗೂ ಮಕ್ಕಳಿಗೆ ಚಿಕಿತ್ಸೆ ಮತ್ತು ಹೆಚ್ಚಿನ ವೈದ್ಯರು ಸಿಬ್ಬಂದಿಗಳನ್ನು ನೇಮಕ ಮಾಡಲು ಸರ್ಕಾರ ಈಗಾಗಲೇ ತೀರ್ಮಾನ ತೆಗೆದುಕೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದರು,

ತಾಲ್ಲೂಕಿನ ಲಿಂಗಾಪುರ ಕೃಷ್ಣಪ್ಪರವರ ಪುತ್ರ ದಿವಂಗತ ವಿಕ್ರಮ್ ರವರ 7 ನೇ ವರ್ಷದ ಪುಣ್ಯ ಸ್ಮರಣೆಯ ಅಂಗವಾಗಿ ವಿಕ್ರಮ್ ಚಾರಿಟಬಲ್ ಟ್ರಸ್ಟ್ ವತಿಯಿಂದ ಬೃಹತ್ ರಕ್ತದಾನ ಶಿಬಿರ ಹಾಗೂ ಉಚಿತ 2 ಆಂಬುಲೆನ್ಸ್ ಸೇವೆಯ ಕಾರ್ಯಕ್ರಮಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭಾಗವಹಿಸಿ ಶಾಸಕ ಕೆ ವೈ ನಂಜೇಗೌಡರ ಜೊತೆ ಆಂಬುಲೆನ್ಸ್ ಗಳಿಗೆ ಲಿಂಗಾಪುರ ಗ್ರಾಮದಲ್ಲಿ ಚಾಲನೆ ನೀಡಿದರು.

ಸಮಾಜ ಮುಖಿಯ ಕಾರ್ಯಗಳಿಗೆ ನಾವೆಲ್ಲ ಕೈ ಜೋಡಿಸುವುದು ಬಹಳ ಮುಖ್ಯ ಸಮಾಜಕ್ಕೆ ಒಳ್ಳೆಯದು ಮಾಡಿ ಪರೋಪಕಾರಿಯಾಗಿ ತಮ್ಮ ನೋವುಗಳನ್ನು ಭರಿಸುವುದಕ್ಕೆ ಮಾರ್ಗವನ್ನು ಕಂಡುಕೊಂಡು ಮಗನ ಹೆಸರಿನಲ್ಲಿ ಟ್ರಸ್ಟ್ ಮಾಡಿ ನಿರಂತರವಾಗಿ ಸಮಾಜ ಮುಖಿಯ ಕಾರ್ಯಗಳನ್ನು ಲಿಂಗಾಪುರ ಕೃ?ಪ್ಪರವರು ನೆರವೇರಿಸಿಕೊಂಡು ಬರುತ್ತಿದ್ದಾರೆ,ಆರೋಗ್ಯ ಇಲಾಖೆಗೆ 2 ಅಂಬುಲೆನ್ಸ್ ಕೊಡುಗೆಯಾಗಿ ನೀಡುತ್ತಿರುವುದು ಬಹಳ ಪವಿತ್ರವಾದ



ಕಾರ್ಯವಾಗಿದೆ. ಆರೋಗ್ಯ ಇಲಾಖೆಯು ಅವಶ್ಯಕತೆ ಇರುವುದ್ದನ್ನ ಒದಗಿಸಿಕೊಂಡು ಸರಿಯಾದ ರೀತಿಯಲ್ಲಿ ಪೂರ್ತಿಯಾದ ಪ್ರಯೋಜನ ಜನಸಾಮಾನ್ಯರಿಗೆ ಸಿಗಬೇಕು ಎಂದರು ಇನ್ನೂ ತಾಲ್ಲೂಕಿನ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಲು ಈಗಾಗಲೇ ಸರ್ಕಾರ ತೀರ್ಮಾನ ತೆಗೆದುಕೊಂಡಿದೆ ದಿನದ 24 ಗಂಟೆಗಳ ಕಾಲ ಹೆರಿಗೆ ಮತ್ತು ಮಕ್ಕಳ ಚಿಕಿತ್ಸೆ ಹಾಗೂ ಅಧಿಕ ವೈದ್ಯರು ಸಿಬ್ಬಂದಿಗಳನ್ನು ನೇಮಿಸಲು ತೀರ್ಮಾನ ಮಾಡಲಾಗಿದೆ ಎಂದು ಹೇಳಿದರು.

ಶಾಸಕ ಕೆ ವೈ ನಂಜೇಗೌಡ ಮಾತನಾಡಿ, ಪುತ್ರನ ಸವಿ ನೆನಪಿನಲ್ಲಿ 7 ವರ್ಷಗಳಿಂದ ವಿವಿಧ ರೀತಿಯಲ್ಲಿ ಸಮಾಜ ಮುಖಿಯ ಕಾರ್ಯಗಳನ್ನ ಮಾಡಿಕೊಂಡು ಬರುತ್ತಿದ್ದು ತಾಲ್ಲೂಕಿನ ಜನತೆಗೆ ಅನುಕೂಲ ವಾಗುವಂತೆ ಹಾಗೂ ಪುತ್ರನ ನೆನಪಿನಲ್ಲಿ 2 ಆಂಬುಲೆನ್ಸ್ ಕೊಡುಗೆಯಾಗಿ ನೀಡಿ ಆರೋಗ್ಯ ಇಲಾಖೆಗೆ ಹಸ್ತಾಂತರ ಮಾಡಿ ಉಪಯೋಗ ಪಡೆದುಕೊಳ್ಳಿಲಿದ್ದು ಪುತ್ರನ ನೆನಪಿನಲ್ಲಿ ಸೇವ ಮನೋಭಾವ ಬೆಳೆಸಿಕೊಂಡಿದ್ದಾರೆ.

ಅಲ್ಲದೇ ತಾಲೂಕಿನ ಸಾರ್ವಜನಿಕ ಆಸ್ಪತ್ರೆ ನಿರ್ಮಾಣವಾಗಿ ಸುಮಾರು 80 ವ?ಗಳು ಕಳೆದಿವೆ ಕಟ್ಟಡ ಸಂಪೂರ್ಣ ಶಿಥಿಲ ವ್ಯವಸ್ಥೆಯಲ್ಲಿದ್ದು ಈಗಾಗಲೇ ಹತ್ತು ಎಕರೆ ಭೂಮಿಯನ್ನು ತಾಲ್ಲೂಕಿನ ಆಸ್ಪತ್ರೆಗೆ ಮೀಸಲಿಟ್ಟಿದೆ ಆರೋಗ್ಯ ಸಚಿವರು ನೂತನ ಸಾರ್ವಜನಿಕ ಆಸ್ಪತ್ರೆಗೆ ಅನುದಾನ ಕಲ್ಪಿಸಬೇಕು ಎಂದು ಆರೋಗ್ಯ ಸಚಿವರ ಬಳಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸ್ಯ ಡಿ.ಟಿ ಶ್ರೀನಿವಾಸ್, ಡಿ.ಸಿ.ಸಿ.ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್,ಕೆಪಿಸಿಸಿ ಸದಸ್ಯ ಅಂಜನಿ ಸೋಮಣ್ಣ, ಎಂ.ಎಸ್.ಪ್ರದೀಪ್ ರೆಡ್ಡಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಜಿ.ಮಧುಸೂದನ್, ತಹಶೀಲ್ದಾರ್ ಕೆ. ರಮೇಶ್, ಪುರಸಭಾ ಅಧ್ಯಕ್ಷೆ ಕೋಮಲ, ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಸದಸ್ಯರಾದ ಎನ್.ವಿ.ಮುರಳೀಧರ್, ಜಾಕೀರ್, ತಾ.ಪಂ.ಇಒ ವಿ.ಕೃ?ಪ್ಪ, ಡಿ.ಎಚ್.ಒ ಶ್ರೀನಿವಾಸ್, ಟಿ.ಎಚ್.ಒ ರಮೇಶ್ ಬಾಬು,ಪ್ರಾಧಿಕಾರದ ಅಧ್ಯಕ್ಷ ನಯೀಂ ಉಲ್ಲಾ , ಮುಖಂಡರಾದ ಎಂ.ವಿ.ಹನುಮಂತಪ್ಪ, ಚನ್ನರಾಯಪ್ಪ, ಡಾ.ಕಿರಣ್ ಸೋಮಣ್ಣ, ಬಾಳಿಗಾನಹಳ್ಳಿ ಶ್ರೀನಿವಾಸ್, ಹನುಮಂತ ರೆಡ್ಡಿ, ಮುಖ್ಯಾಧಿಕಾರಿ ಪ್ರದೀಪ್, ಟ್ರಸ್ಟಿನ ಅಧ್ಯಕ್ಷ ಲಿಂಗಾಪುರ ಕಿಟ್ಟಿ, ಕಾರ್ಯದರ್ಶಿ ಮಂಜುನಾಥ್ ಜಾಕಿ, ಎಸ್.ವಿ.ಗೋವರ್ಧನ್ ರೆಡ್ಡಿ,ಯುವ ಮುಖಂಡ ಸುನೀಲ್ ನಂಜೇಗೌಡ,ಮಾದನಹಟ್ಟಿ ರವಿ, ವಾಸು, ಮಲ್ಲಿಕಾರ್ಜುನ, ಸುಧಾಕರ್, ಚಂದ್ರಶೇಖರ್, ಬಾಬು ನಾರಾಯಣಸ್ವಾಮಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆ ಹಲವಾರು ಮುಖಂಡರು ಹಾಜರಿದ್ದರು.

## ಮಾಯಾ ಗಾರ್ಡನ್‌ಗೆ ಅಬಕಾರಿ ಅಧಿಕಾರಿಗಳ ದಾಳಿ

ಚಾಮರಾಜನಗರ: ರಹದಾರಿ ಇಲ್ಲದೇ ಗ್ರಾಹಕರಿಗೆ ಮದ್ಯ ಸೇವಿಸಲು ಅವಕಾಶ ಮಾಡಿಕೊಟ್ಟ ಹಿನ್ನೆಲೆಯಲ್ಲಿ ನಗರದ ಹೊರ ವಲಯದಲ್ಲಿರುವ ಮಾಯಾ ಗಾರ್ಡನ್‌ಗೆ ಅಬಕಾರಿ ಅಧಿಕಾ– ರಿಗಳ ತಂಡ ಸಂಜೆ ದಿಢೀರ್ ದಾಳಿ ಮಾಡಿ ದಂಡ ವಿಧಿಸಿರುವ ಘಟನೆ ನಡೆದಿದೆ.

ಇಂದು ಸಂಜೆ 6:45ರ ಸಮಯದಲ್ಲಿ ಚಾಮರಾಜನಗರ ಹೊರ ವಲಯದಲ್ಲಿರುವ ಮಾಯಾ ಗಾರ್ಡ್‌ನನಲ್ಲಿ ಅಕ್ರಮವಾಗಿ ಮದ್ಯ ಸೇವನೆ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಅಬಕಾರಿ ವಲಯ ನಿರೀಕ್ಷಕ ಮಹದೇವ್ ಮತ್ತು ಸಿಬ್ಬಂದಿಗಳು ದಾಳಿ ಮಾಡಿದಾಗ ಮದ್ಯದ ಬಾಟಲಿ ಹಾಗೂ ಮದ್ಯ ಸೇವನೆ ಮಾಡುತ್ತಿರುವುದು ಕಂಡು ಬಂದಿದೆ.

’ಅನಧಿಕೃತವಾಗಿ ಮದ್ಯ ಸೇವನೆ ಮಾಡಲು ಅವಕಾಶ ಮಾಡಿ ಕೊಟ್ಟ ಮಾಲೀಕನ ವಿರುದ್ಧ 15(ಎ) ಅಡಿಯಲ್ಲಿ ಮೊಕದ್ದಮೆ ದಾಖಲು ಮಾಡಿ ದಂಡವನ್ನು ಕಟ್ಟಿಸಿಕೊಂಡು, ಎಚ್ಚರಿಕೆ ನೀಡಿದ್ದಾರೆ.

# ಹಿರಿಯ ಹಿನ್ನೆಲೆ ಗಾಯಕ ಪಿ.ಜಯಚಂದ್ರನ್ ವಿಧಿವಶ

**ತ್ರಿಶೂರ್:** ಕನ್ನಡ ಸೇರಿದಂತೆ ದೇಶದ ವಿವಿಧ ಭಾಷೆಗಳಲ್ಲಿ 16 ಸಾವಿರಕ್ಕೂ ಹೆಚ್ಚು ಹಾಡುಗಳನ್ನು ಹಾಡಿದ್ದ ಸುಪ್ರಸಿದ್ಧ ಹಿರಿಯ ಹಿನ್ನೆಲೆ ಗಾಯಕ ಪಿ.ಜಯಚಂದ್ರನ್ (80) ಗುರುವಾರ ಸಂಜೆ ಇಲ್ಲಿನ ಖಾಸಗಿ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ನಿಧನ ಹೊಂದಿದ್ದಾರೆ.

'ಭಾವ ಗಾಯಕ'ರೆಂದೇ ಖ್ಯಾತಿ ಪಡೆದಿದ್ದ ಇವರು ಪ್ರೀತಿ, ಭಕ್ತಿಯ ಭಾವನೆಗಳನ್ನು ತುಂಬಿ ಅತ್ಯಂತ ಸೊಗಸಾಗಿ ಹಾಡುತ್ತಿದ್ದರು.

ಗುರುವಾರ ತಮ್ಮ ನಿವಾಸದಲ್ಲಿ ಕುಸಿದು ಬಿದ್ದ ಜಯಚಂದ್ರನ್ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಕಳೆದ ಕೆಲವು ದಿನಗಳಿಂದ ಅಸ್ವಸ್ಥರಾಗಿದ್ದರು ಎಂದು ಕುಟುಂಬ ಮೂಲಗಳಿಂದ ತಿಳಿದು ಬಂದಿದೆ. ಸಂಜೆ ಸುಮಾರು 7.55ಕ್ಕೆ ನಿಧನ ಹೊಂದಿದರು ಎಂದು ಆಸ್ಪತ್ರೆ ಮೂಲಗಳು ಮಾಹಿತಿ ನೀಡಿವೆ.

ಮೃತರು ಪತ್ನಿ ಲಲಿತಾ, ಮಗಳು ಲಕ್ಷ್ಮೀ ಮತ್ತು ಮಗ ಗಾಯಕ ದೀನನಾಥನ್ ಅವರನ್ನು ಅಗಲಿದ್ದಾರೆ.

16,000ಕ್ಕೂ ಹೆಚ್ಚು ಗೀತೆಗಳಿಗೆ ಧ್ವನಿಯಾಗಿದ್ದ ಜಯಚಂದ್ರನ್: ಜಯಚಂದ್ರನ್ ಅವರು ಕನ್ನಡ, ಮಲಯಾಳಂ, ತಮಿಳು, ತೆಲುಗು ಮತ್ತು ಹಿಂದಿ ಭಾ?ಯಲ್ಲಿ 16,000ಕ್ಕೂ ಹೆಚ್ಚು ಗೀತೆಗಳನ್ನು ಹಾಡಿದ್ದರು. ಈ ಮೂಲಕ ಭಾರತೀಯ ಸಂಗೀತ ಕ್ಷೇತ್ರಕ್ಕೆ ಅನನ್ಯ ಕೊಡುಗೆ ನೀಡಿದ್ದಾರೆ. ಅತ್ಯುತ್ತಮ ಹಿನ್ನೆಲೆ ಗಾಯಕನನ್ನು ಸಾಕ?ು ಪ್ರಶಸ್ತಿ, ಗೌರವಗಳು ಅರಸಿಕೊಂಡು ಬಂದಿವೆ.

ರಾಷ್ಟ್ರೀಯ ಫಿಲ್ಮ್ ಪ್ರಶಸ್ತಿಗಳು ಹಾಗು ಕೇರಳ ಸರ್ಕಾರ ಪ್ರತಿಷ್ಠಿತ ಜೆ.ಸಿ.ಜೇನಿಯಲ್ ಪ್ರಶಸ್ತಿ ನೀಡಿ ಗೌರವಿಸಿದೆ. ಇದಲ್ಲದೇ, 5 ಬಾರಿ ಕೇರಳ ರಾಜ್ಯ ಸಿನಿಮಾ ಪ್ರಶಸ್ತಿ ಪಡೆದಿದ್ದಾರೆ. 2 ಬಾರಿ ತಮಿಳುನಾಡು ರಾಜ್ಯ ಸಿನಿಮಾ ಪ್ರಶಸ್ತಿ ದೊರೆತಿದೆ. ಶ್ರೀ ನಾರಾಯಣ ಗುರು ಸಿನಿಮಾದಲ್ಲಿನ 'ಶಿವ ಶಂಕರ ಶರಣ ಸರ್ವ ವಿಭೋ' ಪ್ರದರ್ಶನಕ್ಕಾಗಿ ಇವರಿಗೆ ರಾಷ್ಟ್ರೀಯ ಪ್ರಶಸ್ತಿ ಸಂದಿತ್ತು.



**ಪಿ.ಜಯಚಂದ್ರನ್ ಹಾಡಿರುವ ಕನ್ನಡ ಸೂಪರ್ ಹಿಟ್ ಗೀತೆಗಳು:**
ಹಿಂದೂಸ್ಥಾನವು ಎಂದೂ ಮರೆಯದ (ಅಮೃತ ಘಳಿಗೆ ಸಿನಿಮಾ), ಮಂದಾರ ಪುಷ್ಪವು ನೀನು (ರಂಗನಾಯಕಿ),ಕನ್ನಡ ನಾಡಿನ ಕರಾವಳಿ (ಮಸಣದ ಹೂವು), ಕಾಲ್ಗೆಜ್ಜೆ ತಾಳಕ್ಕೆ (ಮುನಿಯನ ಮಾದರಿ), ಚಂದ ಚಂದ (ಮಾನಸ ಸರೋವರ), ಪ್ರೇಮದ ಶ್ರುತಿ ಮೀಟಿದೆ (ಗಣೇಶನ ಮದುವೆ), ಜೀವನ ಸಂಜೀವನ (ಹಂತಕನ ಸಂಚು), ಇರಿಂಜಲಕುಡದ ಕ್ರೈಸ್ಟ್ ಕಾಲೇಜಿನಲ್ಲಿ ಸಸ್ಯಶಾಸ್ತ್ರದಲ್ಲಿ ಪದವಿ ಪೂರ್ಣಗೊಳಿಸಿದ ಬಳಿಕ ಇವರು ಚೆನ್ನೈನ ಖಾಸಗಿ ಉದ್ದಿಮೆಯಲ್ಲಿ ಕಾರ್ಯ ನಿರ್ವಹಿಸಿದ್ದರು. ಈ ಸಂದರ್ಭದಲ್ಲಿ ಚೆನ್ನೈನಲ್ಲಿ ನಡೆದ ಸಂಗೀತ ಕಾರ್ಯಕ್ರಮವೊಂದರಲ್ಲಿ ಜಯಚಂದ್ರನ್ ಅವರ ಪ್ರತಿಭೆ ಗುರುತಿಸಿದ ಸಿನಿಮಾ ನಿರ್ಮಾಪಕರಾದ ಸೋಭನಾ ಪರಮೇಶ್ವರನ್ ನಾಯರ್ ಮತ್ತು ನಿರ್ದೇಶಕ ಎ.ವಿನ್ಸೆಂಟ್ ಅವರು ಜಯಚಂದ್ರನ್ ಅವರಿಗೆ ಸಿನಿಮಾದಲ್ಲಿ ಹಾಡುವ ಅವಕಾಶ ನೀಡಿದ್ದರು.

1965ರಲ್ಲಿ ತೆರೆಗೆ ಬಂದ 'ಕುಂಜಲಿ ಮರಕ್ಕರ್' ಸಿನಿಮಾದಲ್ಲಿ ಪ್ರಸಿದ್ಧ ಸಾಹಿತಿ ಪಿ. ಭಾಸ್ಕರನ್ ವಿರಚಿತ 'ಒರು ಮುಲ್ಲಪ್ಪೋ ಮಲಯುಮಯಿ' ಎಂಬ ಹಾಡು ಹಾಡಿದ್ದರು. ಈ ಮೂಲಕ ಸಿನಿಮಾ ಕ್ಷೇತ್ರಕ್ಕೆ ಅಧಿಕೃತವಾಗಿ ಇವರ ಪದಾರ್ಪಣೆಯಾಯಿತು. ಆದರೆ, 'ಕಲಿತೋಜನ್' ಸಿನಿಮಾದ ಸಿನಿಮಾದ ಮಂಜಲಿಯಿಲ್ ಮುಂಗಿತೋರ್ತಿ ಇವರ ಮೊದಲು ಬಿಡುಗಡೆಯಾದ ಸಿನಿಮಾ ಹಾಡಾಗಿದೆ.

1944ರ ಮಾರ್ಚ್ 3ರಂದು ಕೇರಳದ ಎರ್ನಾಕುಲಂನಲ್ಲಿ ಜಯಚಂದ್ರನ್ ಜನಿಸಿದ್ದರು. ಇವರು ರವಿ ವರ್ಮಾ ಕೊಚನಿಯನ್ ತಂಪುರನ್ ಮತ್ತು ಸುಭದ್ರ ಕುಜಮ್ಮ ದಂಪತಿಯ ಮೂರನೇ ಪುತ್ರ.

ಮುಂದೆ ಜಯಚಂದ್ರನ್ ಹೆಸರಾಂತ ಸಂಗೀತ ನಿರ್ದೇಶಕರುಗಳಾದ ಜಿ.ದೇವರಾಜನ್, ಎಂ.ಎಸ್. ಬಾಬುರಾಜ್, ವಿ.ದಕ್ಷಿಮಾ ಮೂರ್ತಿ, ಕೆ.ರಾಘವನ್, ಇಳಿಯರಾಜ, ಎ.ಆರ್.ರಹಮಾನ್, ವಿದ್ಯಾಸಾಗರ್ ಸೇರಿದಂತೆ ಹಲವು ದಿಗ್ಗಜರೊಂದಿಗೆ ಕೆಲಸ ಮಾಡಿದ್ದರು.

**ನಾಳೆ ಅಂತ್ಯಸಂಸ್ಕಾರ:** ಜಯಚಂದ್ರನ್ ಅವರ ಪಾರ್ಥಿವ ಶರೀರವನ್ನು ತ್ರಿಶೂರ್‌ನ ಪೂಮ್‌ಕುನ್ನಮ್‌ಗೆ ಇಂದು ಕೊಂಡೊಯ್ಯಲಿದ್ದು, ಸಾಹಿತ್ಯ ಆಕಾಡೆಮಿ ಹಾಲ್‌ನಲ್ಲಿ ಸಾರ್ವಜನಿಕ ಅಂತಿಮ ದರ್ಶನಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ಶನಿವಾರ ಸಂಜೆ 3 ಗಂಟೆಗೆ ಚೆಂಡಮಂಗಲಂನ ತಮ್ಮ ಪೂರ್ವಿಕರ ಮನೆಯ ಪರಿಸರದಲ್ಲಿ ಅಂತ್ಯಸಂಸ್ಕಾರ ನಡೆಯಲಿದೆ.

**ಗಣ್ಯರ ಸಂತಾಪ:** ಜಯಚಂದ್ರನ್ ನಿಧನಕ್ಕೆ ಕೇರಳ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್, ಸಿಎಂ ಪಿಣರಾಯಿ ವಿಜಯನ್, ಪ್ರತಿಪಕ್ಷದ ನಾಯಕರು ಸೇರಿದಂತೆ ದೇಶ, ವಿದೇಶದ ಗಣ್ಯಾತಿಗಣ್ಯರು, ಅಪಾರ ಅಭಿಮಾನಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ.

# 'ಪೋಲಿಯೊ ಪ್ರಮಾಣ ಪತ್ರವಿಲ್ಲದಿದ್ದರೆ ಬರಬೇಡಿ'

**ಇಸ್ಲಾಮಾಬಾದ್:** ಸೌದಿ ಅರೇಬಿಯಾದೊಳಗೆ ಬರುವ ಪಾಕಿಸ್ತಾನಿ ಪ್ರಯಾಣಿಕರು ಪೋಲಿಯೊ ಲಸಿಕೆ ಪಡೆದಿರುವ ಪ್ರಮಾಣ ಪತ್ರ ಹೊಂದಿರುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಸೌದಿ ಅರೇಬಿಯಾದ ನಾಗರಿಕ ವಿಮಾನಯಾನ ಪ್ರಾಧಿಕಾರ ಪ್ರಕಟಿಸಿದೆ.

ಈ ನಿರ್ದೇಶನ ಉಲ್ಲಂಘಿಸುವವರಿಗೆ ದಂಡ ಹಾಗೂ ಶಿಕ್ಷೆ ವಿಧಿಸಲಾಗುವುದು ಎಂದು ಸೌದಿ ಅರೇಬಿಯಾದ ಜನರಲ್ ಅಥಾರಿಟಿ ಆಫ್ ಸಿವಿಲ್ ಏವಿಯೇಷನ್ (ಜಿಎಸಿಎ) ಹೇಳಿದೆ.

ವಿಶ್ವದಲ್ಲಿ ಸದ್ಯ ಅಫ್ಘಾನಿಸ್ತಾನ ಮತ್ತು ಪಾಕಿಸ್ತಾನ ಈ ಎರಡೇ ದೇಶಗಳಲ್ಲಿ ಪೋಲಿಯೊ ಇನ್ನೂ ಉಳಿದುಕೊಂಡಿದೆ. ಪಾಕಿಸ್ತಾನದಲ್ಲಿ ಇತ್ತೀಚೆಗೆ ಪೋಲಿಯೊ ಪ್ರಕರಣಗಳ ಸಂಖ್ಯೆ ಗಮನಾರ್ಹವಾಗಿ ಹೆಚ್ಚಾಗಿದೆ. 2024ರಲ್ಲಿ ಅಲ್ಲಿ 68 ಪೋಲಿಯೊ ಪ್ರಕರಣಗಳು ವರದಿಯಾಗಿವೆ. ನಿರಂತರವಾಗಿ ಹಿಂಸಾಚಾರ ಪೀಡಿತ ಪ್ರದೇಶಗಳಾದ ಖೈಬರ್ ಪಖ್ತುಂಖ್ವಾ ಮತ್ತು ಬಲೂಚಿಸ್ತಾನಗಳಲ್ಲಿ ಪೋಲಿಯೊ ಲಸಿಕೆ ಅಭಿಯಾನವನ್ನು ಬಹಿಷ್ಕರಿಸಲಾಗುತ್ತಿದೆ. ಅಲ್ಲದೆ ಪೋಲಿಯೊ ಲಸಿಕೆ ಹಾಕಲು ಬರುವ ಆರೋಗ್ಯ ಕಾರ್ಯಕರ್ತರನ್ನು ಕೊಲೆ ಮಾಡಲಾಗುತ್ತಿದೆ.

ಅಪರಾಧ, ವಂಚನೆ ಮತ್ತು ಭಿಕ್ಷಾಟನೆಯಲ್ಲಿ ಭಾಗಿಯಾಗುತ್ತಿರುವ ಆರೋಪದ ಮೇಲೆ ಈಗಾಗಲೇ ಹಲವಾರು ಗಲ್ಫ್ ದೇಶಗಳು ಪಾಕಿಸ್ತಾನಿಗಳಿಗೆ ವೀಸಾ ನಿಷೇಧ ಹೇರಿವೆ. ಏತನ್ಮಧ್ಯೆ ಸೌದಿ ಅರೇಬಿಯಾ ಸರ್ಕಾರ ಕೂಡ ಈಗ ಪಾಕಿಸ್ತಾನಿಗಳಿಗೆ ಪೋಲಿಯೊ ಪ್ರಮಾಣ ಪತ್ರ ಕಡ್ಡಾಯಗೊಳಿಸಿದೆ.

ಏಳು ದೇಶಗಳಿಂದ ಗಡೀಪಾರು ಮಾಡಲಾದ 51 ಪಾಕಿಸ್ತಾನಿಗಳು ಬುಧವಾರ ಕರಾಚಿಗೆ ಬಂದಿಳಿದಿದ್ದಾರೆ. ಅಸಮರ್ಪಕ ಪ್ರಯಾಣ ದಾಖಲೆ ಹಾಗೂ ಇನ್ನಿತರ ಕಾರಣಗಳಿಗಾಗಿ ಮಂಗಳವಾರ ರಾತ್ರಿ ಕರಾಚಿಯ ಜಿನ್ನಾ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಂತರರಾಷ್ಟ್ರೀಯ ವಿಮಾನಗಳಿಂದ 30 ಪಾಕಿಸ್ತಾನಿ ಪ್ರಯಾಣಿಕರನ್ನು ಕೆಳಗಿಳಿಸಲಾಗಿದೆ ಎಂದು ವಲಸೆ ಇಲಾಖೆಯ ಅಧಿಕಾರಿಗಳು ಜಿಯೋ ನ್ಯೂಸ್‌ಗೆ ತಿಳಿಸಿದ್ದಾರೆ.

ಯುನೈಟೆಡ್ ಅರಬ್ ಎಮಿರೇಟ್ಸ್‌ನ ವೀಸಾಗಾಗಿ ಅರ್ಜಿ ಸಲ್ಲಿಸುವ ಪಾಕಿಸ್ತಾನಿಗಳು ಪೊಲೀಸರಿಂದ ಉತ್ತಮ ನಡತೆ ಪ್ರಮಾಣ ಪತ್ರ ಪಡೆದು ಸಲ್ಲಿಸುವಂತೆ ಈ ಹಿಂದೆ ಯುಎಇ ಕಡ್ಡಾಯಗೊಳಿಸಿತ್ತು.

ಸೌದಿ ಅರೇಬಿಯಾ ಹೊರತುಪಡಿಸಿ, ಯುಎಇ ಮತ್ತು ಇತರ ಗಲ್ಫ್ ರಾಷ್ಟ್ರಗಳು ಪಾಕಿಸ್ತಾನದ ಕನಿಷ್ಠ 30 ವಿವಿಧ ನಗರಗಳ ಜನರಿಗೆ ವೀಸಾ ನೀಡುವುದನ್ನು ಅನಿರ್ದಿಷ್ಟ ಕಾಲದವರೆಗೆ ನಿರ್ಬಂಧಿಸಿವೆ. ಪಾಕಿಸ್ತಾನಿ ಪ್ರಜೆಗಳು ಭಿಕ್ಷಾಟನೆ, ಕಳ್ಳಸಾಗಣೆ, ಮಾದಕವಸ್ತು ಕಳ್ಳಸಾಗಣೆ, ಮಾನವ ಕಳ್ಳಸಾಗಣೆ ಮತ್ತು ಇತರ ಕ್ರಿಮಿನಲ್ ಅಪರಾಧಗಳಲ್ಲಿ ಭಾಗಿಯಾಗುತ್ತಿರುವ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಗಲ್ಫ್ ರಾಷ್ಟ್ರಗಳು ಈ ಕ್ರಮ ಕೈಗೊಂಡಿವೆ.

ಗಲ್ಫ್ ದೇಶಗಳು ಮತ್ತು ನಗರಗಳು, ವಿಶೇಷವಾಗಿ ದುಬೈ ಮತ್ತು ಅಬುಧಾಬಿ ಲಕ್ಷಾಂತರ ಪಾಕಿಸ್ತಾನಿ ಪ್ರಯಾಣಿಕರು ಮತ್ತು ಉದ್ಯೋಗಾಕಾಂಕ್ಷಿಗಳಿಗೆ ಹೆಚ್ಚು ಆದ್ಯತೆಯ ತಾಣಗಳಾಗಿವೆ. ಆದರೆ ನಿ?ಧ ಮತ್ತು ಹೆಚ್ಚುತ್ತಿರುವ ವೀಸಾ ತಿರಸ್ಕಾರದ ನಂತರ, ಸತತ ಮೂರನೇ ವರ್ಷ ವಿಶ್ವದ ನಾಲ್ಕನೇ ಕೆಟ್ಟ ಸ್ಥಾನದಲ್ಲಿರುವ ಪಾಕಿಸ್ತಾನಿ ಪಾಸ್‌ಪೋರ್ಟ್ ನ ಸ್ಥಾನ ಮತ್ತಷ್ಟು ಕುಸಿದಿದೆ.

# 'ಇಂಡಿಯಾ ಮೈತ್ರಿಕೂಟ ಶಾಶ್ವತ'

**ಜಮ್ಮು:** "ಇಂಡಿಯಾ ಮೈತ್ರಿಕೂಟ ಶಾಶ್ವತ ಮತ್ತು ಚಲನಶೀಲ. ಅದನ್ನು ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯನ್ನು ಎದುರಿಸಲು ರಚಿಸಲಾಗಿಲ್ಲ. ಬದಲಿಗೆ ಭಾರತದ ಅಭಿವೃದ್ಧಿ ಮತ್ತು ಬಲವರ್ಧನೆಗಾಗಿ ರೂಪಿಸಲಾಗಿದೆ. ಹೀಗಾಗಿ ಅದನ್ನು ವಿಸರ್ಜಿಸುವ ಪ್ರಶ್ನೆಯೇ ಇಲ್ಲ" ಎಂದು ನ್ಯಾನಲ್ ಕಾಂಗ್ರೆಸ್ (ಎನ್‌ಸಿ) ಪಕ್ಷದ ಮುಖ್ಯಸ್ಥ ಫಾರೂಕ್ ಅಬ್ದುಲ್ಲಾ ಹೇಳಿದ್ದಾರೆ.



ಇಂಡಿಯಾ ಕೂಟದಲ್ಲಿ ಕೇಳಿಬರುತ್ತಿರುವ ಗೊಣಗಾಟಗಳ ಕುರಿತು ಮಾತನಾಡಿದ ಅವರು, "ಲೋಕಸಭೆ ಚುನಾವಣೆಗಾಗಿ ಮಾತ್ರ ಈ ಕೂಟವನ್ನು ಸ್ಥಾಪಿಸಲಾಗಿಲ್ಲ. ಹಾಗೆ ಅಂದುಕೊಂಡವರಿಗೆ ತಪ್ಪು ಭಾವನೆ ಇದೆ. ಈ ಮೈತ್ರಿಯು ಪ್ರತಿ ದಿನ, ಪ್ರತಿ ಕ್ಷಣವೂ ಜೀವಂತವಾಗಿರುತ್ತದೆ. ದೇಶದಲ್ಲಿರುವ ನಕಾರಾತ್ಮಕ ಶಕ್ತಿಗಳನ್ನು ತೊಡೆದು ಹಾಕುವುದು ಕೂಟದ ಮುಖ್ಯ ಧ್ಯೇಯವಾಗಿದೆ" ಎಂದರು.

ಕೂಟದಲ್ಲಿನ ಏಕತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ ಅವರು, "ಕೂಟದ ನಾಯಕತ್ವ ಮತ್ತು ಏಕತೆಯ ಬಗ್ಗೆ ಚರ್ಚೆ ನಡೆಯಬೇಕಿದೆ. ಮುಂದಿನ ದಿನಗಳಲ್ಲಿ ಈ ಸಮಸ್ಯೆಗೆ ಉತ್ತರ ಹುಡುಕಲಿದ್ದೇವೆ. ಕೂಟವನ್ನು ವಿಸರ್ಜಿಸುವ ಹೇಳಿಕೆಗಳ ಬಗ್ಗೆ ಹೆಚ್ಚಿನ ಚರ್ಚೆ ಬೇಡ. ಬಣ ಎಂದಿಗೂ ಶಾಶ್ವತವಾಗಿರಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ಕೇಂದ್ರದ ಜೊತೆಗೆ ಗುದ್ದಾಟವಿಲ್ಲ:** ಇನ್ನು, "ಕೇಂದ್ರ ಸರ್ಕಾರದ ಜೊತೆಗೆ ಜಮ್ಮು-ಕಾಶ್ಮೀರ ಸರ್ಕಾರ ಗುದ್ದಾಟ ನಡೆಸುತ್ತಿಲ್ಲ. ಇಲ್ಲಿನ ಸಮಸ್ಯೆಗಳ ಪರಿಹಾರಕ್ಕಾಗಿ ಭಾರತ ಸರ್ಕಾರದ ನೆರವು ಕೋರಿದ್ದೇವೆ. ಹಾಗಂತ ನಾವು ಬಿಜೆಪಿ ಜೊತೆಗಿದ್ದೇವೆ ಎಂದರ್ಥವಲ್ಲ. ಕೇಂದ್ರವೂ ಕಣಿವೆಯ ಅಭಿವೃದ್ಧಿಗಾಗಿ ಸಹಾಯ ಮಾಡಬೇಕು" ಎಂದು ಕೋರಿದರು.

ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರು ಕೇಂದ್ರದ ಜೊತೆಗೆ ಗುರುತಿಸಿಕೊಳ್ಳುತ್ತಿದ್ದಾರೆ ಎಂಬ ಪ್ರಶ್ನೆಗೆ, "ತಮ್ಮ ಪುತ್ರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾರನ್ನು ಜಮ್ಮು- ಕಾಶ್ಮೀರದ ಜನರು ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಿದ್ದಾರೆ. ದೆಹಲಿಯ ಸೂಚನೆಯಂತೆ ಕಾರ್ಯನಿರ್ವಹಿಸುವುದಿಲ್ಲ. ಅವರಿಗೆ ತಮ್ಮದೇ ಆದ ನಿರ್ಧಾರಗಳಿವೆ. ದಿಲ್ಲಿ ನಾಯಕರ ಜೊತೆಗಿದ್ದಾರೆ ಎಂಬುದು ತಪ್ಪು ತಿಳಿವಳಿಕೆ" ಎಂದರು.

ಸಿಎಂ ಒಮರ್ ಹೇಳಿದ್ದೇನು ಇಂಡಿಯಾ ಕೂಟದಲ್ಲಿರುವ ಆಮ್ ಆದ್ಮಿ ಪಕ್ಷ (ಆಪ್) ಮತ್ತು ಕಾಂಗ್ರೆಸ್ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಪ್ರತ್ಯೇಕವಾಗಿ ಚುನಾವಣೆ ಎದುರಿಸುತ್ತಿರುವುದಕ್ಕೆ ಜಮ್ಮು- ಕಾಶ್ಮೀರ ಸಿಎಂ ಒಮರ್ ಅಬ್ದುಲ್ಲಾ ಅಸಮಾಧಾನ ವ್ಯಕ್ತಪಡಿಸಿದ್ದರು. "ಕೂಟದ ನೇತೃತ್ವ ವಹಿಸಿರುವ ಕಾಂಗ್ರೆಸ್, ಆಪ್ ವಿರುದ್ಧ ತೊಡೆತಟ್ಟಿದೆ. ಹೀಗಾಗಿ, ಇಂಡಿಯಾ ಕೂಟಕ್ಕೆ ಯಾವ ಬೆಲೆ ಇದೆ. ಕೂಟವನ್ನು ವಿಸರ್ಜಿಸುವುದು ಮೇಲು" ಎಂದಿದ್ದರು.

ಲೋಕಸಭೆ ಚುನಾವಣೆಗಾಗಿ ಮಾತ್ರ ವಿಪಕ್ಷಗಳ ಇಂಡಿಯಾ ಮೈತ್ರಿಕೂಟವನ್ನು ರಚಿಸಿದ್ದರೆ, ಅದನ್ನು ಬರ್ಖಾಸ್ತು ಮಾಡಿ ಎಂದು ಹೇಳಿರುವ ಜಮ್ಮು- ಕಾಶ್ಮೀರ ಸಿಎಂ ಒಮರ್ ಅಬ್ದುಲ್ಲಾ ಹೇಳಿಕೆಯನ್ನು ಅವರ ತಂದೆ ಫಾರೂಕ್ ಅಬ್ದುಲ್ಲಾ ಅಲ್ಲಗಳೆದಿದ್ದಾರೆ.

# ಉತ್ತರ ಪ್ರದೇಶ: ಕುಟುಂಬದ ಐವರು ಶವವಾಗಿ ಪತ್ತೆ

**ಮೀರತ್:** ಉತ್ತರ ಪ್ರದೇಶದ ಮೀರತ್‌ನಲ್ಲಿ ದಂಪತಿ, ಮೂವರು ಹೆಣ್ಣುಮಕ್ಕಳು ಸೇರಿ ಒಂದೇ ಕುಟುಂಬದ ಐವರು ಶವವಾಗಿ ಪತ್ತೆಯಾಗಿದ್ದಾರೆ. ಮೂರು ಮಕ್ಕಳು ಮಂಚದ ಪೆಟ್ಟಿಗೆಯೊಳಗೆ ಶವವಾಗಿ ಮಲಗಿದ್ದರು. ಲಿಸಾಡಿ ಗೇಟ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಮೀರತ್‌ನ ಹಿರಿಯ ಪೊಲೀಸ್ ಅಧೀಕ್ಷಕ (ಎಸ್‌ಎಸ್‌ಪಿ) ವಿಪಿನ್ ತಾಡಾ ಅವರು ಘಟನೆ ಕುರಿತು ಮಾಹಿತಿ ನೀಡಿದ್ದಾರೆ. ಮೊಯಿನ್ ಅವರ ಸಹೋದರ ಎ?ು ಕರೆ ಮಾಡಿದ್ದರೂ ಮೊಯಿನ್ ರಿಸೀವ್ ಮಾಡಿರಲಿಲ್ಲ, ಮನೆ ಬಳಿ ಬಂದಾಗ ಮನೆಗೆ ಬೀಗ ಹಾಕಿತ್ತು.

ಬಳಿಕ ಪೊಲೀಸರಿಗೆ ವಿ?ಯ ತಿಳಿಸಲಾಯಿತು. ಸ್ಥಳಕ್ಕೆ ಬಂದ ಅಧಿಕಾರಿಗಳಿಗೆ ಮನೆಗೆ ಹೊರಗಿನಿಂದ ಬೀಗ ಹಾಕಿರುವುದು ಕಂಡು ಬಂತು.ಛಾವಣಿಯ ಮೂಲಕ ಮನೆಯೊಳಗೆ ಪ್ರವೇಶಿಸಿದರು. ಮೊಯಿನ್, ಅವರ ಪತ್ನಿ ಅಸ್ಮಾ ಮತ್ತು ಅವರ ಮೂವರು ಪುತ್ರಿಯರಾದ ಅಫ್ಸಾ (8), ಅಜೀಜಾ (4), ಮತ್ತು ಆದಿಬಾ (1) ಅವರ ಶವಗಳು ಕಂಡುಬಂದಿತ್ತು.



ಮನೆಗೆ ಬೀಗ ಹಾಕಿರುವ ರೀತಿಯು ಅಪರಾಧದಲ್ಲಿ ಭಾಗಿಯಾಗಿರುವ ವ್ಯಕ್ತಿಯು ಆ ಕುಟುಂಬಕ್ಕೆ ತಿಳಿದಿರುವವನೇ ಆಗಿರಬೇಕು ಎಂದು ಅಂದಾಜಿಸಲಾಗಿದೆ. ಹಳೇ ದ್ವೇ?ವೇ ಅಪರಾಧದ ಹಿಂದಿನ ಉದ್ದೇಶವಾಗಿರಬಹುದು ಎಂದು ಪ್ರಾಥಮಿಕ ತನಿಖೆಗಳು ಸೂಚಿಸುತ್ತವೆ. ವಿಸ್ತೃತ ತನಿಖೆ ನಡೆಯುತ್ತಿದೆ ಎಂದು ಹೇಳಿದ್ದಾರೆ.

ಮೃತರಲ್ಲಿ ಒಬ್ಬರ ಕಾಲನ್ನು ಬೆಡ್‌ಶೀಟ್‌ನಿಂದ ಕಟ್ಟಲಾಗಿದೆ,ಫೋರೆನ್ಸಿಕ್ ತಂಡ ಮತ್ತು ಹಿರಿಯ ಅಧಿಕಾರಿಗಳು ಅಪರಾಧ ನಡೆದ ಸ್ಥಳದಿಂದ ಪುರಾವೆಗಳನ್ನು ಸಂಗ್ರಹಿಸುತ್ತಿದ್ದಾರೆ. ಕುಟುಂಬವು ಇತ್ತೀಚೆಗೆ ಈ ಪ್ರದೇಶಕ್ಕೆ ತೆರಳಿದ್ದು, ಹೆಚ್ಚಿನ ವಿವರಗಳನ್ನು ಬಹಿರಂಗಪಡಿಸಲು ಪೊಲೀಸರು ಈಗ ಅವರ ಹಿನ್ನೆಲೆಯನ್ನು ತನಿಖೆ ಮಾಡುತ್ತಿದ್ದಾರೆ ಎಂದು ಎಸ್‌ಎಸ್‌ಪಿ ತಿಳಿಸಿದ್ದಾರೆ.

ಮೆಕ್ಯಾನಿಕ್ ಆಗಿ ಕೆಲಸ ಮಾಡುತ್ತಿದ್ದ ಮೊಯಿನ್ ಮತ್ತು ಅವರ ಪತ್ನಿ ಅಸ್ಮಾ ಬುಧವಾರದಿಂದ ನಾಪತ್ತೆಯಾಗಿದ್ದಾರೆ ಎಂದು ಪಿಟಿಐ ವರದಿ ಮಾಡಿದೆ. ಮೊಯಿನ್ ಅವರ ಸಹೋದರ ಸಲೀಂ ಅವರು ಈ ಭಯಾನಕ ದೃಶ್ಯವನ್ನು ಮೊದಲು ನೋಡಿದರು. ಅಣ್ಣನ ದಿಢೀರ್ ನಾಪತ್ತೆಯಿಂದ ಆತಂಕಗೊಂಡ ಸಲೀಂ ಪತ್ನಿಯೊಂದಿಗೆ ಮೊಯಿನ್ ಮನೆಗೆ ಭೇಟಿ ನೀಡಿದ್ದರು.

ಬಾಗಿಲು ತೆರೆಯಲು ಪದೇ ಪದೇ ಪ್ರಯತ್ನಗಳು ವಿಫಲವಾದಾಗ, ಅವರು ನೆರೆಹೊರೆಯವರ ಸಹಾಯವನ್ನು ಕೇಳಿದರು ಮತ್ತು ಬಲವಂತವಾಗಿ ಒಳಗೆ ಪ್ರವೇಶಿಸಿದರು.

ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ ದೆಹಲಿಯ ರಂಗಪುರಿ ಗ್ರಾಮದಲ್ಲಿರುವ ತಮ್ಮ ಅಪಾರ್ಟ್‌ಮೆಂಟ್‌ನಲ್ಲಿ ಒಂದೇ ಕುಟುಂಬದ ಐವರು ಶವವಾಗಿ ಪತ್ತೆಯಾಗಿದ್ದರು.

8 ರಿಂದ 18 ವರ್ಷ ವಯಸ್ಸಿನ ತಂದೆ ಮತ್ತು ಅವರ ನಾಲ್ವರು ದೈಹಿಕವಾಗಿ ಅಂಗವಿಕಲ ಹೆಣ್ಣುಮಕ್ಕಳು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ಶಂಕಿಸಿದ್ದಾರೆ.

ಮನೆಯಿಂದ ದುರ್ವಾಸನೆ ಬರುತ್ತಿರುವುದನ್ನು ಗಮನಿಸಿದ ನೆರೆಹೊರೆಯವರು ಅಧಿಕಾರಿಗಳಿಗೆ ಮಾಹಿತಿ ನೀಡಿದ್ದರು. ತಂದೆ ತನ್ನ ಹೆಣ್ಣು ಮಕ್ಕಳಿಗೆ ವಿಷೆ ತಿನ್ನಿಸಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಕೆಲವು ವರ್ಷಗಳ ಹಿಂದೆ ಕ್ಯಾನ್ಸರ್‌ನಿಂದ ತಾಯಿಯ ಮರಣದ ನಂತರ ಕುಟುಂಬವು ಕ?ವನ್ನು ಎದುರಿಸಿತು.

# ಬಡ ವಿದ್ಯಾರ್ಥಿಗಳಿಗಾಗಿ ಸ್ಮಶಾನದಲ್ಲೊಂದು ಶಾಲೆ

**ಮುಜಾಫರ್ ಪುರ್:** ಶವಗಳನ್ನು ಸುಡುವ, ಸದಾ ದುಃಖದ ಭಾವನೆಗಳಿಂದ ತುಂಬಿರುವ ಸ್ಮಶಾನದಲ್ಲಿಯೂ ಒಂದು ಆಶಾಕಿರಣ ಗೋಚರವಾಗುವಂಥ ಸ್ತುತ್ಯರ್ಹ ಕಾರ್ಯವೊಂದು ಇಲ್ಲಿ ನಡೆಯುತ್ತಿದೆ. ಸ್ಮಶಾನದ ಬಗೆಗಿನ ಸಾಂಪ್ರದಾಯಿಕ ಭಾವನೆಗಳನ್ನು ತೊಡೆದು ಹಾಕಿ, ಶಿಕ್ಷಣದಿಂದ ವಂಚಿತರಾದವರಿಗೆ ಶಿಕ್ಷಣ ನೀಡಲು ಬಿಹಾರದ ಮುಜಾಫರ್ ಪುರದ ಸುಮಿತ್ ಕುಮಾರ್ ಎಂಬುವರು ಇಲ್ಲಿನ ಸ್ಮಶಾನದಲ್ಲಿ 'ಅಪ್ಪನ್ ಪಾಠಶಾಲಾ' ಹೆಸರಿನಲ್ಲಿ ಶಾಲೆಯೊಂದನ್ನು ಆರಂಭಿಸಿ ಮಾದರಿಯಾಗಿದ್ದಾರೆ.

ಶಾಲೆ ಅರಂಭಿಸಿರುವ ಬಗ್ಗೆ ಮಾತನಾಡಿದ ಸುಮಿತ್, ಆರಂಭದಲ್ಲಿ ನಾನು ನ್ಯಾಯಾಧೀಶನಾಗಬೇಕೆಂದು ಕನಸು ಕಂಡಿದ್ದೆ. ಆದರೆ ಮಕ್ಕಳಿಗೆ ಕಲಿಸುವ ಕೆಲಸ ಆಕರ್ಷಕವಾಗಿ ಕಾಣಿಸಿದ್ದರಿಂದ ಇಲ್ಲಿನ ಮುಕ್ತಿಧಾಮದಲ್ಲಿ ಶಾಲೆಯನ್ನು ಆರಂಭಿಸಿ ಬಡಕುಟುಂಬಗಳ ಶಿಕ್ಷಣ ವಂಚಿತ ಮಕ್ಕಳಿಗೆ ಇಲ್ಲಿ ಅಕ್ಷರ ಕಲಿಸುತ್ತಿರುವೆ ಎಂದು ಹೇಳಿದರು.

**ಶಾಲೆ ಆರಂಭವಾಗಿದ್ದು ಹೇಗೆ:** ಒಂದು ದಿನ ಸುಮಿತ್ ತನ್ನ ಸ್ನೇಹಿತನ ಸಂಬಂಧಿಕರೊಬ್ಬರ ಅಂತಿಮ ವಿಧಿ ವಿಧಾನ ನೆರವೇರಿಸಲು ಮುಕ್ತಿಧಾಮಕ್ಕೆ ಹೋಗಿದ್ದರು. ಆಗ ಸುಡುವ ಚಿತೆಯ ಸುತ್ತಲೂ ಇಡಲಾಗುವ ನಾಣ್ಯ ಮತ್ತು ಹಣ್ಣುಗಳನ್ನು ಬಡ ಮಕ್ಕಳು ಆರಿಸಿಕೊಳ್ಳುವುದನ್ನು ನೋಡಿ ದುಃಖಿತರಾಗಿದ್ದರು.

"ನೀವು ಶಾಲೆಗೆ ಹೋಗುತ್ತೀರಾ" ಎಂದು ಸುಮಿತ್ ಮಕ್ಕಳಿಗೆ ಪ್ರಶ್ನಿಸಿದರು. "ಶಾಲೆ ಕಲಿತು ಮಾಡುವುದಾದರೂ ಏನು" ಎಂಬ ಮಕ್ಕಳ ಉತ್ತರದಿಂದ ಅವರು ಆಘಾತಕ್ಕೀಡಾದರು. ಶಾಲೆ ಕಲಿತರೆ ಏನೆಲ್ಲವನ್ನು ಸಾಧಿಸಬಹುದು ಎಂಬುದನ್ನು ಆ ಮಕ್ಕಳಿಗೆ ತಿಳಿಸಲು ಕೆಲಸ ಮಾಡುವುದಾಗಿ ಅವರು ಅಲ್ಲಿಯೇ ಪ್ರತಿಜ್ಞೆ ಮಾಡಿದರು.

**'ಅಪ್ಪನ್' ಪಾಠಶಾಲೆಗೆ ಅಡಿಪಾಯ:** ತಮ್ಮ ಮಕ್ಕಳಿಗೆ ಶಾಲಾ ಶಿಕ್ಷಣ ನೀಡಲು ಸಾಧ್ಯವಾಗದ ಅಥವಾ ಶಿಕ್ಷಣದ ಬಗ್ಗೆ ನಿರ್ಲಕ್ಷ್ಯ ಧೋರಣೆ ಹೊಂದಿರುವ ಕುಟುಂಬಗಳ ಮಕ್ಕಳಿಗೆ ಉಚಿತ ಶಿಕ್ಷಣ ನೀಡಲು ತಾವು ಈ ಶಾಲೆ ಆರಂಭಿಸಿರುವುದಾಗಿ ಸುಮಿತ್ ಹೇಳುತ್ತಾರೆ. "ಈ ಶಾಲೆಯು ಅವರಿಗೆ ಶಿಕ್ಷಣ ಮಾತ್ರವಲ್ಲದೆ ಅವರ ಉತ್ತಮ ಭವಿ?ಕ್ಕೆ ಅಡಿಪಾಯವನ್ನೂ ಹಾಕಲಿದೆ" ಎನ್ನುತ್ತಾರೆ ಸುಮಿತ್.

ಸುಮಿತ್ ಏಳು ವಷ ರ್ಗಳಿಂದ 'ಮುಕ್ತಿಧಾಮ'ದ ಕೊಳೆಗೇರಿ ವಸಾಹತುಗಳ ಮಕ್ಕಳಿಗೆ ಉಚಿತ ಶಿಕ್ಷಣದ ಜೊತೆಗೆ ಸಾವಯವ ಕೃಷಿಯ ತಂತ್ರಗಳನ್ನು ಕಲಿಸುತ್ತಿದ್ದಾರೆ. ಮಾರ್ಚ್ 2017 ರಲ್ಲಿ ಆರಂಭವಾದ ಶಾಲೆಗೆ 'ಅಪ್ಪನ್' (ನಮ್ಮದು) ಎಂದು ಹೆಸರಿಸಲಾಯಿತು. ಹೀಗಾಗಿ ಮಕ್ಕಳು ಇದು ತಮ್ಮದೇ ಶಾಲೆ ಎಂದು ಭಾವಿಸುತ್ತಾರೆ.




"ಮಕ್ಕಳು ಕ್ರಮೇಣ ಶಾಲೆಗೆ ಬರಲಾರಂಭಿಸಿದರು ಮತ್ತು ನಿಧಾನವಾಗಿ ಕಲಿಕೆಗೆ ಹೊಂದಿಕೊಳ್ಳಲಾರಂಭಿಸಿದರು. ಈಗ ಅವರು ನಿಯಮಿತವಾಗಿ ಶಾಲೆಗೆ ಬರುತ್ತಿದ್ದಾರೆ" ಎಂದು ಅವರು ತಿಳಿಸಿದರು. "ತಮ್ಮ ಮಕ್ಕಳನ್ನು ಇತರ ಶಾಲೆಗಳಿಗೆ ದಾಖಲಿಸುವಂತೆಯೂ ನಾವು ಪೋಷಕರಿಗೆ ಪ್ರೋತ್ಸಾಹಿಸುತ್ತೇವೆ. ಪ್ರತಿ ವರ್ಷ ಇಲ್ಲಿನ ಸುಮಾರು 15 ರಿಂದ 20 ಮಕ್ಕಳು ಹತ್ತಿರದ ಸರ್ಕಾರಿ ಪ್ರಾಥಮಿಕ ಶಾಲೆ, ಮಾಧ್ಯಮಿಕ ಶಾಲೆ ಮತ್ತು ಪ್ರೌಢಶಾಲೆಗಳಿಗೆ ದಾಖಲಾಗುತ್ತಾರೆ" ಎಂದು ಅವರು ಹೇಳುತ್ತಾರೆ.

10ನೇ ತರಗತಿಯವರೆಗೆ ಶಿಕ್ಷಣ: ಸುಮಿತ್ ಅವರ ಶಾಲೆಯಲ್ಲಿ 1 ರಿಂದ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಪಾಠ ಮಾಡಲಾಗುತ್ತದೆ. ಈ ಎಲ್ಲಾ ಮಕ್ಕಳಿಗೆ ಅಗತ್ಯವಾದ ಡ್ರೆಸ್, ಬ್ಯಾಗ್, ನೋಟ್ ಬುಕ್‌ಗಳು, ಪುಸ್ತಕಗಳು, ಪೆನ್ಸಿಲ್‌ಗಳು ಮತ್ತು ಇತರ ಲೇಖನ ಸಾಮಗ್ರಿಗಳನ್ನು ಸುಮಿತ್ ಅವರೇ ಒದಗಿಸುತ್ತಾರೆ. ಅಲ್ಲದೆ ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆಯನ್ನೂ ಮಾಡಲಾಗಿದೆ. ಕಳೆದ 7 ವರ್ಷಗಳಲ್ಲಿ ಅವರು 250ಕ್ಕೂ ಹೆಚ್ಚು ಮಕ್ಕಳನ್ನು ಹತ್ತಿರದ ಸರ್ಕಾರಿ ಶಾಲೆಗಳಿಗೆ ದಾಖಲಿಸಿದ್ದಾರೆ. ಸುಮಿತ್ ಅವರಿಂದ ಪಾಠ ಹೇಳಿಸಿಕೊಳ್ಳುವುದಕ್ಕೆ ನಮಗೆ ಖುಷಿಯಾಗುತ್ತದೆ ಎನ್ನುತ್ತಾರೆ ವಿದ್ಯಾರ್ಥಿಗಳು.

"ಈ ಶಾಲೆಯಿಂದಾಗಿ ಮಕ್ಕಳ ಜೀವನವು ಮತ್ತೆ ಹಳಿಗೆ ಬರುತ್ತಿದೆ. ಈಗ ಈ ಮಕ್ಕಳು ಎಂಜಿನಿಯರ್ ಮತ್ತು ವೈದ್ಯರಾಗುವುದಾಗಿ ಹೇಳುತ್ತಿದ್ದಾರೆ. ಈ ಮಕ್ಕಳ ಶಿಕ್ಷಣಕ್ಕಾಗಿ ನಾವು 'ಅಪ್ಪನ್' ಶಾಲೆಯನ್ನು ಪ್ರಾರಂಭಿಸಿದ್ದೇವೆ." ಎಂದು ಸುಮಿತ್ ಹೇಳುತ್ತಾರೆ.

**ಸಮಾಜದಲ್ಲಿ ಸಮಾನತೆ ಮೂಡಿಸುವ ಯತ್ನ:** ಮಕ್ಕಳು ಅಧ್ಯಯನ ಮಾಡಿ ವಿದ್ಯಾವಂತರಾದರೆ ಮತ್ತು ಸುಸಂಸ್ಕೃತರಾದರೆ ಅವರು ಕೆಟ್ಟ ಸಹವಾಸದಿಂದ ದೂರವಿರುತ್ತಾರೆ ಎಂಬುದು ಸುಮಿತ್ ಅವರ ನಂಬಿಕೆ. "ಶಿಕ್ಷಣವಂತರಾದರೆ ಮಕ್ಕಳು ಶೋಷಣೆಗೆ ಒಳಗಾಗುವುದಿಲ್ಲ; ಅವರ ಸುತ್ತಲಿನ ಜನ ಅವರನ್ನು ನೋಡಿ ಸ್ಫೂರ್ತಿ ಪಡೆಯುತ್ತಾರೆ. ಭವಿ?ದಲ್ಲಿ ಈ ಮಕ್ಕಳು ತಮ್ಮ ಸಮಾಜಕ್ಕೆ ಮತ್ತು ಅವರ ಕುಟುಂಬಗಳಿಗೆ ಮಾದರಿಯಾಗುತ್ತಾರೆ" ಎಂದು ಅವರು ಹೇಳುತ್ತಾರೆ. "ಈ ಮೂಲಕ ಸಮಾಜದಲ್ಲಿ ಸಮಾನತೆ ಬರುವಂತಾಗುತ್ತದೆ. ಸಮಾಜದಲ್ಲಿ ಮೇಲು ಮತ್ತು ಕೀಳು ಎಂಬ ತಾರತಮ್ಯ ಕೊನೆಗೊಳ್ಳುತ್ತದೆ. ಬಡವನ ಮಗ ಕೂಡ ಅಧಿಕಾರಿಯಾಗಬಹುದು ಎಂಬ ಆಶಾ ಭಾವನೆ ಮೂಡುತ್ತದೆ" ಎಂದು ಅವರು ಹೇಳುತ್ತಾರೆ.

# ಸ್ಟೀಲ್ ಕಾರ್ಖಾನೆಯ ಚಿಮಣಿ ಕುಸಿತ; ಹಲವರು ನಾಪತ್ತೆ

**ಛತ್ತೀಸ್‌ಗಢ:** ಛತ್ತೀಸ್‌ಗಢದ ಮುಂಗೇಲಿ ಜಿಲ್ಲೆಯಲ್ಲಿ ಇಂದು ಸ್ಟೀಲ್ ಸ್ಥಾವರದ ಚಿಮಣಿ ಕುಸಿದು ಇಬ್ಬರು ಕಾರ್ಮಿಕರು ಗಾಯಗೊಂಡಿದ್ದು, ಇನ್ನೂ ಅನೇಕರು ಅವಶೇ?ಗಳಡಿ ಸಿಲುಕಿಕೊಂಡಿರುವ ಶಂಕೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಘಟನೆಯಲ್ಲಿ ಸುಮಾರು ಅರ್ಧ ಡಜನ್ ಕಾರ್ಮಿಕರು ಸಾವನ್ನಪ್ಪಿದ್ದಾರೆ ಎಂದು ಮಾಧ್ಯಮದ ವರದಿಗಳು ತಿಳಿಸಿವೆ. ಆದರೆ, ಸಾವು-ನೋವಿನ ಬಗ್ಗೆ ಅಧಿಕೃತ ದೃಢೀಕರಣಕ್ಕಾಗಿ ಕಾಯಲಾಗುತ್ತಿದೆ.

ಮುಂಗೇಲಿ ಜಿಲ್ಲೆಯ ಸರಗಾಂವ್ ಪ್ರದೇಶದಲ್ಲಿರುವ ಸ್ಥಾವರದಲ್ಲಿ ಈ ಘಟನೆ ನಡೆದಿದೆ ಎಂದು ಮುಂಗೇಲಿ ಪೊಲೀಸ್ ವರಿ?ಾಧಿಕಾರಿ ಭೋಜ್ರಾಮ್ ಪಟೇಲ್ ತಿಳಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಬೃಹತ್ ವಸ್ತುಗಳನ್ನು ಸಂಗ್ರಹಿಸಲು ಬಳಸುವ ಸ್ಟೀಲ್ ಪ್ಲಾಂಟ್‌ನಲ್ಲಿ ಈ ಅವಘಡ ನಡೆದಿದೆ. ಈ ಸ್ಥಳದಲ್ಲಿದ್ದ ಕೆಲವು ಕಾರ್ಮಿಕರು ಅದರ ಅಡಿಯಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಪೊಲೀಸರು ಹೇಳಿದ್ದಾರೆ.

ಪೊಲೀಸರಿಗೆ ಮಾಹಿತಿ ನೀಡಿದ ನಂತರ, ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು. ಇಬ್ಬರು ಗಾಯಗೊಂಡ ಕಾರ್ಮಿಕರನ್ನು ರಕ್ಷಿಸಿ ಬಿಲಾಸ್ಪುರದ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಕುಸಿದ ಸ್ಟೀಲ್ ಪ್ಲಾಂಟ್‌ನಡಿ ಇನ್ನೂ ಅನೇಕ ಕಾರ್ಮಿಕರು ಸಿಲುಕಿಕೊಂಡಿದ್ದಾರೆ ಎಂದು ವರದಿಯಾಗಿದ್ದು, ಅವರನ್ನು ಹೊರತೆಗೆಯಲು ಪ್ರಯತ್ನಗಳು ನಡೆಯುತ್ತಿವೆ ಎಂದು ಅಧಿಕಾರಿ ಹೇಳಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಬೃಹತ್ ವಸ್ತುಗಳನ್ನು ಸಂಗ್ರಹಿಸಲು ಬಳಸುವ ಕಬ್ಬಿಣದ ರಚನೆಯಾದ ಸಿಲೋ (ಚಿಮಣಿಯಂತಹ ರಚನೆ) ಕುಸಿದು ಬಿದ್ದಿದ್ದು, ಸ್ಥಳದಲ್ಲಿದ್ದ ಕೆಲವು ಕಾರ್ಮಿಕರು ಅದರ ಅಡಿಯಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಅವರು ಹೇಳಿದ್ದಾರೆ. ಈ ಬಗ್ಗೆ ಮಾಹಿತಿ ಪಡೆದ ನಂತರ, ಪೊಲೀಸರು ಸ್ಥಳಕ್ಕೆ ತಲುಪಿದರು. ಬಳಿಕ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು ಎಂದು ಅಧಿಕಾರಿ ಹೇಳಿದರು.



# ಮಗನ ಸಿನಿಮಾ ಹಿಟ್ ಆದ್ರೆ ಸಿಗರೇಟ್ ಬಿಡ್ತೀನಿ




ಬಾಲಿವುಡ್ ಮಿಸ್ಟರ್ ಪರ್ಫೆಕ್ಟ್‌ಗೆ ಈ ಮಧ್ಯೆ ಸಾಲು ಸಾಲು ಕಷ್ಟಗಳೇ ಎದುರಾಗ್ತಿವೆ. ಅವರ ಸಿನಿಮಾಗಳು ಬಾಕ್ಸ್ ಆಫೀಸ್‌ನಲ್ಲಿ ಹಿಟ್ ಆಗ್ತಿಲ್ಲ. ಈ ಹೊತ್ತಲ್ಲಿ ಆಮೀರ್ ಖಾನ್ ಮಗ ಜುನೈದ್ ಖಾನ್ ಬಾಲಿವುಡ್‌ಗೆ ಎಂಟ್ರಿ ಕೊಡ್ತಿದ್ದಾರೆ. ಈ ಚಿತ್ರದ ಹೆಸರು 'ಲವ್‌ಯಾಪ'. ಶ್ರೀದೇವಿ ಪುತ್ರಿ ಖುಷಿ ಕಪೂರ್ ನಾಯಕಿ. ಮಗನ ಚಿತ್ರ ಗೆಲ್ಲಲಿ ಅಂತ ಆಮೀರ್ ಖಾನ್ ಒಂದು ಮಾತು ಕೊಟ್ಟಿದ್ದಾರೆ.

ಮಾಧ್ಯಮ ವರದಿಗಳ ಪ್ರಕಾರ, ಮಗನ ಚಿತ್ರ ಗೆದ್ದರೆ ಸಿಗರೇಟ್ ಬಿಡ್ತೀನಿ ಅಂತ ಆಮಿರ್ ಹೇಳಿದ್ದಾರಂತೆ. 'ಲವ್‌ಯಾಪ' ಬಾಕ್ಸ್ ಆಫೀಸ್‌ನಲ್ಲಿ ಹಿಟ್ ಆದ್ರೆ, ಸ್ಮೋಕಿಂಗ್ ಬಿಡ್ತಾರೆ. ಈ ವಿಷಯವನ್ನು ಆಮೀರ್ ಆಪ್ತರು ಹೇಳಿದ್ದಾರೆ. ಕೆಲವು ದಿನಗಳ ಹಿಂದೆ ನಾನಾ ಪಾಟೇಕರ್ ಜೊತೆ ಮಾತನಾಡುವಾಗ ಆಮೀರ್ ತಮ್ಮ ಚಟಗಳ ಬಗ್ಗೆ ಹೇಳಿಕೊಂಡಿದ್ರು. 'ನಾನು ಹುಕ್ಕಾ ಸೇದುತ್ತೇನೆ. ಈಗ ಮದ್ಯಪಾನ ಬಿಟ್ಟಿದ್ದೀನಿ, ಆದರೆ ಒಂದು ಕಾಲದಲ್ಲಿ ನಾನು ರಾತ್ರಿಯೆಲ್ಲಾ ಕುಡಿಯುತ್ತಿದ್ದೆ. ನಿಲ್ಲಿಸಲು ಸಾಧ್ಯವಾಗುತ್ತಿರಲಿಲ್ಲ' ಅಂತ ಹೇಳಿದ್ದರು. ಈಗ ಮಗ ಜುನೈದ್ ಖಾನ್‌ಗಾಗಿ ಆಮೀರ್ ಈ ಚಟ ಬಿಡಲು ಸಿದ್ಧರಾಗಿದ್ದಾರೆ.

'ಲವ್‌ಯಾಪ' ಚಿತ್ರ 2025ರ ಫೆಬ್ರವರಿ 7 ರಂದು ಥಿಯೇಟರ್‌ಗಳಲ್ಲಿ ಬಿಡುಗಡೆಯಾಗಲಿದೆ. ಈ ಚಿತ್ರದಲ್ಲಿ ಜುನೈದ್ ಮತ್ತು ಖುಷಿ ಜೋಡಿಯನ್ನು ಜನ ಇಷ್ಟಪಡುತ್ತಿದ್ದಾರೆ. ಈ ಚಿತ್ರದ ಕಥೆ ಆಧುನಿಕ ಪ್ರೇಮಕಥೆಯಾಧಾರಿತವಾಗಿದೆ. ಜುನೈದ್, ಖುಷಿ ಜೊತೆಗೆ ಗ್ರುಷಾ ಕಪೂರ್, ಆಶುತೋಷ್ ರಾಣಾ, ತನ್ವಿಕಾ ಪಾರ್ಲಿಕರ್, ಹಾಸ್ಯನಟ ಕಿಕ್ ಷಾರದಾ ಕೂಡ ನಟಿಸಿದ್ದಾರೆ. ಆಮೀರ್ ಖಾನ್ 'ಲಾಲ್ ಸಿಂಗ್ ಚಡ್ಡಾ' ಚಿತ್ರ ನಿರ್ದೇಶಿಸಿದ್ದ ಅದ್ವೈತ್ ಚಂದನ್ ಈ ಚಿತ್ರಕ್ಕೆ ನಿರ್ದೇಶನ ಮಾಡಿದ್ದಾರೆ.


# ಸ್ಮಿತಾರನ್ನ ರಿಜೆಕ್ಟ್ ಮಾಡಿದ್ದ ನಿರ್ದೇಶಕ ಭಾರತಿರಾಜ

ಸಿಲ್ಕ್ ಸ್ಮಿತಾರನ್ನ ರಿಜೆಕ್ಟ್ ಮಾಡಿದ್ದಕ್ಕೆ ಕಾರಣ: 80, 90ರ ದಶಕದಲ್ಲಿ ಸಿಲ್ಕ್ ಸ್ಮಿತಾ ಅಂದ್ರೆ ಎಲ್ಲರಿಗೂ ಇಷ್ಟ. ಅವರ ನಟನೆ, ಗ್ಲಾಮರ್, ರೊಮ್ಯಾನ್ಸ್, ಡ್ಯಾನ್ಸ್ ಎಲ್ಲವೂ ಯುವಜನರ ಮನಸ್ಸು ಗೆದ್ದಿತ್ತು. ಹೀರೋಗಳಿಗಿಂತ ಕಡಿಮೆ ಇರಲಿಲ್ಲ ಅವರ ಕ್ರೇಜ್. ವಂಡಿಚಕ್ರಂ ಅವರ ಮೊದಲ ಸಿನಿಮಾ ಆದ್ರೂ, ಅದಕ್ಕೂ ಮೊದಲು ಡೈರೆಕ್ಟರ್ ಭಾರತಿರಾಜ ಅವರ ಸಿನಿಮಾದಲ್ಲಿ ನಟಿಸಬೇಕಿತ್ತು.



ವಿಜಯಲಕ್ಷ್ಮಿಯನ್ನ ಸಿಲ್ಕ್ ಸ್ಮಿತಾ ಅಂತ ಬದಲಾಯಿಸಿದ್ದು ವಂಡಿಚಕ್ರಂ ಸಿನಿಮಾ. ಗ್ಲಾಮರ್ ಪಾತ್ರಗಳಲ್ಲೇ ಹೆಚ್ಚಾಗಿ ಕಾಣಿಸಿಕೊಂಡ್ರೂ, ನಟಿಯಾಗಿ ಗುರುತಿಸಿಕೊಳ್ಳಲು ಕಾರಣವಾದದ್ದು ಅಲೈಗಲ್ ಓಯ್ವತಿಲ್ಲೈ ಸಿನಿಮಾ. ಇದು ಅವರ ಎರಡನೇ ಸಿನಿಮಾ. ಈ ಚಿತ್ರದ ಯಶಸ್ಸಿನ ನಂತರ ಇದೇ ರೀತಿಯ ಪಾತ್ರಗಳಲ್ಲಿ ನಟಿಸಿ ಮೆಚ್ಚುಗೆ ಗಳಿಸಿದರು.

ಆದ್ರೆ, ಗ್ಲಾಮರ್ ಪಾತ್ರಗಳು, ಡ್ಯಾನ್ಸರ್ ಆಗಿ ಹೆಚ್ಚು ಸಿನಿಮಾಗಳಲ್ಲಿ ನಟಿಸಿದ್ರು. ಕಡಿಮೆ ಸಮಯದಲ್ಲೇ ಸಿಲ್ಕ್ ಸ್ಮಿತಾ ಸಿನಿರಂಗದಲ್ಲಿ ಬೆಳೆದು, ದೊಡ್ಡ ಡೈರೆಕ್ಟರ್‌ಗಳ ಸಿನಿಮಾಗಳಲ್ಲಿ ನಟಿಸುವ ಅವಕಾಶ ಪಡೆದರು. ತಮಿಳು ಜೊತೆಗೆ ತೆಲುಗು, ಕನ್ನಡ, ಮಲಯಾಳಂ, ಹಿಂದಿ ಭಾಷೆಗಳಲ್ಲೂ ನಟಿಸಿದ್ದಾರೆ. ವಂಡಿಚಕ್ರಂ ಅವರ ಮೊದಲ ಸಿನಿಮಾ ಆದ್ರೂ, ಭಾರತಿರಾಜ ಅವರೇ ಅವರನ್ನ ಪರಿಚಯಿಸಬೇಕಿತ್ತು. ಭಾರತಿರಾಜ ಪರಿಚಯಿಸಬೇಕಿದ್ದ ಸಿನಿಮಾ ಪುತಿಯ ವಾರ್ಪುಗಲ್. ಈ ಚಿತ್ರದಲ್ಲಿ ಹೂವು ಮಾರುವ ಹುಡುಗಿಯ ಪಾತ್ರಕ್ಕೆ ಸಿಲ್ಕ್ ಸ್ಮಿತಾರನ್ನ ಭಾರತಿರಾಜ ಆಯ್ಕೆ ಮಾಡಿ, ಫೋಟೋ ಶೂಟ್ ಕೂಡ ಮಾಡಿದ್ರು. ಆದ್ರೆ, ಚಿಕ್ಕ ಮಗುವಿನಂತೆ ಕಾಣಿಸ್ತಿದ್ದಾರೆ ಅಂತ ರಿಜೆಕ್ಟ್ ಮಾಡಿದ್ರು. ಈ ಸಿನಿಮಾಗೆ ಅವರನ್ನ ರಿಜೆಕ್ಟ್ ಮಾಡಿದ ಭಾರತಿರಾಜ, ಅವರ ಕಣ್ಣುಗಳು ಆಕರ್ಷಕವಾಗಿ, ಆಯಸ್ಕಾಂತದಂತೆ ಇವೆ ಅಂತ ವರ್ಣಿಸಿದ್ದಾರೆ. ನಂತರ ತಮ್ಮ ಅಲೈಗಲ್ ಓಯ್ವತಿಲ್ಲೈ ಸಿನಿಮಾಗೆ ಸಿಲ್ಕ್ ಸ್ಮಿತಾರನ್ನು ಹುಡುಕಿದ್ರು. ಮಣಿವಣ್ಣನ್, ಮನೋಬಾಲ ಮೂಲಕ ಸಿಲ್ಕ್ ಸ್ಮಿತಾರನ್ನ ಕರೆಸಿದ್ರು. ಕೊನೆಗೆ ಭಾರತಿರಾಜ ಅಲೈಗಲ್ ಓಯ್ವತಿಲ್ಲೈ ಸಿನಿಮಾದಲ್ಲಿ ಸಿಲ್ಕ್ ಸ್ಮಿತಾರನ್ನ ನಟಿಸುವಂತೆ ಮಾಡಿದ್ರು. ಮೊದಲು ಸಿಲ್ಕ್ ಸ್ಮಿತಾರನ್ನ ರಿಜೆಕ್ಟ್ ಮಾಡಿದ್ದ ಭಾರತಿ ರಾಜ ಆನಂತರ ಅಲೈಗಲ್ ಓಯ್ವತಿಲ್ಲೈ ಚಿತ್ರಕ್ಕೆ ಸಿಲ್ಕ್ ಸ್ಮಿತಾರನ್ನ ಆರಿಸಿಕೊಂಡರು. ಆಗಲೇ ಸಿಲ್ಕ್ ಪಾಪ್ಯುಲಾರಿಟಿ ತುಂಬಾ ಹೆಚ್ಚಾಗಿತ್ತು.





# ಎಂಗೇಜ್‌ಮೆಂಟ್ ಮಾಡಿಕೊಂಡ 'ಸ್ಪೈಡರ್ ಮ್ಯಾನ್' ಜೋಡಿ

ತೆರೆಮೇಲೆ ನಟಿಸುತ್ತಲೇ ಪ್ರೀತಿ ಮೂಡಿದ ಅನೇಕ ಉದಾಹರಣೆ ಇದೆ. ಸ್ಯಾಂಡಲ್ ವುಡ್, ಟಾಲಿವುಡ್, ಬಾಲಿವುಡ್‌ನಲ್ಲಿ ಮಾತ್ರವಲ್ಲ ಹಾಲಿವುಡ್‌ನಲ್ಲೂ ಈ ರೀತಿ ಮದುವೆಗಳು ನಡೆದ ಉದಾಹರಣೆ ಇದೆ. ಇದಕ್ಕೆ ಹೊಸ ಸೇರ್ಪಡೆ 'ಸ್ಪೈಡರ್ ಮ್ಯಾನ್' ಸಿನಿಮಾ ಜೋಡಿ. ಹಾಲಿವುಡ್‌ನ ಸೂಪರ್ ಹಿಟ್ ಸಿನಿಮಾ ಎನಿಸಿಕೊಂಡಿರುವ 'ಸ್ಪೈಡರ್ ಮ್ಯಾನ್' ಚಿತ್ರದ ಕಲಾವಿದರಾದ ಟಾಮ್ ಹಾಲೆಂಡ್ ಹಾಗೂ ಜೆಂಡೇಯಾ ಈಗ ನಿಶ್ಚಿತಾರ್ಥ ಮಾಡಿಕೊಂಡಿದ್ದಾರೆ. ಈ ವಿಚಾರ ಕೇಳಿ ಅವರ ಅಭಿಮಾನಿಗಳು ಖುಷಿಪಟ್ಟಿದ್ದಾರೆ. ಇವರ ಮಧ್ಯೆ ಸೆಟ್‌ನಲ್ಲೇ ಪ್ರೀತಿ ಮೂಡಿತ್ತು ಎಂದು ಹೇಳಲಾಗಿದೆ.



ಇತ್ತೀಚೆಗೆ 82ನೇ ಸಾಲಿನ 'ಗೋಲ್ಡನ್ ಗ್ಲೋಬ್ಸ್' ಅವಾರ್ಡ್ ಕಾರ್ಯಕ್ರಮ ನಡೆದಿದೆ. ಈ ವೇಳೆ ಜೆಂಡೇಯಾ ಅವರು ಕಾರ್ಯಕ್ರಮಕ್ಕೆ ಆಗಮಿಸಿದ್ದರು. ಈ ವೇಳೆ ಅವರ ಕೈನಲ್ಲಿ ಡೈಮಂಡ್ ರಿಂಗ್ ಕಾಣಿಸಿತ್ತು. ಈ ಬಗ್ಗೆ ಅವರಿಗೆ ಪ್ರಶ್ನೆ ಮಾಡಿದಾಗ ಅವರು ಉತ್ತರಿಸೋಕೆ ನಿರಾಕರಿಸಿದ್ದರು. ಈಗ ಇವರ ನಿಶ್ಚಿತಾರ್ಥದ ಸುದ್ದಿ ಹೊರ ಬಿದ್ದಿದೆ.

ಟಾಮ್ ಹಾಲೆಂಡ್ ಹಾಗೂ ಜೆಂಡೇಯಾ 2021ರಿಂದ ಒಟ್ಟಾಗಿ ಇದ್ದಾರೆ. ಅವರು ಒಟ್ಟಾಗಿ ಡೇಟಿಂಗ್ ಮಾಡುವುದರ ಜೊತೆಗೆ ಅನೇಕ ಕಡೆಗಳಲ್ಲಿ ಒಟ್ಟಾಗಿ ಸುತ್ತಾಡಿದ್ದೂ ಇದೆ. ಅನೇಕ ಬಾರಿ ಇಬ್ಬರೂ ತಮ್ಮ ಪ್ರೀತಿ ಬಗ್ಗೆ ಪರೋಕ್ಷವಾಗಿ ಒಪ್ಪಿಕೊಂಡಿದ್ದು ಇದೆ. ಅವರು ಪ್ರೀತಿ ವಿಚಾರವನ್ನು ಮುಂದೊಂದು ದಿನ ಅಧಿಕೃತ ಮಾಡುವುದಾಗಿ ಹೇಳಿದ್ದರು.

'ಸ್ಪೈಡರ್ ಮ್ಯಾನ್: ನೋ ವೇ ಹೋಂ' ಚಿತ್ರದಲ್ಲಿ ಟಾಮ್ ಹಾಲೆಂಡ್ ಹಾಗೂ ಜೆಂಡೇಯಾ ಒಟ್ಟಾಗಿ ನಟಿಸಿದ್ದರು. ಅವರು ಮಾರ್ವೆಲ್ ಸಿನಿಮಾದಲ್ಲಿ ಮತ್ತೆ ಒಟ್ಟಾಗಿ ನಟಿಸಲಿದ್ದಾರೆ. ಕ್ರಿಸ್ಟೋಫರ್ ನೋಲನ್ ನಿರ್ದೇಶನದ ಚಿತ್ರ ಇದಾಗಿದ್ದು, 2026ರಲ್ಲಿ ರಿಲೀಸ್ ಆಗಲಿದೆ. ಇದು ಇತಿಹಾಸದ ಕಥೆ ಹೊಂದಿದೆ.

ವಯಸ್ಸಿನ ಅಂತರದ ಬಗ್ಗೆ ನೋಡುವುದಾದರೆ ಇಬ್ಬರ ಮಧ್ಯೆ ಕೆಲವೇ ತಿಂಗಳ ಅಂತರ ಇದೆ. ಟಾಲ್ ಹಾಲೆಂಡ್ ಜನಿಸಿದ್ದು 1996ರ ಜೂನ್ 1ರಂದು. ಜೆಂಡೇಯಾ ಅದೇ ವರ್ಷ ಸೆಪ್ಟೆಂಬರ್ 1ರಂದು ಜನಿಸಿದರು. ಟಾಮ್‌ಗಿಂತ ಜೆಂಡೇಯಾ ಕೇವಲ ಮೂರು ತಿಂಗಳು ಕಿರಿಯವಳು. ಅಂದರೆ ಇಬ್ಬರದ್ದೂ ಒಂದೇ ವಯಸ್ಸು ಎನ್ನಬಹುದು. ಇವರ ಮದುವೆ ಯಾವಾಗ ಎನ್ನುವ ಪ್ರಶ್ನೆ ಅಭಿಮಾನಿಗಳಲ್ಲಿ ಮೂಡಿದೆ.



# ಮತ್ತೆ ಬಂದ 'ಹೆಬ್ಬಾ ಪಟೇಲ್'

2014ರಲ್ಲಿ 'ಅಧ್ಯಕ್ಷ' ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಕಾಲಿಟ್ಟ ಹೆಬ್ಬಾ ಪಟೇಲ್ ಒಂದು ಕನ್ನಡ ಸಿನಿಮಾ ಮಾಡಿದ್ದರೂ ಹೆಚ್ಚಾಗಿ ತೆಲುಗು ಮತ್ತು ತಮಿಳು ಸಿನಿಮಾಗಳಲ್ಲಿ ನಟಿಸಿದ್ದಾರೆ.

ಮುಂಬೈನಲ್ಲಿ ಹುಟ್ಟಿ ಬೆಳೆದ ಹೆಬ್ಬಾ ಪಾಟೇಲ್ ಕನ್ನಡ ಮಾತನಾಡುವ ಮುಸ್ಲಿಂ ಕುಟುಂಬಕ್ಕ ಸೇರಿದ್ದವರು. ಆದರೆ ಕೆಲವರು ಹೆಬ್ಬಾ ಗುಜರಾತಿ ಎಂದುಕೊಂಡಿದ್ದಾರೆ.

ಹಾಸ್ಯ ನಟ ಶರಣ್ ಜೊತೆ ಅಧ್ಯಕ್ಷ ಸಿನಿಮಾದಲ್ಲಿ ನಟಿಸಿದ ನಂತರ ಯಾವುದೇ ಕನ್ನಡ ಸಿನಿಮಾಗಳಲ್ಲಿ ಕಾಣಿಸಿಕೊಳ್ಳಲಿಲ್ಲ. ಹೀಗಾಗಿ ಕನ್ನಡ ಸಿನಿಮಾ ಮಾಡುತ್ತಿಲ್ಲ ಎಂದು ಅಭಿಮಾನಿಗಳು ಬೇಸರ ವ್ಯಕ್ತ ಪಡಿಸಿದ್ದರು.

ಇದೀಗ ಗುರು ದೇಶಪಾಂಡೆ ನಿರ್ದೇಶನ ಮಾಡುತ್ತಿರುವ ಚಿತ್ರದ ಮೂಲಕ ಹೆಬ್ಬಾ ಪಾಟೇಲ್ ಕನ್ನಡಕ್ಕೆ ಕಮ್ ಬ್ಯಾಕ್ ಮಾಡಲಿದ್ದಾರೆ ಅನ್ನೋ ಸುದ್ದಿ ಹರಿದಾಡುತ್ತಿದೆ. ಗುರು ದೇಶಪಾಂಡೆ ನಿರ್ಮಾಣದ ಜಿ ಸಿನಿಮಾಸ್ ಹಾಗೂ ಸೆವೆನ್ ಸ್ಟಾರ್ ಸ್ಟುಡಿಯೋ ಮತ್ತು ಬಿ ಎಂ ಗಿರಿರಾಜ್ ನಿರ್ದೇಶನ 'ರಾಮರಸ' ಚಿತ್ರದಲ್ಲಿ ಹೆಬ್ಬಾ ಪಾಟೇಲ್ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಸಖತ್ ಆಕ್ಟಿವ್ ಆಗಿರುವ ಹೆಬ್ಬಾ ಪಾಟೇಲ್ ಸಿನಿಮಾಗಳಲ್ಲಿ ಅವಕಾಶ ಕಡಿಮೆ ಆದಾಗ ಓಟಿಟಿ ಲೋಕಕ್ಕೆ ಕಾಲಿಟ್ಟರು. ಅಲ್ಲದೆ ಸದ್ಯ ಹೆಬ್ಬಾ ಈಗ ಫಿಟ್ನೆಸ್ ಫ್ರೀಕ್ ಕೂಡ ಹೌದು.

# 'ಪರಿಸ್ಥಿತಿಯನ್ನು ಮತ್ತಷ್ಟು ಕೆಟ್ಟದಾಗಿ ಮಾಡಿದ್ದಾರೆ'

ಬಾಲಿವುಡ್ ನಟಿ ದೀಪಿಕಾ ಪಡುಕೋಣೆ ಅವರು ಮಾನಸಿಕ ಆರೋಗ್ಯಕ್ಕೆ ಹೆಚ್ಚು ಪ್ರಾಮುಖ್ಯತೆ ನೀಡುವವರು. ಏನೇ ಆದರೂ ಮಾನಸಿಕ ಆರೋಗ್ಯ ಚೆನ್ನಾಗಿರಬೇಕು ಎಂದು ಹೇಳುತ್ತಾ ಬಂದಿದ್ದಾರೆ. ತಮಗೆ ಖಿನ್ನತೆ ಆದಾಗ ಅದನ್ನು ಓಪನ್ ಆಗಿ ಹೇಳಿಕೊಂಡು ಅನೇಕರಲ್ಲಿ ಜಾಗೃತಿ ಮೂಡಿಸಿದ್ದರು.

'ಭಾನುವಾರವೂ ನಿಮ್ಮಿಂದ ಕೆಲಸ ಮಾಡಿಸಲು ಸಾಧ್ಯವಾಗುತ್ತಿಲ್ಲದಿರುವುದಕ್ಕೆ ನನಗೆ ವಿಷಾದ ಇದೆ. ನಾನು ಭಾನುವಾರವೂ ಕೆಲಸ ಮಾಡುತ್ತೇನೆ. ನೀವೂ ಕೂಡ ಭಾನುವಾರ ಕೆಲಸ ಮಾಡಿದರೆ ನನಗೆ ಹೆಚ್ಚು ಖುಷಿಯಾಗುತ್ತದೆ. ಪ್ರತಿ ಉದ್ಯೋಗಿ ವಾರಕ್ಕೆ 90 ಗಂಟೆ ಕೆಲಸ ಮಾಡಬೇಕು' ಎಂದು ಸುಬ್ರಮಣ್ಯನ್ ಅವರು ಅಭಿಪ್ರಾಯಪಟ್ಟಿದ್ದಾರೆ. ಇದನ್ನು ದೀಪಿಕಾ ಟೀಕಿಸಿದ್ದಾರೆ. 'ಅವರು ಪರಿಸ್ಥಿತಿಯನ್ನು ಮತ್ತಷ್ಟು ಕೆಟ್ಟದಾಗಿ ಮಾಡಿದ್ದಾರೆ' ಎಂದಿದ್ದಾರೆ. ವಾರಕ್ಕೆ 90 ಗಂಟೆ ಕೆಲಸ ಮಾಡುವುದು ಎಂದರೆ ಅದು ಸುಲಭದ ಮಾತಲ್ಲ. ಈ ರೀತಿ ಮಾಡಿದಾಗ ವ್ಯಕ್ತಿಯ ಆರೋಗ್ಯದ ಮೇಲೆ, ಮಾನಸಿಕ ಆರೋಗ್ಯದ ಮೇಲೆ ಪರಿಣಾಮ ಬೀಳುತ್ತದೆ. ಆ ರೀತಿ ಆಗಬಾರದು ಎಂದು ಅನೇಕರು ಅಭಿಪ್ರಾಯಕೊಟ್ಟಿದ್ದಾರೆ. ಈ ವಿಚಾರದಲ್ಲಿ ದೀಪಿಕಾ ಧ್ವನಿ ಎತ್ತಿದ್ದು ಖುಷಿ ಆಗಿದೆ. ಈ ಮೊದಲು ಕೂಡ ಸುಬ್ರಮಣ್ಯನ್ ಅವರು 'ಭಾನುವಾರವೂ ಉದ್ಯೋಗಿಗಳು ಕೆಲಸ ಮಾಡಬೇಕು' ಎಂದಿದ್ದರು. ಆ ಸಂದರ್ಭದಲ್ಲೂ ದೀಪಿಕಾ ಪ್ರತಿಕ್ರಿಯಿಸಿದ್ದರು. 'ಇಷ್ಟು ದೊಡ್ಡ ಪೋಸ್ಟ್‌ನಲ್ಲಿ ಇರುವವರು ಈ ರೀತಿಯ ಹೇಳಿಕೆ ನೀಡುವುದನ್ನು ನೋಡಿದರೆ ಶಾಕ್ ಆಗುತ್ತದೆ' ಎಂದು ಹೇಳಿದ್ದರು. ಭಾನುವಾರವೂ ಕೆಲಸ ಮಾಡಬೇಕು ಎಂದಿದ್ದಲ್ಲದೆ ಸುಬ್ರಮಣ್ಯಮ್ ಅವರು, 'ಉದ್ಯೋಗಿಗಳು ಮನೆಯಲ್ಲಿದ್ದುಕೊಂಡು ಏನು ಮಾಡುತ್ತಾರೆ' ಎಂದು ಪ್ರಶ್ನೆ ಮಾಡಿದ್ದರು.

ದೀಪಿಕಾ ಪಡುಕೋಣೆ ಅವರು ಈ ವಿಚಾರವಾಗಿ ಧ್ವನಿ ಎತ್ತಿದ್ದು ಅನೇಕರಿಗೆ ಖುಷಿ ನೀಡಿದೆ. ಬಾಲಿವುಡ್‌ನ ಎಲ್ಲರೂ ಈ ರೀತಿಯ ವಿಚಾರ ಬಂದಾಗ ಮುಂದೆ ಬಂದು ಕೆಲಸ ಮಾಡಬೇಕು ಎಂದು ಹೇಳಿದ್ದರು.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-47 Email-mussanje2010@gmail.com, Phone: 9448074878